ಸಂಪುಟ: 06 ಸಂಚಿಕೆ: 161 ಪುಟಗಳು: 08 ಭಾನುವಾರ 23 ಆಗಸ್ಟ್ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಉತ್ತಮ ಪರಿಣಾಮಕ್ಕೆ ಕಷ್ಟಪಡುವುದು ಕಡ್ಡಾಯ. ಹಾಗಂತ ಕಷ್ಟಪಟ್ಟಾಗಲೆಲ್ಲ ಪರಿಣಾಮ ಒಳ್ಳೆಯದೇ ಎನ್ನಲಾಗದು. ಪ್ರಯತ್ನ ಜಾರಿಯಲ್ಲಿರಲಿ!

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮುಂದಿನ ದಿನಗಳಲ್ಲಿ ಪಿಯು ವಿದ್ಯಾರ್ಥಿಗಳಿಗೂ ಉಚಿತ ನೋಟ್‌ಬುಕ್ ಮಧು ಬಂಗಾರಪ್ಪ

• ಉದಯವಾಹಿನಿ, ಬೆಂಗಳೂರು

ಬಜೆಟ್‌ನಲ್ಲಿ ಪ್ರಕಟಿಸಿದಂತೆಯೇ ಪ್ರಸ್ತುತ ಶೈಕ್ಷಣಿಕ ಸಾಲಿನಿಂದ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯ ಪುಸ್ತಕ ವಿತರಿಸಲಾಗಿದೆ. ಮುಂದಿನ ದಿನಗಳಲ್ಲಿ ನೋಟ್‌ಬುಕ್‌ಗಳನ್ನು ಕೂಡ ಉಚಿತವಾಗಿ ವಿತರಿಸುವ ಉದ್ದೇಶವಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ನಗರದ ಸೈನ್ಸ್ ಮೈದಾನದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ ನೂತನ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಸರ್ಕಾರಿ ಪದವಿ ಪೂರ್ವ ಕಾಲೇಜಿನ 'ಕಲಾಂ ಸೆಂಟರ್'ಗೆ ಭೇಟಿ ನೀಡಿದ ಸಚಿವರು, ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ್ದು, ಈ ಸಂದರ್ಭದಲ್ಲಿ ಈ ಘೋಷಣೆ ಮಾಡಿದ್ದಾರೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ನಮ್ಮ ಕರ್ತವ್ಯ. ಆದರೆ ಎಲ್ಲವನ್ನೂ ಒಮ್ಮೆಲೆ ಮಾಡಲಾಗುವುದಿಲ್ಲ. ಹಂತ ಹಂತವಾಗಿ ರಾಜ್ಯದ ಎಲ್ಲಾ ಶಾಲೆ-ಪಿಯು ಕಾಲೇಜುಗಳಲ್ಲಿಯೂ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಮಾಡುತ್ತೇವೆ. ಇದಕ್ಕೆ ಅಗತ್ಯ ಸೌಕರ್ಯಗಳನ್ನು ಒದಗಿಸುವುದಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ. ವಿದ್ಯಾರ್ಥಿಗಳೊಂದಿಗೆ ಬೆರೆತು ಅವರ ಮಾತುಗಳನ್ನು ಕೇಳಿಸಿಕೊಂಡ ಸಚಿವರು, ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆ, ಕಾಲೇಜಿನಲ್ಲಿ ತಾವು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಹೇಳಿಕೊಂಡಾಗ ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸ್ಥಳದಲ್ಲೇ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಕ್ಕಳೊಂದಿಗೆ ಸಂವಾದ ನಡೆಸುವುದು ನನಗೆ ಯಾವಾಗಲೂ ಖುಷಿಯ ವಿಷಯ. ನಾವು ನಿರೀಕ್ಷಿಸದೇ ಇರುವ ಪ್ರಶ್ನೆ, ಸಮಸ್ಯೆಗಳನ್ನು ಅವರು ನಮ್ಮ ಮುಂದಿಡುತ್ತಾರೆ.

## ವಾಲ್ಮೀಕಿ ನಿಗಮದಿಂದ ಹಿಡಿದು ರಸ್ತೆ ಗುಂಡಿ ಮುಚ್ಚೋಕೂ ಕೋಟ್ಯಂತರ ಹಣ ಲೂಟಿ ಛಲವಾದಿ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ನಿಗಮದಿಂದ ಆರಂಭವಾಗಿ ಬೆಂಗಳೂರು ರಸ್ತೆ ಗುಂಡಿಗಳನ್ನ ತುಂಬಲು ಲಕ್ಷಾಂತರ ಕೋಟಿವರೆಗೆ ಲೂಟಿ ನಡೆಯುತ್ತಿದೆ. ಸಿಕ್ಕ ಸಿಕ್ಕ ಕಡೆಯಲ್ಲಿ ಲೂಟಿ ಮಾಡುವ ಕಾಂಗ್ರೆಸ್ ಭ್ರಷ್ಟಾಚಾರ ಮಾಡದೇ ಬದುಕುವುದೇ ಇಲ್ಲ ಅಂತ ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ಕಚೇರಿಯಲ್ಲಿ ಮಾತಾಡಿದ ಅವರು, ಕಾಂಗ್ರೆಸ್ ಸರ್ಕಾರ ಹಾಗೂ ಅಧಿಕಾರಿಗಳು ಲೂಟಿ ಮಾಡುತ್ತಿದ್ದಾರೆ. ಅಧಿಕಾರಿಗಳು ಲೂಟಿ ಮಾಡಲು ಸರ್ಕಾರವೇ ಅವಕಾಶ ನೀಡುತ್ತಿದೆ. ರಾಜ್ಯದಲ್ಲಿ ಭ್ರಷ್ಟಾಚಾರ ಸಂಪೂರ್ಣವಾಗಿ ತಾಂಡವವಾಡುತ್ತಿದೆ. ವಾಲ್ಮೀಕಿ ನಿಗಮದಿಂದ ಆರಂಭವಾಗಿ ಬೆಂಗಳೂರು ರಸ್ತೆ ಗುಂಡಿಗಳನ್ನ ತುಂಬಲು ಲಕ್ಷಾಂತರ ಕೋಟಿವರೆಗೆ ಲೂಟಿ ನಡೆಯುತ್ತಿದೆ. ಕಸದಲ್ಲಿ ಕಂಟ್ರಾಕ್ಟರ್ ಲೂಟಿ ಮಾಡ್ತಿದ್ದಾರೆ. 50 ಕೋಟಿ, 60 ಕೋಟಿಯನ್ನು ಅವರದೇ ಕಂಪನಿಗಳಿಗೆ ಹಾಕಿಕೊಂಡಿದ್ದಾರೆ ಅಂತ ಆರೋಪಿಸಿದ್ದಾರೆ.

## 66 ಬಾರಿ ಶೂಟೌಟ್ ಆಗಿದೆ ನಮ್ಮ ಅಧಿಕಾರಿಗಳದ್ದೇ ತಪ್ಪಿದ್ರೆ, ಶಿಸ್ತುಕ್ರಮ ಗ್ಯಾರಂಟಿ

• ಉದಯವಾಹಿನಿ, ಬೆಂಗಳೂರು

ಈ ಹಿಂದೆ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರ ಕಾಲದಲ್ಲಿ 4 ಶೂಟೌಟ್ ಆಗಿತ್ತು. ಮೂರು ಜನ ಮೃತಪಟ್ಟಿದ್ದರು. 2011 ರಿಂದ 2026ರವರೆಗೆ 300 ಕ್ಕೂ ಹೆಚ್ಚು ಪ್ರಕರಣಗಳು ಚಾಮರಾಜನಗರ ವಿಭಾಗದಲ್ಲೇ ಆಗಿವೆ. ಸುಮಾರು 66 ಬಾರಿ ಶೂಟೌಟ್ ಪ್ರಕರಣಗಳು ಆಗಿವೆ. ಈ ರೀತಿ ಪದೇ ಪದೇ ಆಗ್ತಾ ಇರುತ್ತೆ ಎಂದು ಅರಣ್ಯ ಸಚಿವ ರಾಮಲಿಂಗಾ ರೆಡ್ಡಿ ಮಾಹಿತಿ ನೀಡಿದರು. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚಾ.ನಗರದಲ್ಲಿ ಕಳ್ಳಬೇಟೆ ಶಿಬಿರಗಳಿಂದ ಸಾಕಷ್ಟು ಮನೆಗಳಿಗೆ ಹಾನಿಯಾಗಿದೆ.

ಹಾನಿಮಾಡಿದವರು ಯಾರೆಂಬುದನ್ನ ಪೊಲೀಸರು ಗುರುತಿಸಿದ್ದಾರೆ. ಅವ್ರು ಹಿಂದಿನ ಕೇಸ್ ಗಳಲ್ಲಿ ಇದ್ದಂಥವರು. ಆದರೂ ರಿಪೋರ್ಟ್‌ನಲ್ಲಿ ಏನು ಬಂದಿದೆ ಅದರಂತೆ ಕ್ರಮ ತೆಗೆದುಕೊಳ್ಳುತ್ತೇವೆ. ನಮ್ಮ ಅಧಿಕಾರಿಗಳದ್ದು ಏನಾದರೂ ತಪ್ಪಿದ್ದರೆ, ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

## ಮಳೆ ಕೊರತೆಯಿಂದ ರೈತ ಕಂಗಾಲು

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಮಳೆ ಕೊರತೆಯಿಂದಾಗಿ ಬರ ಆವರಿಸಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇನ್ನು ಈ ಬಗ್ಗೆ ಕೃಷಿ ಸಚಿವ ನರೇಂದ್ರಸ್ವಾಮಿ ಮಾತನಾಡಿದ್ದು, ರಾಜ್ಯದ ರೈತರ ಬೆಳೆ , ನೀರಿನ ಲಭ್ಯತೆ ವಿಚಾರವಾಗಿ ಸಭೆ ಆಗಿದೆ. ಯಾವ ಬೆಳೆ ಹಾಕಿದ್ರೆ ರೈತರಿಗೆ ಅನುಕೂಲ ಎನ್ನುವ ಚರ್ಚೆಯಾಗಿದೆ. ಸಂಕಷ್ಟ ಪರಿಸ್ಥಿತಿಯಲ್ಲಿ ಕೇಂದ್ರದಿಂದ ಏನು ಸಹಾಯ ಪಡೆಯಬಹುದು. ಬರದಲ್ಲಿ ರೈತರ ಬದುಕನ್ನು ಉಳಿಸಿಕೊಳ್ಳಬೇಕು. ರೈತರ ಬಿತ್ತನೆ ಎಷ್ಟಾಗಿದೆ, ಬೆಳೆ ಹಾನಿ ಎಷ್ಟಾಗಿದೆ ಎಂದು ಕಂದಾಯ ಇಲಾಖೆ ಮುಖಾಂತರ ಕೇಂದ್ರಕ್ಕೆ ವರದಿ ಕಳುಹಿಸಲಾಗಿದೆ. ಈ ತಿಂಗಳ ಕೊನೆ ತನಕ ಏನು ಮಾಡಲು ಆಗುವುದಿಲ್ಲ. ಬಳಿಕ ಬರ ಘೋಷಣೆ ಮಾಡುವ ಬಗ್ಗೆ ತೀರ್ಮಾನವಾಗಲಿದೆ ಎಂದು ಸ್ಪಷ್ಟಪಡಿಸಿದರು. ಕೃಷಿಕಾರ್ಮಿಕ, ಕೂಲಿ ಕಾರ್ಮಿಕರ ವಿಚಾರವಾಗ ಚರ್ಚೆಯಾಗಿದೆ. ಬರ ಘೋಷಣೆ ಮಾಡುವುದು ಕೇಂದ್ರ, ಪೂರಕ ದಾಖಲೆ ಒದಗಿಸುವುದು ರಾಜ್ಯ ಸರ್ಕಾರ ಎಂದಿದ್ದಾರೆ.

# ಗ್ರಾಮೀಣ ತರಗತಿಗಳಿಂದ ಜಾಗತಿಕ ನಾವೀನ್ಯತೆವರೆಗೆ: ಬೆಂಗಳೂರಿನಲ್ಲಿ 'ಕಿಯೋ ಎಐ ಪಿಸಿ' ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ವಿದ್ಯಾರ್ಥಿಗಳಲ್ಲಿ ವಿಶೇಷವಾಗಿ ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ ಕಲಿಯುವವರಲ್ಲಿ ತಂತ್ರಜ್ಞಾನದ ಬಳಕೆಯನ್ನು ವಿಸ್ತರಿಸಲು ಅಭಿವೃದ್ಧಿಪಡಿಸಿರುವ ಕೈಗೆಟುಕುವ ದರದ, ಕೃತಕ ಬುದ್ಧಿಮತ್ತೆ-ಸಿದ್ಧ ಕಂಪ್ಯೂಟರ್ 'ಕಿಯೋ ಎಐ ಪಿಸಿ 2026' ಅನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಲೋಕಾರ್ಪಣೆಗೊಳಿಸಿದರು. ಈ ವೇಳೆ ಸಿಎಂ ಡಿಕೆಶಿ ಮಾತನಾಡಿ, ಇವತ್ತು ನಾವು ಕೇವಲ ಒಂದು ಸಾಧನವನ್ನು ಮಾತ್ರ ಬಿಡುಗಡೆ ಮಾಡುತ್ತಿಲ್ಲ, ಕರ್ನಾಟಕದ ಪ್ರತಿ ಮಗು, ಮೂಲೆಮೂಲೆಯ ಹಳ್ಳಿಗಳಿಂದ ಹಿಡಿದು ನಗರ ಕೇಂದ್ರಗಳವರೆಗೆ, ಕಲಿಯಲು ಮತ್ತು ಭವಿಷ್ಯವನ್ನು ರೂಪಿಸಲು ಸಹಾಯ ಮಾಡುವ ಕನಸಿಗೆ ಜೀವ ತುಂಬುತ್ತಿದ್ದೇವೆ ಎಂದು ತಿಳಿಸಿದರು.

ಸರ್ಕಾರವು ಆರಂಭದಲ್ಲಿ ಸರ್ಕಾರಿ ಶಾಲೆಗಳಿಗೆ 1,000 ಗಳನ್ನು ಒದಗಿಸುತ್ತದೆ ಮತ್ತು ರಾಜ್ಯದಲ್ಲಿ ಅಂತಹ ಪ್ರತಿಯೊಂದು ಶಾಲೆಗೆ ಈ ಸೌಲಭ್ಯವನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. ಸರ್ಕಾರಿ ಶಾಲೆಗಳಲ್ಲಿನ ತಂತ್ರಜ್ಞಾನವು ಐಷಾರಾಮಿ ಅಲ್ಲ. ಆದರೆ ಸಮಾನತೆ, ಅವಕಾಶ ಮತ್ತು ಬೆಳವಣಿಗೆಗೆ ಅಡಿಪಾಯವಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು. ಒಂದು ಮಗುವಿನ ಪಿನ್ ಕೋಡ್ ಎಂದಿಗೂ ತಂತ್ರಜ್ಞಾನ ಮತ್ತು ಅವಕಾಶಕ್ಕೆ ಅಡ್ಡಿಯಾಗಬಾರದು ಎಂದ ಸಿಎಂ ಇಂದು ಕಿಯೋ ಬಳಸುವ ಗ್ರಾಮೀಣ ವಿದ್ಯಾರ್ಥಿಯು ನಾಳಿನ ನಾವೀನ್ಯಕಾರ, ಉದ್ಯಮಿ ಅಥವಾ ಸಮಸ್ಯೆ ಪರಿಹಾರಕನಾಗಬಹುದು ಎಂದು ಅಭಿಪ್ರಾಯಪಟ್ಟರು. ಗ್ರಾಮೀಣ ಶಿಕ್ಷಣ ಮತ್ತು ವಿದ್ಯಾರ್ಥಿಗಳ ಅಭಿವೃದ್ಧಿಯತ್ತ ನಿಧಿಗಳನ್ನು ವಿನಿಯೋಗಿಸುವ ಮೂಲಕ, ಪ್ರತಿಯೊಂದು ಸರ್ಕಾರ ತಲುಪಲು ಕೈಜೋಡಿಸುವಂತೆ ಸಿಎಂ ಉದ್ಯಮ ಪಾಲುದಾರರು ಮತ್ತು ಸಿಎಸ್‌ಆರ್ ಸಂಸ್ಥೆಗಳಿಗೆ ಮನವಿ ಮಾಡಿದರು. ಕರ್ನಾಟಕದ ವಿದ್ಯಾರ್ಥಿಗಳು ಎಐ ಬೆಳವಣಿಗೆಯನ್ನು ಕೇವಲ ವೀಕ್ಷಿಸಬಾರದು, ಬದಲಾಗಿ ಅದನ್ನು ಕಲಿಯಬೇಕು, ಬಳಸಬೇಕು ಮತ್ತು ಅದರೊಂದಿಗೆ ಹೊಸತುಗಳನ್ನು ಸೃಷ್ಟಿಸಬೇಕು ಎಂದರು. ಈ ವೇಳೆ ಕರ್ನಾಟಕದ ತಾಂತ್ರಿಕ ಯಾನವನ್ನು ಸ್ಮರಿಸಿದ ಸಿಎಂ, ರಾಜ್ಯದ ಬೆಳವಣಿಗೆಗೆ ಬುನಾದಿ ಹಾಕಿದ್ದಕ್ಕಾಗಿ ಮಾಜಿ ಮುಖ್ಯಮಂತ್ರಿಗಳಾದ ಡಿ.ದೇವರಾಜ್ ಅರಸ್ ಮತ್ತು ಎಸ್.ಎಂ. ಕೃಷ್ಣ ಅವರನ್ನು ಸ್ಮರಿಸಿದರು. 1978ರಲ್ಲಿ ಸಂಸ್ಥೆಯು ಅಭಿವೃದ್ಧಿಪಡಿಸಿದ ಎಲೆಕ್ಟ್ರಾನಿಕ್ ಸಿಟಿಯ ಕಲ್ಪನೆಯನ್ನು ದೇವರಾಜ್ ಅರಸ್ ನೀಡಿದ್ದರು ಎಂದ ಅವರು, ಎಸ್.ಎಂ. ಕೃಷ್ಣ ಅವರು ರಾಜ್ಯದ ತಾಂತ್ರಿಕ ಮೂಲಸೌಕರ್ಯವನ್ನು ಬಲಪಡಿಸಿದರು ಎಂದು ತಿಳಿಸಿದರು.




### ವಿದ್ಯಾರ್ಥಿಗಳನ್ನು ಬೆಂಬಲಿಸುವ ಗುರಿ

ಜಗತ್ತಿನ ಅತ್ಯಂತ ಕೈಗೆಟುಕುವ ಬೆಲೆಯ ಎಐ ಪಿಸಿ ಎಂದಿರುವ ಸಚಿವ ಖರ್ಗೆ, ತಳಮಟ್ಟದ ಕಂಪ್ಯೂಟಿಂಗ್ ಸವಾಲುಗಳನ್ನು ಎದುರಿಸಿದ ಮೊದಲ ರಾಜ್ಯ ಕರ್ನಾಟಕ. ಕಾಂಪ್ಯಾಕ್ಟ್ ಇಂಟೆಲಿಜೆನ್ಸ್ ಅಂಡ್ ಇನ್ಫಿನಿಟ್ ಪಾಸಿಬಿಲಿಟೀಸ್ ಎಂಬ ಅಂಕಿತದೊಂದಿಗೆ ಬಂದಿರುವ ಈ ಸಾಧನವು ವಿದ್ಯಾರ್ಥಿಗಳು, ಸೃಷ್ಟಿಕರ್ತರು, ನಾವೀನ್ಯಕಾರರು ಮತ್ತು ಆವಿಷ್ಕಾರಕರನ್ನು ಬೆಂಬಲಿಸುವ ಗುರಿಯನ್ನು ಹೊಂದಿದೆ ಎಂದರು. ಕೇವಲ ಕಂಪ್ಯೂಟರ್‌ಗಳನ್ನು ವಿತರಿಸುವುದು ನಮ್ಮ ಗುರಿಯಲ್ಲ, ಬದಲಾಗಿ ವಿದ್ಯಾರ್ಥಿಗಳಲ್ಲಿ ಸಾಮರ್ಥ್ಯವನ್ನು ತುಂಬುವುದು, ಇದರ ಮೂಲಕ ಮಕ್ಕಳು ಕಲಿಯಲು, ಸೃಷ್ಟಿಸಲು ಮತ್ತು ಎಐ ಚಾಲಿತ ಆರ್ಥಿಕತೆಯಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಿಕೊಡುವುದಾಗಿದೆ ಎಂದು ಖರ್ಗೆ ಹೇಳಿದರು.

# ಸಕ್ಕರೆ-ಬೆಲ್ಲ ದುಬಾರಿ

## ಹಬ್ಬದ ಸೀಸನ್‌ನಲ್ಲಿ ಬಿಗ್ ಶಾಕ್!

## ಸಕ್ಕರೆ-ಬೆಲ್ಲ ಬೆಲೆ ಗಗನಕ್ಕೆ

### ಎಥನಾಲ್ ಉತ್ಪಾದನೆಗೆ ಕಬ್ಬು ಬಳಸುತ್ತಿರುವುದರಿಂದ ಬೆಲೆ ಏರಿಕೆ: ಜೈರಾಮ್

### ವ್ಯಾಪಾರಸ್ಥರಲ್ಲೂ ಆತಂಕ

## ಗ್ರಾಹಕರ ಜೇಬಿಗೆ ಕತ್ತರಿ




• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಸಕ್ಕರೆ ಬೆಲೆ ಕೆ.ಜಿ.ಗೆ 50 ರಿಂದ 75 ರೂ,ವರೆಗೆ ಹಾಗೂ ಬೆಲ್ಲದ ಬೆಲೆ ಕೆ.ಜಿ.ಗೆ ಸುಮಾರು 100 ರೂ.ರವರೆಗೆ ಏರಿಕೆಯಾಗಿದೆ. ಸಾಲು ಸಾಲು ಹಬ್ಬಗಳ ಬೇಡಿಕೆ, ಎಥೆನಾಲ್ ಉತ್ಪಾದನೆಗೆ ಕಬ್ಬಿನ ಬಳಕೆ ಮತ್ತು ಮಾರುಕಟ್ಟೆಯಲ್ಲಿ ಕೃತಕ ಅಭಾವವೇ ಈ ಹಠಾತ್ ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದ್ದು, ಗ್ರಾಹಕರಿಗೆ ಆರ್ಥಿಕ ಹೊರೆಯಾಗಿದೆ. ಸಕ್ಕರೆ ದರ ಕೆಜಿಗೆ 50-55 ರೂ.ನಿಂದ 70-75 ರೂ.ಗೆ ಏರಿದ್ದು, ದೇಶೀಯ ಉತ್ಪಾದಿತ ಸಕ್ಕರೆ ಬೆಲೆ ಸುಮಾರು ಶೇ 40ರಷ್ಟು ಏರಿಕೆಯಾಗಿದೆ. ಇದೇ ರೀತಿ ಬೆಲ್ಲದ ದರವೂ ಗಗನಕ್ಕೇರಿದ್ದು, ಕ್ವಿಂಟಾಲ್‌ಗೆ 4,500 ರೂ. ಇದ್ದ ಬೆಲೆ ಈಗ 6,500-7,000 ರೂ.ಗೆ ತಲುಪಿದೆ. ಕೆಲವೇ ದಿನಗಳಲ್ಲಿ ಬೆಲ್ಲದ ಬೆಲೆಯಲ್ಲಿ 2,000 ರೂ. ಏರಿಕೆಯಾಗಿರುವುದು ವ್ಯಾಪಾರಸ್ಥರಲ್ಲೂ ಆತಂಕ ಮೂಡಿಸಿದೆ. ಎಥೆನಾಲ್ ಉತ್ಪಾದನೆಯಿಂದ ಸಕ್ಕರೆ ಕೊರತೆ ಉಂಟಾಗುತ್ತಿದೆಯೇ ಎಂಬ ಚರ್ಚೆಗಳು ಒಂದೆಡೆ ನಡೆಯುತ್ತಿವೆ. ಆದರೆ, ಬೆಲೆ ಏರಿಕೆಗೆ ಕಬ್ಬಿನ ಪೂರೈಕೆಯ ಕೊರತೆ, ಮಳೆಯ ಅಭಾವದಿಂದ ಇಳುವರಿ ಕುಸಿತ ಮತ್ತು ಗಾಣಗಳಲ್ಲಿ ಬೆಲ್ಲದ ಉತ್ಪಾದನೆ ಇಳಿಮುಖವಾಗಿರುವುದು ಇನ್ನೊಂದು ಕಾರಣವಾಗಿದೆ ಎಂದು ತಿಳಿದು ಬಂದಿದೆ. ಕಳೆದ ಆರು ತಿಂಗಳಿಂದ ಮಳೆ ಇಲ್ಲದೆ ಕಬ್ಬಿಗೆ ನೀರಿನ ಪೂರೈಕೆಯಾಗಿಲ್ಲ. ಇದರಿಂದಾಗಿ ಕಬ್ಬಿನ ಗದ್ದೆಗಳು ಒಣಗಿ ನಿಂತಿವೆ. ಕಬ್ಬಿನ ಇಳುವರಿ ಅರ್ಧದಷ್ಟು ಕಡಿಮೆಯಾಗಿದೆ. ಪ್ರತಿದಿನ 10 ರಿಂದ 12 ಲಾರಿಯಷ್ಟು ಬೆಲ್ಲ ಮಾರುಕಟ್ಟೆಗೆ ಹೋಗುತಿತ್ತು. ಇದೀಗ ಅರ್ಧದಷ್ಟು ಕಡಿಮೆಯಾಗಿದೆ. ಬೆಲ್ಲದ ಮಾರುಕಟ್ಟೆ ಪ್ರಾರಂಭವಾದ ದಿನದಿಂದಲೂ ಇಷ್ಟೊಂದು ಪ್ರಮಾಣದ ದರ ಏರಿಕೆಯಾಗಿರಿಲ್ಲ ಎಂದು ವ್ಯಾಪಾರಸ್ಥರು ಅಭಿಪ್ರಾಯಪಟ್ಟಿದ್ದಾರೆ.

### ನೀರಿನ ಕೊರತೆ



ಕಳೆದ ಆರು ತಿಂಗಳಿಂದ ಮಳೆಯಿಲ್ಲದೆ ಹಾಗೂ ಕಬ್ಬಿಗೆ ನೀರಿನ ಪೂರೈಕೆಯಾಗದೆ ಗದ್ದೆಗಳು ಒಣಗಿ ನಿಂತಿವೆ. ಪರಿಣಾಮವಾಗಿ ಕಬ್ಬಿನ ಇಳುವರಿ ಅರ್ಧದಷ್ಟು ಕುಸಿದಿದೆ. ಗಾಣಗಳಿಗೆ ಕಬ್ಬು ಸಿಗದೆ ಉತ್ಪಾದನೆ ಸಂಪೂರ್ಣ ಕುಂಠಿತಗೊಂಡಿದೆ. ಹಿಂದೆ ಪ್ರತಿದಿನ 10 ರಿಂದ 12 ಲಾರಿಗಳಷ್ಟು ಮಾರುಕಟ್ಟೆಗೆ ಹೋಗುತ್ತಿದ್ದ ಬೆಲ್ಲದ ಪೂರೈಕೆ, ಈಗ ಅರ್ಧದಷ್ಟು ಇಳಿಕೆಯಾಗಿದೆ.

ಬೆಲ್ಲದ ಮಾರುಕಟ್ಟೆ ಪ್ರಾರಂಭವಾದ ದಿನದಿಂದಲೂ ಈ ಮಟ್ಟಿಗೆ ದರ ಏರಿಕೆಯಾಗಿರಲಿಲ್ಲ. ಈ ಸೀಸನ್‌ನಲ್ಲಿ ಬೆಲೆ ತಗ್ಗಬೇಕಿತ್ತಾದರೂ, ಭಾರೀ ಏರಿಕೆ ಕಂಡಿರುವುದು ಇದೇ ಮೊದಲು ಎಂದು ವ್ಯಾಪಾರಸ್ಥರು ಆಶ್ಚರ್ಯ ವ್ಯಕ್ತಪಡಿಸಿದ್ದಾರೆ. ಮಳೆಯಾಶ್ರಿತ ಹಾಗೂ ನೀರಾವರಿಯಿಲ್ಲದೆ ಒಣಗಿದ ಕಬ್ಬಿನ ಬೆಳೆ ರೈತರಿಗೆ ನಷ್ಟವನ್ನುಂಟು ಮಾಡಿದ್ದರೆ, ಕಚ್ಚಾ ವಸ್ತು ಸಿಗದೆ ಬೆಲ್ಲದ ದರ ಗಗನಕ್ಕೇರಿರುವುದು ಸಾಮಾನ್ಯ ಜನರಿಗೂ ಬಿಸಿ ತಟ್ಟುವಂತೆ ಮಾಡಿದೆ.

### ಚಹಾ ಕುಡಿಯುವುದನ್ನು ಬಿಡುವುದೇ ವಾಸಿ ಎಂದ ಗ್ರಾಹಕರು

ದರ ಏರಿಕೆ ನಿಯಂತ್ರಿಸಲು ಕೇಂದ್ರ ಸರ್ಕಾರ ಕಚ್ಚಾ ಸಕ್ಕರೆಯನ್ನು ಸುಂಕ ರಹಿತವಾಗಿ ಆಮದು ಮಾಡಿಕೊಳ್ಳಲು ಅವಕಾಶ ನೀಡಿದೆ ಎನ್ನಲಾಗುತ್ತಿದೆ. 'ಸಕ್ಕರೆ ದರ ಇಷ್ಟು ಹೆಚ್ಚಾದರೆ ನಾವು ಜನ ಸಾಮಾನ್ಯರು ಚಹಾ, ಕಾಫಿ ಕುಡಿಯುವುದನ್ನು ಬಿಡುವುದೇ ವಾಸಿ' ಎಂದು ಗ್ರಾಹಕರಾದ ಪರಶುರಾಮ್ ಅವರ ಮಾತು. ಚಹಾ, ಕಾಫಿಯಿಂದ ಹಿಡಿದು ಸಿಹಿ ತಿಂಡಿ, ಬೇಕರಿ ಉತ್ಪನ್ನಗಳವರೆಗೆ ಸಕ್ಕರೆ ಬಳಕೆಯಾಗುತ್ತದೆ. ಹೀಗಾಗಿ ಸಕ್ಕರೆ ದರ ಏರಿಕೆಯ ಪರಿಣಾಮ ಗ್ರಾಹಕರ ಮೇಲೆ ಮಾತ್ರವಲ್ಲದೆ ಸಣ್ಣಪುಟ್ಟ ಹೋಟೆಲ್, ಬೇಕರಿ ಮತ್ತು ಸಿಹಿ ತಿಂಡಿ ವ್ಯಾಪಾರಿಗಳ ಮೇಲೂ ಬೀಳುವ ಸಾಧ್ಯತೆಯಿದೆ. ಈಗಾಗಲೇ ಕೆ.ಜಿಗೆ 70 ರೂ ತಲುಪಿರುವ ಸಕ್ಕರೆ ದರ ಮುಂದೆ 80, 90 ಶತಕ ಬಾರಿಸಿದರೂ ಅಚ್ಚರಿ ಇಲ್ಲ.




### ಖರ್ಗೆ ವಾಗ್ದಾಳಿ



**ಸಾಮಾನ್ಯರ ಮೇಲೆ ಹೊರೆ**

ಸಕ್ಕರೆ-ಬೆಲ್ಲದ ಬೆಲೆ ಏರಿಕೆ ಸಂಬಂಧ ಕಾಂಗ್ರೆಸ್ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ಕೇಂದ್ರ ಸರ್ಕಾರದ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರ ಸರ್ಕಾರದ ನೀತಿಗಳು ಮತ್ತು ಎಥೆನಾಲ್ ಕಚ್ಚಾ ವಸ್ತುಗಳ ಬಳಕೆಯಿಂದ ಸಕ್ಕರೆ ಬೆಲೆ ಏರಿಕೆಯಾಗಿದ್ದು,ಹಬ್ಬದ ಸೀಸನ್‌ನಲ್ಲಿ ಜನಸಾಮಾನ್ಯರ ಮೇಲೆ ಹೊರೆಯಾಗಿದೆ.

ಪೆಟ್ರೋಲ್ ಜತೆಗೆ ಬೆಸೆಯಲು ಎಥೆನಾಲ್ ಮಾಡಲು ಕಬ್ಬನ್ನು ಬಳಸುವುದು ಮತ್ತು ಮತ್ತೊಂದೆಡೆ ವಿದೇಶದಿಂದ ಸಕ್ಕರೆ ಆಮದು ಮಾಡಿಕೊಳ್ಳುವುದು ಯಾವ ರೀತಿಯ ಸ್ವಾವಲಂಬನೆ ಎಂದು ಖರ್ಗೆ ಪ್ರಶ್ನಿಸಿದ್ದಾರೆ.

## ಸಕ್ಕರೆ ನಾಡಲ್ಲಿ ಬೆಲ್ಲ ಬಂಗಾರ

### ಬೆಲೆಗಳಲ್ಲಿ ಭಾರಿ ಏರಿಕೆ



**ಕಚ್ಚಾ ಸಕ್ಕರೆಯ ಸುಂಕ-ಮುಕ್ತ**

### ಸಕ್ಕರೆ ಆಮದಿಗೆ ಕೇಂದ್ರ ಸರ್ಕಾರ ಅಸ್ತು

ದೇಶದ ಸ್ಥಳೀಯ ಮಾರುಕಟ್ಟೆಗಳಲ್ಲಿ ಸಕ್ಕರೆ ಬೆಲೆ ಹೆಚ್ಚುತ್ತಿದೆ. ಇದನ್ನು ಗಂಭೀರವಾಗಿ ಪರಗಣಿಸಿರುವ ಕೇಂದ್ರ ಸರ್ಕಾರ, ಅಕ್ಟೋಬರ್ 31ರ ವರೆಗೆ 10 ಲಕ್ಷ ಟನ್ ಕಚ್ಚಾ ಸಕ್ಕರೆಯನ್ನು ಯಾವುದೇ ಸುಂಕವಿಲ್ಲದೆ ಉಚಿತವಾಗಿ ಆಮದು ಮಾಡಿಕೊಳ್ಳಲು ಅನುಮತಿ ನೀಡಿದೆ. ದೇಶೀಯ ಲಭ್ಯತೆಯನ್ನು ಹೆಚ್ಚಿಸುವುದು ಮತ್ತು ಬೆಲೆ ಏರಿಕೆಗೆ ಮಿತಿ ಹೇರುವ ಗುರಿಯನ್ನು ಈ ನಿರ್ಧಾರ ಹೊಂದಿದೆ.ಅ.31ರವರೆಗೆ ಸುಂಕ ದರ ಕೋಟಾದ ಅಡಿಯಲ್ಲಿ 10 ಲಕ್ಷ ಮೆಟ್ರಿಕ್ ಟನ್ ಸುಂಕರಹಿತ ಸಕ್ಕರೆ ಆಮದಿಗೆ ಅನುಮತಿ ನೀಡಲು ಕಚ್ಚಾ ಸಕ್ಕರೆಯ ಆಮದು ನೀತಿಗೆ ತಿದ್ದುಪಡಿ ಮಾಡಲಾಗಿದೆ ಎಂದು ವಿದೇಶಿ ವ್ಯಾಪಾರ ನಿರ್ದೇಶನಾಲಯವು ಅಧಿಸೂಚನೆಯಲ್ಲಿ ತಿಳಿಸಿದೆ.

ಸಕ್ಕರೆ ಬೆಲೆಗಳಲ್ಲಿ ಭಾರಿ ಏರಿಕೆಯಾಗುತ್ತಿರುವ ಮಧ್ಯೆ ಈ ಆದೇಶ ಹೊರಬಂದಿದೆ. 2026-27ರ ಋತುವಿಗೆ ಮುನ್ನ ಆರಂಭಿಕ ಸಕ್ಕರೆ ದಾಸ್ತಾನು ಕಡಿಮೆ ಪ್ರಮಾಣದಲ್ಲಿ ಇರುವುದರಿಂದ ದರಗಳು ಗಗನಕ್ಕೇರುತ್ತಿವೆ. ಸರಾಸರಿ ಸಕ್ಕರೆ ದರ ಕ್ವಿಂಟಲ್‌ಗೆ 5,400-5,500 ರೂ.ಗಳಷ್ಟಿತ್ತು. ಇದು ಹಿಂದಿನ ವರ್ಷ 3,900 ರೂ. ಇತ್ತು ಎಂದು ಕೈಗಾರಿಕಾ ಸಂಸ್ಥೆಯೊಂದು ಮಾಹಿತಿ ನೀಡಿದೆ.

### ಸಕ್ಕರೆ ಬೆಲೆ ಏರಿಕೆಗೂ ಎಥೆನಾಲ್ ಬಳಕೆಗೂ ಸಂಬಂಧವಿಲ್ಲ

ದೇಶೀಯ ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆ ತೀವ್ರವಾಗಿ ಏರಿಕೆಯಾಗುತ್ತಿದೆ. ಈ ಹೆಚ್ಚಳವು ಸಕ್ಕರೆಯನ್ನ ಎಥೆನಾಲ್ ಬಳಕೆಗೆ ಸಂಬಂಧಿಸಿದೆ ಎಂದು ಹೇಳಲಾಗುತ್ತಿದ್ದು, ಈ ಆರೋಪಗಳನ್ನು ಕೇಂದ್ರ ಸರ್ಕಾರ ತಿರಸ್ಕರಿಸಿದೆ. ಸಕ್ಕರೆ ಬೆಲೆ ಏರಿಕೆಗೂ ಎಥೆನಾಲ್ ಬಳಕೆಗೂ ಸಂಬಂಧ ಇಲ್ಲ. ದೇಶೀಯ ಉತ್ಪಾದನೆಯಲ್ಲಿನ ಇಳಿಕೆ, ಹಬ್ಬದ ಋತುವಿನಲ್ಲಿ ಹೆಚ್ಚಿದ ಬೇಡಿಕೆ ಹಾಗೂ ಜಾಗತಿಕ ಪೂರೈಕೆಯಲ್ಲಿನ ಬಿಗಿ ಕ್ರಮ ಮತ್ತು ಸಂಗ್ರಹಣೆಯೇ ಇದಕ್ಕೆ ಕಾರಣ ಎಂದು ಕೇಂದ್ರ ಸ್ಪಷ್ಟಪಡಿಸಿದೆ. ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಸಚಿವಾಲಯವು ಈ ಬಗ್ಗೆ ಪ್ರತಿಕ್ರಿಯಿಸಿದ್ದು, ಲಭ್ಯತೆಯನ್ನು ಸುಧಾರಿಸಲು ಮತ್ತು ಬೆಲೆ ಏರಿಕೆ ನಿಯಂತ್ರಿಸಲು ಸರ್ಕಾರ ಹಲವಾರು ಕ್ರಮಗಳನ್ನ ತೆಗೆದುಕೊಂಡಿದೆ. ಇದರಲ್ಲಿ ವ್ಯಾಪಾರಿಗಳ ಮೇಲೆ ಸ್ಟಾಕ್ ಮಿತಿಗಳನ್ನು ವಿಧಿಸುವುದು ಮತ್ತು ಕಚ್ಚಾ ಸಕ್ಕರೆಯ ಸುಂಕ-ಮುಕ್ತ ಆಮದನ್ನ ಅನುಮೋದಿಸುವುದು ಸೇರಿವೆ.

## ಎ ಖಾತಾ ಅರ್ಜಿ ಸಲ್ಲಿಕೆಗೆ ಇಂದು ಕೊನೆ ದಿನ ಅವಧಿ ವಿಸ್ತರಣೆ ಇಲ್ಲ

• ಉದಯವಾಹಿನಿ, ಬೆಂಗಳೂರು

ಬಿ ಟು ಎ ಖಾತಾ ಪರಿವರ್ತನೆ ಅರ್ಜಿ ಸಲ್ಲಿಕೆಗೆ ಇಂದು (ಆ.23) ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ ಇಲ್ಲ ಎಂದು ಐಎಎಸ್ ಅಧಿಕಾರಿ ಮುನೀಶ್ ಮೌದ್ಗಿಲ್ ಮಾಹಿತಿ ನೀಡಿದ್ದಾರೆ. ಎ ಖಾತಾ ಅರ್ಜಿ ಸಲ್ಲಿಕೆ ಕುರಿತು ಮಾತನಾಡಿದ ಅವರು, ಎ ಖಾತಾ ಪರಿವರ್ತನೆಗೆ 70 ಸಾವಿರ ಅರ್ಜಿ ಸಲ್ಲಿಕೆ ಅಷ್ಟೇ ಆಗಿದೆ. ಏಳೂವರೆ ಲಕ್ಷ ಬಿ ಖಾತಾ ಇದ್ದು, ಬರೀ 70 ಸಾವಿರ ಅರ್ಜಿ ಸಲ್ಲಿಕೆಯಾಗಿದೆ. ಇದರಲ್ಲಿ 20 ಸಾವಿರ ಎ ಖಾತಾ ಅಪ್ರೂವ್ ಮಾಡಲಾಗಿದೆ ಎಂದರು. ಇನ್ನು ಮಾರ್ಗಸೂಚಿ ದರ 2% ಕಟ್ಟಿ ಎ ಖಾತಾ ಪರಿವರ್ತನೆಗೆ ಅವಕಾಶ ಇತ್ತು. ಭಾನುವಾರ ಒಂದು ದಿನ ಅರ್ಜಿ ಸಲ್ಲಿಕೆಗೆ ಕಾಲಾವಕಾಶ ಇದೆ.

ಇಂದು ಅರ್ಜಿ ಸಲ್ಲಿಕೆ ಮಾಡದಿದ್ದರೆ ಸರ್ಕಾರದ ಡಿಸ್ಕೌಂಟ್ ಆಫರ್ ಮುಕ್ತಾಯವಾಗಲಿದೆ.

ಈ ಬಾರಿಯು ಕೂಡ ಬಿ ಟು ಎ ಖಾತಾ ಪರಿವರ್ತನೆಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಕಡಿಮೆ ಜನ ಅರ್ಜಿ ಸಲ್ಲಿಕೆ ಮಾಡಿದ್ದಾರೆ ಎಂದು ತಿಳಿಸಿದರು.

## ಬಾವಿಯಲ್ಲಿ ಇಬ್ಬರು ಮಕ್ಕಳ ಶವ ಪತ್ತೆ, ತಂದೆ ನಾಪತ್ತೆ

• ಉದಯವಾಹಿನಿ, ಬೆಂಗಳೂರು

ತಂದೆ ಹಾಗೂ ಇಬ್ಬರು ಮಕ್ಕಳು ಬಾವಿಗೆ ಬಿದ್ದಿದ್ದು, ಮಕ್ಕಳು ಮೃತಪಟ್ಟಿರುವ, ತಂದೆ ನಾಪತ್ತೆಯಾಗಿರುವ ಘಟನೆ ವಿಜಯಪುರ ಜಿಲ್ಲೆಯ ನಿಡಗುಂದಿ ತಾಲ್ಲೂಕಿನ ಬಳಬಟ್ಟಿ ಗ್ರಾಮದಲ್ಲಿ ನಡೆದಿದೆ. ಮೃತ ಬಾಲಕಿಯರನ್ನು ಸಾಕ್ಷಿ (15) ಮತ್ತು ರಕ್ಷಿತಾ (10) ಎಂದು ಗುರುತಿಸಲಾಗಿದೆ. ಇವರ ತಂದೆ ಸಾಬಣ್ಣ ನಾಪತ್ತೆಯಾಗಿದ್ದು, ಅವರಿಗಾಗಿ ಪೊಲೀಸರು ಶೋಧ ಕಾರ್ಯ ನಡೆಸುತ್ತಿದ್ದಾರೆ.

ಬಳಬಟ್ಟಿ ಗ್ರಾಮದ ತೋಟದ ಮನೆಯಲ್ಲಿ ವಾಸವಾಗಿದ್ದ ಕೃಷಿಕ ಸಾಬಣ್ಣ ಅವರಿಗೆ ನಾಲ್ವರು ಹೆಣ್ಣು ಮಕ್ಕಳು ಹಾಗೂ ಒಬ್ಬ ಗಂಡು ಸೇರಿದಂತೆ ಐವರು ಮಕ್ಕಳಿದ್ದಾರೆ. ನಿನ್ನೆ ಅವರ ಪತ್ನಿ ಇಬ್ಬರು ಹೆಣ್ಣು ಮಕ್ಕಳೊಂದಿಗೆ ಹೊರಗೆ ತೆರಳಿದ್ದರು. ಗಂಡು ಮಗ ಅಜ್ಜನೊಂದಿಗೆ ಇದ್ದನು. ಹೀಗಾಗಿ ಮನೆಯಲ್ಲಿ ಸಾಕ್ಷಿ, ರಕ್ಷಿತಾ ಹಾಗೂ ಸಾಬಣ್ಣ ಮಾತ್ರ ಇದ್ದರು ಎನ್ನಲಾಗಿದೆ. ಏನಾಯಿತು ಎಂಬುದು ತಿಳಿದುಬಂದಿಲ್ಲ. ನಿನ್ನೆ ಸಂಜೆ ಮೂವರು ತೆರೆದ ಬಾವಿಗೆ ಬಿದ್ದಿದ್ದಾರೆ. ವಿಷಯ ತಿಳಿದ ಗ್ರಾಮಸ್ಥರು ಹಾಗೂ ಪೊಲೀಸರು ಸ್ಥಳಕ್ಕೆ ಧಾವಿಸಿ ಶೋಧ ನಡೆಸಿದಾಗ ಇಬ್ಬರು ಬಾಲಕಿಯರ ಶವಗಳು ಪತ್ತೆಯಾಗಿವೆ.

# ಬಿಜೆಪಿಯಿಂದ ಜೆನ್‌ಝೀ ಸಮಿತಿ ರಚನೆ: ಪಕ್ಷದ ಹೊಸ ಪದಾಧಿಕಾರಿಗಳ ಜೊತೆ ನಿತಿನ್ ನಬಿನ್ ಮೊದಲ ಸಭೆ

## ಯುವ ಜನತೆಯ (ಜೆನ್ ಝೀ) ಆಕಾಂಕ್ಷೆಗಳು, ಕಳವಳ, ನಿರೀಕ್ಷೆಗಳನ್ನು ಅರ್ಥ ಮಾಡಿಕೊಳ್ಳುವುದು ಇದರ ಉದ್ದೇಶವಾಗಿದೆ.

• ಉದಯವಾಹಿನಿ, ನವದೆಹಲಿ

ದೇಶದ ಯುವ ಸಮುದಾಯವನ್ನು (ಜೆನ್ ಝೀ) ಪಕ್ಷದ ಕಡೆಗೆ ಸೆಳೆಯಲು ಮತ್ತು ಅವರೊಂದಿಗೆ ಬಾಂಧವ್ಯವನ್ನು ಬಲಪಡಿಸಲು ಭಾರತೀಯ ಜನತಾ ಪಕ್ಷ (ಬಿಜೆಪಿ) ಉನ್ನತ ಮಟ್ಟದ ವಿಶೇಷ ಸಮಿತಿಯನ್ನು ರಚಿಸಿದೆ.ಈ ಸಮಿತಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾದ ಸ್ಮೃತಿ ಇರಾನಿ ಮತ್ತು ವಿನೋದ್ ತಾವ್ಡೆ ಮತ್ತು ಗುಜರಾತ್ ಸಚಿವ ಹರ್ಷ ಸಂಘವಿ ಸೇರಿದಂತೆ ಪ್ರಮುಖ ನಾಯಕರು ಇರಲಿದ್ದಾರೆ. ಮುಂದಿನ ಸೆಪ್ಟೆಂಬರ್‌ನಿಂದ ಯುವಕರೊಂದಿಗೆ ಅಧಿಕೃತವಾಗಿ ಸಂವಾದ ಆರಂಭಿಸಲಿದೆ ಎಂದು ಉನ್ನತ ಮೂಲಗಳು ಈಟಿವಿ ಭಾರತಕ್ಕೆ ತಿಳಿಸಿವೆ. ಯುವ ಜನತೆಯ (ಜೆನ್‌ಝೀ) ಆಕಾಂಕ್ಷೆಗಳು, ಕಳವಳ, ನಿರೀಕ್ಷೆಗಳನ್ನು ಅರ್ಥ ಮಾಡಿಕೊಳ್ಳುವುದು ಇದರ ಉದ್ದೇಶವಾಗಿದೆ. ಅಲ್ಲದೇ, ಯುವಕರು ಬಿಜೆಪಿ ನಾಯಕರೊಂದಿಗೆ ನೇರವಾಗಿ ಸಂವಾದ ನಡೆಸಿ ತಮ್ಮ ಸಮಸ್ಯೆಗಳು, ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಇದು ವೇದಿಕೆಯನ್ನು ಒದಗಿಸುತ್ತದೆ.

ಜೆನ್ ಝೀ ಯುವ ಪೀಳಿಗೆಯನ್ನು ಸಾಮಾನ್ಯವಾಗಿ 1997 ರಿಂದ 2012 ರ ನಡುವೆ ಜನಿಸಿದ ಜನರು ಎಂದು ಗುರುತಿಸಲಾಗುತ್ತದೆ. ಇವರು ಸ್ಮಾರ್ಟ್‌ಫೋನ್‌ಗಳು, ಹೈ-ಸ್ಪೀಡ್ ಇಂಟರ್ನೆಟ್ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಅತಿ ಹೆಚ್ಚು ತೊಡಗಿಸಿಕೊಂಡ ಪೀಳಿಗೆಯಾಗಿದೆ. ಜುಲೈ ತಿಂಗಳಲ್ಲಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ವಿರುದ್ಧ ದೆಹಲಿಯ



ಜಂತರ್ ಮಂತರ್ ಮತ್ತು ಸುತ್ತಮುತ್ತ ಬೃಹತ್ ಪ್ರತಿಭಟನೆಗಳು ನಡೆದಿದ್ದವು. ಇದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಕಾರಣಯಿತು. ಅದರ ನಂತರ, ಬಿಜೆಪಿ ಯುವಪೀಳಿಗೆಯ ಪರ ನಿಲ್ಲಲು ಈ ಸಮಿತಿಯನ್ನು ರಚಿಸಿದೆ.ಅಭಿಜೀತ್ ದೀಪ್ಕೆ ನೇತೃತ್ವದಲ್ಲಿ ಸಿಜೆಪಿ ಕೂಡ ಇದೇ ತಂತ್ರ ಬಳಸಿಕೊಂಡಿತ್ತು. ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ರಾಜಕೀಯ ವಿಡಂಬನೆ, ಸರ್ಕಾರವನ್ನು ಪ್ರಶ್ನಿಸಲು ಮೀಮ್ಸ್, ರೀಲ್‌ಗಳು ಮತ್ತು ಹಾಸ್ಯದ ಮೂಲಕವೇ ಅದು 24 ಮಿಲಿಯನ್ ಅನುಯಾಯಿಗಳನ್ನು ಪಡೆದಿದೆ.ಈ ಪ್ರತಿಭಟನೆಗಳು ಬಿಜೆಪಿಗೆ ದೊಡ್ಡ ಎಚ್ಚರಿಕೆ ಗಂಟೆಯಾಯಿತು. ಪಕ್ಷವು ಯುವ ಪೀಳಿಗೆಯನ್ನು ತಲುಪಲು ತನ್ನ ಕಾರ್ಯತಂತ್ರವನ್ನು ಸಂಪೂರ್ಣವಾಗಿ ಬದಲಾಯಿಸಿಕೊಂಡಿದೆ. ಅದರ ಭಾಗವಾಗಿಯೇ ಈಗ ಉನ್ನತ ನಾಯಕರನ್ನೊಳಗೊಂಡ ಈ ವಿಶೇಷ ಸಮಿತಿಯನ್ನು ರಚಿಸಲಾಗಿದೆ. **ನಬಿನ್ ನೇತೃತ್ವದಲ್ಲಿ ಮೊದಲ ಸಭೆ:** ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತೀನ್ ನಬಿನ್ ಶನಿವಾರ ಪಕ್ಷದ ಸಂಘಟನೆಯಲ್ಲಿ ಹೊಸದಾಗಿ ನೇಮಕಗೊಂಡ ರಾಷ್ಟ್ರೀಯ ಪದಾಧಿಕಾರಿಗಳೊಂದಿಗೆ ಚುನಾವಣಾ ತಂತ್ರ ಮತ್ತು ಜನಸಾಮಾನ್ಯರನ್ನು ಸಂಪರ್ಕಿಸುವ ಕುರಿತು ಚರ್ಚಿಸಲು ಮೊದಲ ಸಭೆ ನಡೆಸಿದರು.

ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಗಳಿಗೆ ಸಿದ್ಧತೆ, ಜನರಿಗೆ ಸರ್ಕಾರದ ಯೋಜನೆಗಳ ಮನವರಿಕೆ, ಅವರನ್ನು ತಲುಪುವ ಬಗೆ ಹೇಗೆ ಎಂಬ ಬಗ್ಗೆಯೂ ಚರ್ಚಿಸಲಾಯಿತು. ಕಾರ್ಯಕ್ರಮದಲ್ಲಿ ಆಯಾ ರಾಜ್ಯಗಳ ಪಕ್ಷದ ಅಧ್ಯಕ್ಷರು, ಉಸ್ತುವಾರಿಗಳು ಮತ್ತು ಬಿಜೆಪಿ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸುವ ನಿರೀಕ್ಷೆಯಿದೆ.

### 65 ಪದಾಧಿಕಾರಿಗಳ ತಂಡ ರಚನೆ:

ಈ ವಾರದ ಆರಂಭದಲ್ಲಿ ಬಿಜೆಪಿ ನಿತೀನ್ ನಬಿನ್ ನೇತೃತ್ವದಲ್ಲಿ ಹೊಸ ರಾಷ್ಟ್ರೀಯ ತಂಡವನ್ನು ಘೋಷಿಸಲಾಗಿದೆ. ಇದರಲ್ಲಿ 65 ಪದಾಧಿಕಾರಿಗಳಿದ್ದು 51 ಹೊಸ ಮುಖಗಳಿಗೆ ಮಣೆ ಹಾಕಲಾಗಿದೆ. ನೂತನ ತಂಡದಲ್ಲಿ ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ವಸುಂಧರಾ ರಾಜೇ ಸಿಂಧಿಯಾ ಮತ್ತು ಮಾಜಿ ಆರ್‌ಎಸ್‌ಎಸ್ ಕಾರ್ಯಕರ್ತ ರಾಮ್ ಮಾಧವ್ ಸೇರಿದಂತೆ 13 ಮಂದಿಗೆ ರಾಷ್ಟ್ರೀಯ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಕೇಂದ್ರದ ಮಾಜಿ ಸಚಿವೆ ಸ್ಮೃತಿ ಇರಾನಿ ಅವರು ಸೇರಿ 8 ಮಂದಿಯನ್ನು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಲಾಗಿದೆ.ಅದೇ ರೀತಿ, ಬಿ.ಎಲ್ ಸಂತೋಷ್ ಅವರನ್ನು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಆಗಿ ಮತ್ತು ವಿನೋದ್ ತಾವ್ಡೆ ಮತ್ತು ಸುನಿಲ್ ಬನ್ಸಾಲ್ ಅವರನ್ನು ಪ್ರಧಾನ ಕಾರ್ಯದರ್ಶಿಗಳಾಗಿ ಮುಂದುವರಿಸಲಾಗಿದೆ. ಪಕ್ಷದ ಹೊಸ ತಂಡದಲ್ಲಿ 12 ಮಹಿಳೆಯರು ಮತ್ತು ಅಲ್ಪಸಂಖ್ಯಾತ ಸಮುದಾಯಗಳ 6 ನಾಯಕರಿಗೆ ಸ್ಥಾನ ನೀಡಲಾಗಿದೆ. 2015ರಲ್ಲಿ ಪಕ್ಷದ ಆಗಿನ ಅಧ್ಯಕ್ಷರಾಗಿದ್ದ ಅಮಿತ್ ಶಾ ಅವರ ನೇತೃತ್ವದಲ್ಲಿ ಈ ಪ್ರಮಾಣದ ಸಾಂಸ್ಥಿಕ ಪುನರ್‌ರಚನೆ ನಡೆದಿತ್ತು. ಒಂದು ದಶಕಕ್ಕೂ ಹೆಚ್ಚು ಕಾಲದ ನಂತರ ಪಕ್ಷವನ್ನು ಮರು ರಚಿಸಲಾಗಿದೆ.

**ಈ ದಿನದ ದರ**

| | |
|---|---|
| ಪೆಟ್ರೋಲ್: | 111.68₹/L |
| ಡೀಸೆಲ್ : | 99.56₹/L |
| ಬಂಗಾರ: | ₹ 16,309 /Gram 24ct ₹ 14,950 /Gram 22ct |
| ಬೆಳ್ಳಿ: | ₹260.00/ |

# ಸ್ಯಾಂಡಲ್ ವುಡ್ ನಿರ್ದೇಶಕ ಓಂಪ್ರಕಾಶ್‌ರಾವ್ ವಿರುದ್ಧ ದೂರು ದಾಖಲು!

• ಉದಯವಾಹಿನಿ, ಬೆಂಗಳೂರು

ಖ್ಯಾತ ನಿರ್ದೇಶಕ ಹಾಗೂ ನಟ ಓಂಪ್ರಕಾಶ್ ರಾವ್ ವಿರುದ್ಧ 3.85 ಕೋಟಿ ರೂ. ವಂಚನೆ ಆರೋಪ ಕೇಳಿಬಂದಿದೆ. ಈ ಸಂಬಂಧ ನಟ ಭಾಸ್ಕರ್ ಶೆಟ್ಟಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ದೂರು ಸಲ್ಲಿಸಿದ್ದು, ನಿರ್ದೇಶಕರ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಇದೇ ಪ್ರಕರಣ ಸಂಬಂಧ ವಾಸುದೇವರೆಡ್ಡಿ, ಭಾಸ್ಕರ್ ಶೆಟ್ಟಿ, ವಸಂತಮ್ಮ ಹಾಗೂ ಜಯಲಕ್ಷ್ಮಿ ಎಂಬುವರು ಬ್ಯಾಡರಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಫೀನಿಕ್ಸ್' ಸಿನಿಮಾ ನಿರ್ಮಾಣಕ್ಕಾಗಿ ಹಂತ ಹಂತವಾಗಿ ಒಟ್ಟು 3 ಕೋಟಿ 85 ಲಕ್ಷ ಹಣ ಪಡೆದು, ಹಣ ವಾಪಸ್ ನೀಡದೇ ವಂಚಿಸಿದ್ದಾರೆ ಎಂದು ದೂರುದಾರರು ಆರೋಪಿಸಿದ್ದಾರೆ. ಹಣ ವಾಪಸ್ ಕೇಳಲು ಮನೆಗೆ ತೆರಳಿದ್ದ ಸಂದರ್ಭದಲ್ಲಿ ದೂರುದಾರರಿಗೆ ಬೆದರಿಕೆ ಕೂಡ ಹಾಕಲಾಗಿದೆ ಎಂದು ದೂರಿನಲ್ಲಿ ಉಲ್ಲೇಖವಾಗಿದೆ. ದೂರಿನ ಪ್ರಕಾರ, ಭಾಸ್ಕರ್ ಅವರು ಈ ಹಿಂದೆ ನಟ ದರ್ಶನ್ ಅವರ ಯೋಧ ಚಿತ್ರದಲ್ಲಿ ಓಂ ಪ್ರಕಾಶ್ ರಾವ್ ಅವರೊಂದಿಗೆ ಕೆಲಸ ಮಾಡಿದ್ದರು. ಆ ಚಿತ್ರದ ಕೆಲಸದ ಮೂಲಕ ಇವರಿಬ್ಬರಿಗೂ ಪರಸ್ಪರ ಪರಿಚಯವಿತ್ತು. ಓಂ ಪ್ರಕಾಶ್ ರಾವ್ ಅವರು ಮತ್ತೊಂದು ಚಿತ್ರಕ್ಕಾಗಿ ಆರ್ಥಿಕ ನೆರವು ಕೋರಿದಾಗ, ಈ ಹಿಂದಿನ ವೃತ್ತಿಪರ ಪರಿಚಯದ ಕಾರಣದಿಂದಾಗಿ ಭಾಸ್ಕರ್ ಅವರು ನಿರ್ದೇಶಕರನ್ನು ನಂಬಿದ್ದರು ಎಂದು ಆರೋಪಿಸಲಾಗಿದೆ.


☛ ಉದಯವಾಹಿನಿ ಚಿತ್ರ

ಫೀನಿಕ್ಸ್ ಸಿನಿಮಾ ನಿರ್ಮಾಣಕ್ಕಾಗಿ ಈ ಹಣವನ್ನು ಕೋರಲಾಗಿತ್ತು ಎಂದು ವರದಿಯಾಗಿದೆ. ಈ ಹಣವನ್ನು ಕೇವಲ ವೈಯಕ್ತಿಕ ಸಾಲವಾಗಿ ಪಡೆಯಲಾಗಿರಲಿಲ್ಲ ಬದಲಿಗೆ, ಆ ಚಿತ್ರದ ನಿರ್ಮಾಣಕ್ಕೆ ಆರ್ಥಿಕ ಬೆಂಬಲ ನೀಡುವಂತೆ ಭಾಸ್ಕರ್ ಅವರನ್ನು ಕೋರಲಾಗಿತ್ತು. ಈ ಪ್ರಕರಣದಲ್ಲಿ ಒಟ್ಟು 3.85 ಕೋಟಿ ರೂ.ಗಳಷ್ಟು ವಂಚನೆ ನಡೆದಿದೆ ಎನ್ನಲಾಗಿದೆ.

> ಭಾಸ್ಕರ್ ಶೆಟ್ಟಿ ಅವರಿಂದ 40 ಲಕ್ಷ ರೂ.ಗಳನ್ನು ಪಡೆಯಲಾಗಿತ್ತು ಮತ್ತು ವಾಸುದೇವ ಎಂಬುವವರಿಂದ 3 ಕೋಟಿ ರೂ.ಗಿಂತ ಹೆಚ್ಚಿನ ಹಣವನ್ನು ಪಡೆಯಲಾಗಿತ್ತು. ಈ ಹಣ ವಾಪಸ್ ಕೇಳಿದಾಗ ಅದನ್ನು ಮರುಪಾವತಿಸಿದೆ, ವಂಚಿಸಿದ್ದಾರೆ ಎಂದು ದೂರಿದ್ದಾರೆ.

# 12 ಲಕ್ಷ ಉದ್ಯಮಿಗಳು ಭಾರತ ತೊರೆದಿದ್ದಾರೆ: ಸಿಎಂ ಡಿಕೆ.ಶಿವಕುಮಾರ್

• ಉದಯವಾಹಿನಿ, ಬೆಂಗಳೂರು

ಆದಾಯ ತೆರಿಗೆ ಇಲಾಖೆ, ಜಾರಿ ನಿರ್ದೇಶನಾಲಯ ಮತ್ತು ಸಿಬಿಐನಂತಹ ಕೇಂದ್ರ ತನಿಖಾ ಸಂಸ್ಥೆಗಳ ಕಿರುಕುಳದಿಂದಾಗಿ 12 ಲಕ್ಷ ಉದ್ಯಮಿಗಳು ದೇಶ ತೊರೆದಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಾರೆ. ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟೆಂಟ್ಸ್ ಆಫ್ ಇಂಡಿಯಾ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರಾಮಾಣಿಕವಾಗಿ ತೆರಿಗೆ ಪಾವತಿಸುವ ಉದ್ಯಮಿಗಳು ಮಾನಸಿಕ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ. ಐಟಿ, ಇಡಿ ಮತ್ತು ಸಿಬಿಐ ಅವರ ಪಾಲಿಗೆ ಅತಿಯಾಗಿವೆ. ಹೀಗಾಗಿ ಅವರು ದೇಶವನ್ನೇ ತೊರೆಯುತ್ತಿದ್ದಾರೆಯ ಅಗತ್ಯವಿಲ್ಲದ ಕಿರುಕುಳವಿಲ್ಲದೆ ಸುಗಮವಾಗಿ ಕಾರ್ಯನಿರ್ವಹಿಸಲು ಉದ್ಯಮಗಳಿಗೆ ಅನುಕೂಲಕರ ವಾತಾವರಣವನ್ನು ಸರ್ಕಾರ ನಿರ್ಮಿಸಬೇಕು. ರಾಜ್ಯದ ಆದಾಯ ಹೆಚ್ಚಿಸುವುದು, ಸೋರಿಕೆಯನ್ನು ತಡೆಗಟ್ಟುವುದು ಹಾಗೂ ಹಣಕಾಸು ನಿರ್ವಹಣೆಯಲ್ಲಿನ ಲೋಪಗಳನ್ನು ಸರಿಪಡಿಸುವ ಕುರಿತು ಚಾರ್ಟರ್ಡ್ ಅಕೌಂಟೆಂಟ್‌ಗಳು ಸರ್ಕಾರಕ್ಕೆ ಸಲಹೆ ನೀಡಬೇಕು ಎಂದು ಮನವಿ ಮಾಡಿದರು. ಹೊಸ ಆಲೋಚನೆಗಳು ಮತ್ತು ಪರಿಹಾರಗಳನ್ನು ಸ್ವಾಗತಿಸಲು ನಾವು ಸಿದ್ಧರಿದ್ದೇವೆ. ನಮ್ಮ ತಪ್ಪುಗಳನ್ನು ಸರಿಪಡಿಸಲು ನಿಮ್ಮ ಸಲಹೆಗಳನ್ನು ನೀಡಿ ಎಂದು ಹೇಳಿದರು.

ಕರ್ನಾಟಕ ಆರ್ಥಿಕ ಶಕ್ತಿಕೇಂದ್ರವಾಗಿ ಹೊರಹೊಮ್ಮುತ್ತಿದ್ದು, ರಾಜ್ಯದ ಆರ್ಥಿಕ ಬೆಳವಣಿಗೆಯಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು. ದೇಶದ ಆರ್ಥಿಕತೆಗೆ ಕರ್ನಾಟಕದ ಕೊಡುಗೆಯನ್ನು ಪ್ರಸ್ತಾಪಿಸಿದ ಶಿವಕುಮಾರ್ ಅವರು, ದಕ್ಷಿಣ ಭಾರತವು ಭಾರತದ ಪ್ರಗತಿಯನ್ನು ಮುನ್ನಡೆಸುವ 'ಇಂಧನ' ಎಂದು ಬಣ್ಣಿಸಿದರು.

## 'FIR ದಾಖಲಿಸಿದರೂ ಹೆದರಬೇಡಿ, NICE ರಸ್ತೆ ಟೋಲ್ ಕಟ್ಟಬೇಡಿ

☛ ಉದಯವಾಹಿನಿ ಚಿತ್ರ


• ಉದಯವಾಹಿನಿ, ಬೆಂಗಳೂರು

ನೈಸ್ ರಸ್ತೆ ವಿಚಾರವಾಗಿ ತಮ್ಮ ಸಮರ ಮುಂದುವರೆಸಿರುವ ಕೇಂದ್ರ ಸಚಿವ HD ಕುಮಾರಸ್ವಾಮಿ, ಯಾವುದೇ ಕಾರಣಕ್ಕೂ NICE ರಸ್ತೆಯಲ್ಲಿ ಟೋಲ್ ಪಾವತಿಸಬೇಡಿ ಎಂದು ಮತ್ತೊಮ್ಮೆ ವಾಹನ ಸವಾರರಿಗೆ ಕರೆ ನೀಡಿದ್ದಾರೆ. ಟೋಲ್ ಸಂಗ್ರಹದ ವಿಚಾರದಲ್ಲಿ NICE ಕಂಪನಿ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಮತ್ತೆ ಎಚ್‌ಡಿ ಕುಮಾರಸ್ವಾಮಿ ತೀವ್ರ ಆರೋಪ ಮಾಡಿದ್ದು, NICE ರಸ್ತೆ ಟೋಲ್ ಸಂಗ್ರಹದ ಹೆಸರಿನಲ್ಲಿ ಹಗಲು ದರೋಡೆ ನಡೆಯುತ್ತಿದೆ ಎಂದು ಆರೋಪಿಸಿದರು. ಬೆಂಗಳೂರಿನಲ್ಲಿ ಮಾತನಾಡಿದ ಕುಮಾರಸ್ವಾಮಿ, 'ಟೋಲ್ ಪಾವತಿಸದಿದ್ದರೆ FIR ದಾಖಲಿಸುವುದಾಗಿ ಅಧಿಕಾರಿಗಳು ಬೆದರಿಸಿದರೂ ವಾಹನ ಸವಾರರು ಹೆದರಬಾರದು. FIR ದಾಖಲಿಸಿದರೂ ಹೆದರಬೇಡಿ. ಕೈಮುಗಿದು ಮನವಿ ಮಾಡುತ್ತೇನೆ, ಯಾವುದೇ ಕಾರಣಕ್ಕೂ ಟೋಲ್ ಪಾವತಿಸಬೇಡಿ ಎಂದು ಕುಮಾರಸ್ವಾಮಿ ಮನವಿ ಮಾಡಿದರು. NICE ಕಂಪನಿಯ ವಿರುದ್ಧ ಸಿಂಗಲ್ ಬೆಂಚ್ ತೀರ್ಪು ನೀಡಿದ ದಿನವೇ ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕಿತ್ತು ಎಂದು ಕುಮಾರಸ್ವಾಮಿ ಹೇಳಿದರು.

ನ್ಯಾಯಾಲಯದ ತೀರ್ಪು ಹಾಗೂ ಫ್ರೇಮ್‌ವರ್ಕ್ ಒಪ್ಪಂದದ ನಿಯಮಗಳನ್ನು NIC ಉಲ್ಲಂಘಿಸಿದೆ ಎಂದು ಅವರು ಆರೋಪಿಸಿದರು. ರಾಜ್ಯ ಸರ್ಕಾರದ ಅನುಮತಿ ಪಡೆಯದೇ ಟೋಲ್ ದರಗಳನ್ನು ಸುಮಾರು 7ರಿಂದ 8 ಪಟ್ಟು ಹೆಚ್ಚಿಸಲಾಗಿದೆ ಎಂದು ದೂರಿದರು.

## ಕರ್ನಾಟಕ ವಿಧಾನಸಭೆಯಲ್ಲಿ ಮಹತ್ವದ ಮಸೂದೆ ಪಾಸ್


☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಅಪಾರ್ಟ್‌ಮೆಂಟ್‌ಗಳ ಮಾಲೀಕತ್ವ, ಸಾಮಾನ್ಯ ಪ್ರದೇಶಗಳ ನಿರ್ವಹಣೆ ಹಾಗೂ ನಿವಾಸಿಗಳ ಹಕ್ಕುಗಳಿಗೆ ಸ್ಪಷ್ಟ ಕಾನೂನು ಚೌಕಟ್ಟು ಒದಗಿಸುವ ಉದ್ದೇಶದ ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆ-2026 ಸೇರಿದಂತೆ ಮೂರು ಮಹತ್ವದ ಮಸೂದೆಗಳನ್ನು ಕರ್ನಾಟಕ ವಿಧಾನಸಭೆ ಅಂಗೀಕರಿಸಿದೆ.

ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ಸಚಿವ ಎನ್. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದ ನಡುವೆಯೇ ಮಸೂದೆಗಳನ್ನು ಅಂಗೀಕರಿಸಲಾಯಿತು. ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆಯನ್ನು ಸದನದ ಪರಿಗಣನೆಗೆ ಮಂಡಿಸಿದ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ರಾಜ್ಯದಲ್ಲಿ ವೇಗವಾಗಿ ಹೆಚ್ಚುತ್ತಿರುವ ನಗರೀಕರಣ ಮತ್ತು ಅಪಾರ್ಟ್‌ಮೆಂಟ್ ಸಂಸ್ಕೃತಿಯಿಂದ ಉಂಟಾಗುತ್ತಿರುವ ಹಲವು ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಸಮಗ್ರ ಕಾನೂನು ರೂಪಿಸಲಾಗಿದೆ ಎಂದು ಹೇಳಿದರು. ಅಪಾರ್ಟ್‌ಮೆಂಟ್‌ನ ವೈಯಕ್ತಿಕ ಮಾಲೀಕತ್ವದ ಜೊತೆಗೆ ಸಾಮಾನ್ಯ ಪ್ರದೇಶಗಳು ಮತ್ತು ಸೌಲಭ್ಯಗಳ ಮೇಲಿನ ಅವಿಭಜಿತ ಪಾಲು ಹಾಗೂ ಹಕ್ಕುಗಳಿಗೂ ಮಸೂದೆಯಲ್ಲಿ ಸ್ಪಷ್ಟತೆ ನೀಡಲಾಗಿದೆ.

ನಗರ ಪ್ರದೇಶಗಳಲ್ಲಿ ಭೂಮಿ ಕೊರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವೈಯಕ್ತಿಕ ಮನೆಗಳ ಬದಲು ಅಪಾರ್ಟ್‌ಮೆಂಟ್‌ಗಳು ಮತ್ತು ವಸತಿ ಸಂಕೀರ್ಣಗಳ ನಿರ್ಮಾಣ ಹೆಚ್ಚುತ್ತಿದೆ. ಪರಿಣಾಮವಾಗಿ ಇಂತಹ ಕಟ್ಟಡಗಳಲ್ಲಿ ವಾಸಿಸುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಎಂದು ಬೈರೇಗೌಡ ಹೇಳಿದರು.

ಅಪಾರ್ಟ್‌ಮೆಂಟ್‌ಗಳಲ್ಲಿನ ರಸ್ತೆಗಳು, ಕ್ಲಬ್‌ಹೌಸ್‌ಗಳು, ತೆರೆದ ಜಾಗಗಳು ಸೇರಿದಂತೆ ಸಾಮಾನ್ಯ ಪ್ರದೇಶಗಳ ಮಾಲೀಕತ್ವ ಮತ್ತು ನಿರ್ವಹಣೆ ಯಾರ ಹೊಣೆ ಎಂಬುದರ ಬಗ್ಗೆ ಹಲವು ವ್ಯಾಖ್ಯಾನಗಳು ಮತ್ತು ವಿವಾದಗಳು ಈಗಾಗಲೇ ಇವೆ. ಹೀಗಾಗಿ ಈ ಸಮಸ್ಯೆಗಳಿಗೆ ಸ್ಪಷ್ಟ ಕಾನೂನು ಚೌಕಟ್ಟು ಅಗತ್ಯವಾಗಿದೆ ಎಂದು ಹೇಳಿದರು.

## ಪ್ರಜ್ವಲ್ ರೇವಣ್ಣ ಪ್ರಕರಣದ ಸಾಕ್ಷಿಗೆ ಬೆದರಿಕೆ: ತನಿಖೆ ನಡೆಸಲು ಆದೇಶ!

• ಉದಯವಾಹಿನಿ, ಬೆಂಗಳೂರು

ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣದ ಸಾಕ್ಷಿಯೊಬ್ಬರಿಗೆ ಅವರ ಬೆಂಬಲಿಗರಿಂದ ದೂರವಾಣಿ ಮೂಲಕ ಬೆದರಿಕೆ ಕರೆಗಳು ಬಂದಿವೆ ಎಂದು ಆರೋಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ವಿಶೇಷ ನ್ಯಾಯಾಲಯವೊಂದು ಈ ಬೆದರಿಕೆ ಕರೆಗಳ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಅಪರಾಧ ತನಿಖಾ ದಳದ ವಿಶೇಷ ತನಿಖಾ ತಂಡಕ್ಕೆ ನಿರ್ದೇಶನ ನೀಡಿದೆ.

ಹಾಸನದ ಹೊಳೆನರಸೀಪುರದಲ್ಲಿರುವ ನಿವಾಸವೊಂದರಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯೊಬ್ಬರಿಗೆ ಪ್ರಜ್ವಲ್ ಲೈಂಗಿಕ ಕಿರುಕುಳ ಮತ್ತು ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದ ಪ್ರಕರಣ ಇದಾಗಿದೆ. 43 ವರ್ಷದ ಸಮಾಜ ಸೇವಕಿಯೊಬ್ಬರು ಈ ಪ್ರಕರಣದ ಸಾಕ್ಷಿಗಳಲ್ಲೊಬ್ಬರಾಗಿದ್ದಾರೆ. ಪ್ರಜ್ವಲ್ ರೇವಣ್ಣ ಅವರ ಬೆಂಬಲಿಗರೆಂದು ಹೇಳಿಕೊಳ್ಳುವವರಿಂದ ತಮಗೆ ಬೆದರಿಕೆ ಕರೆಗಳು ಬಂದಿವೆ ಎಂದು ಸಾಕ್ಷಿಯು ನ್ಯಾಯಾಲಯಕ್ಕೆ ತಿಳಿಸಿದ ನಂತರ ಈ ನಿರ್ದೇಶನ ಹೊರಬಿದ್ದಿದೆ. ಆರೋಪಿಯ ವಿರುದ್ಧ ಸಾಕ್ಷ್ಯ ನುಡಿಯದಂತೆ ಕರೆ ಮಾಡಿದವರು ಎಚ್ಚರಿಕೆ ನೀಡಿದ್ದಾರೆ. ಒಂದು ವೇಳೆ ಸಾಕ್ಷ್ಯ ನೀಡಿದರೆ ತಮಗೂ ಹಾಗೂ ತಮ್ಮ ಮಗನಿಗೂ ಪಾಠ ಕಲಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

## ಕೇವಲ 200 ರೂ. ದೋಚುವ ಯತ್ನದಲ್ಲಿ ಮಂಗಳಮುಖಿಯ ಭೀಕರ ಕೊಲೆ

• ಉದಯವಾಹಿನಿ, ಬೆಂಗಳೂರು

ಇನ್ನೂರು ರೂಪಾಯಿ ದೋಚುವ ಯತ್ನದಲ್ಲಿ ಮಂಗಳಮುಖಿಯನ್ನ ಬರ್ಬರವಾಗಿ ಇರಿದು ಹತ್ಯೆ ಮಾಡಿರುವ ಘಟನೆ ಆಗಸ್ಟ್ 21 ಮೆಜೆಸ್ಟಿಕ್‌ನ ಬಿಎಂಟಿಸಿ ಬಸ್ ನಿಲ್ದಾಣದ ಬಳಿ ನಡೆದಿದೆ. ಮೃತರನ್ನು ದೇವಿ ಎಂದು ಗುರುತಿಸಲಾಗಿದ್ದು, ಘಟನೆ ನಡೆದ ಕೆಲವೇ ಗಂಟೆಗಳಲ್ಲಿ ಆರೋಪಿ ಗೌತಮ್ (29) ಎಂಬಾತನನ್ನು ಉಪ್ಪಾರಪೇಟೆ ಪೊಲೀಸರು ಬಂಧಿಸಿರುವುದಾಗಿ ತಿಳಿಸಿದ್ದಾರೆ. ಮೃತ ದೇವಿ ಅವರು ತಡರಾತ್ರಿ ಸುಮಾರು 2.30 ರಿಂದ 3 ಗಂಟೆಯ ವೇಳೆಯಲ್ಲಿ ಮೆಜೆಸ್ಟಿಕ್ ಬಸ್ ನಿಲ್ದಾಣದ ಹೊರಭಾಗದಲ್ಲಿ ನಿಂತಿದ್ದಾಗ ಈ ದುರಂತ ಸಂಭವಿಸಿದೆ. ರಾಮಮೂರ್ತಿ ನಗರದ ನಿವಾಸಿಯಾದ ಗೌತಮ್ (29) ಎಂಬಾತ ಡಿಯೋ ಸ್ಕೂಟರ್‌ನಲ್ಲಿ ಮೆಜೆಸ್ಟಿಕ್ ಬಳಿ ಬಂದಿದ್ದ. ಮದ್ಯಪಾನ ಮಾಡಿದ್ದ ಆರೋಪಿ ಗೌತಮ್, ರಾತ್ರಿ ವೇಳೆಯಲ್ಲಿ ಜನರ ಬಳಿ ದರೋಡೆ ಮಾಡುವ ಉದ್ದೇಶದಿಂದಲೇ ಅಲ್ಲಿಗೆ ಬಂದಿದ್ದ. ಡ್ರ್ಯಾಗರ್‌ನಿಂದ ಮೊದಲಿಗೆ ದೇವಿಯ ತಲೆಗೆ ಬಲವಾಗಿ ಹೊಡೆದಿದ್ದಾನೆ. ದೇವಿ ಪ್ರತಿರೋಧಿಸಲು ಯತ್ನಿಸಿದಾಗ ಡ್ರ್ಯಾಗರ್‌ನಿಂದ ಮತ್ತೆ ಮೂರು ಬಾರಿ ದೇಹಕ್ಕೆ ಚುಚ್ಚಿ ಭೀಕರವಾಗಿ ಹಲ್ಲೆ ನಡೆಸಿದ್ದಾನೆ. ರಕ್ತಸ್ರಾವದಿಂದ ದೇವಿ ಅವರು ಘಟನಾ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ.

# 'ಟೆಲಿಪ್ರಾಂಪ್ಟರ್ ಇಲ್ಲದೆ ಸಂಪೂರ್ಣ 'ವಂದೇ ಮಾತರಂ' ಹಾಡಿದರೆ ನಾನು ರಾಜೀನಾಮೆ?

## ಬಿಜೆಪಿಗೆ ಸ್ವಲ್ಪವಾದರೂ ನಾಚಿಕೆಯಿದ್ದಿದ್ದರೆ, ಅವರು ಆಗಲೇ ಸ್ವತಂತ್ರ ತನಿಖೆಗೆ ಆದೇಶಿಸುತ್ತಿದ್ದರು

• ಉದಯವಾಹಿನಿ, ಬೆಂಗಳೂರು

> **1** ಪೆಲೆಟ್ ಗನ್ ಮೂಲಕ ಗುಂಡು
> **2** ಸತತ ಎಂಟು ಗಂಟೆಗಳ ಕಾಲ
> **3** ರಾಹುಲ್ ಗಾಂಧಿ ನಡೆಸಿದ ಧರಣಿ

ಪ್ರತಿಭಟನಾಕಾರರ ವಿರುದ್ಧ ಪೆಲೆಟ್ ಗನ್ ಬಳಕೆ ಕುರಿತು ಎಫ್‌ಐಆರ್ ದಾಖಲಿಸಲು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರು ದೆಹಲಿಯ ಪೊಲೀಸ್ ಠಾಣೆಯೊಂದರಲ್ಲಿ ಎಂಟು ಗಂಟೆಗಳ ಕಾಲ ಧರಣಿ ನಡೆಸಬೇಕಾದ ಪರಿಸ್ಥಿತಿ ಎದುರಾದ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಖರ್ಗೆ, ಪೆಲೆಟ್‌ಗನ್ ಮೂಲಕ ಗುಂಡು ಹಾರಿಸಿದ್ದು ಯಾರು ಎಂಬುದು ಎಲ್ಲರಿಗೂ ತಿಳಿದಿದ್ದರೂ, ಅಪರಿಚಿತ ವ್ಯಕ್ತಿಗಳ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಮಾಡಲು ವಿರೋಧ ಪಕ್ಷದ ನಾಯಕರು ಸತತ ಎಂಟು ಗಂಟೆಗಳ ಕಾಲ ಕುಳಿತುಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದ್ದು ಅತ್ಯಂತ ದುರದೃಷ್ಟಕರ. ದೆಹಲಿ ಪೊಲೀಸ್ ಠಾಣೆಯಲ್ಲಿ ಸಾಮಾನ್ಯ ಮನುಷ್ಯನಿಗೆ ನ್ಯಾಯ ಪಡೆಯಲು ಅವಕಾಶವಿಲ್ಲದಿರುವುದು ವಿಷಾದನೀಯ. ಕೇವಲ ದೂರು ದಾಖಲಿಸಲು ರಾಹುಲ್ ಗಾಂಧಿಯವರ ಮಧ್ಯಪ್ರವೇಶದ ಅಗತ್ಯವಿದ್ದರೆ, ಅಶ್ರುವಾಯು ಮತ್ತು ಪೆಲೆಟ್‌ಗನ್ ದಾಳಿಗೆ ಒಳಗಾದ ಸಾಮಾನ್ಯ ನಾಗರಿಕರ ಪರಿಸ್ಥಿತಿ ಹೇಗಿರಬಹುದು ಎಂಬುದನ್ನು ಊಹಿಸಿಕೊಳ್ಳಿ' ಎಂದು ಹೇಳಿದರು. ಬಿಜೆಪಿಗೆ ಸ್ವಲ್ಪವಾದರೂ ನಾಚಿಕೆಯಿದ್ದಿದ್ದರೆ, ಅವರು ಆಗಲೇ ಸ್ವತಂತ್ರ ತನಿಖೆಗೆ ಆದೇಶಿಸುತ್ತಿದ್ದರು.

ಆದರೆ ಅವರು ತಪ್ಪು ಮಾಡಿದವರಾಗಿರುವುದರಿಂದ ಅವರಿಗೆ ಅದರ ಬಗ್ಗೆ ಕಿಂಚಿತ್ತೂ ಕಾಳಜಿಯಿಲ್ಲ. ಸದ್ಯಕ್ಕೆ ಅಮಿತ್ ಶಾ ಮತ್ತು ಮೋದಿ ಅವರು ಎಷ್ಟು ವಿಚಲಿತರಾಗಿದ್ದಾರೆಂದರೆ, ಸಂಸತ್ತಿಗೆ ಬಂದು ಉತ್ತರಿಸುವ ಧೈರ್ಯವನ್ನೂ ಅವರು ತೋರಲಿಲ್ಲ. ಇನ್ನು ಎಫ್‌ಐಆರ್ ದಾಖಲಿಸುವ ಮಾತೆಲ್ಲಿ ಬಂತು' ಎಂದು ಅವರು ಹೇಳಿದರು. ಲೋಚಬ್ ಅವರ ದೂರಿನ

☛ ಉದಯವಾಹಿನಿ ಚಿತ್ರ


ಮೇರೆಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಸಂಸತ್ ರಸ್ತೆ ಪೊಲೀಸ್ ಠಾಣೆಯಲ್ಲಿ ರಾಹುಲ್ ಗಾಂಧಿ ನಡೆಸಿದ ಧರಣಿ ನಡೆಸಿದ ನಂತರ, ದೆಹಲಿ ಪೊಲೀಸರು ಅಂತಿಮವಾಗಿ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 118 ಮತ್ತು 125ರ ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದರು.

ಜುಲೈ 20 ರಂದು ಕನ್ನಾಟ್ ಪ್ಲೇಸ್‌ನಲ್ಲಿ ಪೆಲೆಟ್ ಗನ್ ದಾಳಿಯಿಂದಾಗಿ ಗಾಯಗೊಂಡಿದ್ದರೂ, ತನ್ನ ದೂರು ದಾಖಲಿಸಿಕೊಳ್ಳುತ್ತಿಲ್ಲ ಎಂದು ಸಂತ್ರಸ್ತರು ಆರೋಪಿಸಿದ್ದರು. ತಾವು ಏಮ್ಸ್‌ನಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರೂ, ತಮ್ಮ ದೃಷ್ಟಿಶಕ್ತಿಯ ಮೇಲೆ ಪರಿಣಾಮ ಬೀರಿದೆ ಎಂದು ಅವರು ಹೇಳಿಕೊಂಡಿದ್ದರು.

ಜಂತರ್ ಮಂತರ್ ಪ್ರತಿಭಟನೆ, ಆರ್‌ಎಸ್‌ಎಸ್ ಕುರಿತಾದ ಅನುಮಾನಗಳು, ನಿರುದ್ಯೋಗ ಮತ್ತು ಆರ್ಥಿಕ ಸಂಕಷ್ಟದಂತಹ ವಿಷಯಗಳಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯುವ ತಂತ್ರವೇ ವಂದೇ ಮಾತರಂ ವಿವಾದವಾಗಿದೆ.

ಇಂದು ಡಾಲರ್ ಎದುರು ರೂಪಾಯಿಯ ಮೌಲ್ಯ ಎಷ್ಟಿದೆ 98 ರೂಪಾಯಿ. ಅವರು ಮಾಡುತ್ತಿರುವುದು ಇದನ್ನೇ. ಅಮೆರಿಕದಿಂದ 500 ಶತಕೋಟಿ ಡಾಲರ್ ಮೌಲ್ಯದ ಸರಕುಗಳನ್ನು ಖರೀದಿಸಬೇಕಾದ ಅಮೆರಿಕದೊಂದಿಗಿನ ವ್ಯಾಪಾರ ಒಪ್ಪಂದದ ವಿಷಯದಿಂದ ಗಮನವನ್ನು ಬೇರೆಡೆಗೆ ಸೆಳೆಯಲು ಇವೆಲ್ಲವನ್ನೂ ಮಾಡಲಾಗುತ್ತಿದೆ. ಒಂದು ಎಫ್‌ಐಆರ್ ದಾಖಲಿಸುವುದು ವಂದೇ ಮಾತರಂ ವಿಷಯದಿಂದ ಗಮನವನ್ನು ಬೇರೆಡೆಗೆ ಸೆಳೆಯುವ ಪ್ರಯತ್ನವೇ? ಮತ್ತು ನಮಗೆ ವಂದೇ ಮಾತರಂ ಬಗ್ಗೆ ಪಾಠ ಮಾಡಲು ಇವರು ಯಾರು? ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಬಿಜೆಪಿ ಮತ್ತು ಆರ್‌ಎಸ್‌ಎಸ್ ಎಲ್ಲಿ ಇದ್ದವು? 1937ರಲ್ಲಿ ಪಂಡಿತ್ ನೆಹರು, ನೇತಾಜಿ ಬೋಸ್, ರವೀಂದ್ರನಾಥ ಟ್ಯಾಗೋರ್ ಮತ್ತು ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು ಈ ಬಗ್ಗೆ ಚರ್ಚಿಸಿದಾಗ, ಸಂವಿಧಾನ ರಚನಾ ಸಭೆಯಲ್ಲೂ ಇದರ ಬಗ್ಗೆ ಚರ್ಚೆ ನಡೆದಿತ್ತು. ಹಾಗಾದರೆ, ಇವರೆಲ್ಲರೂ ದೇಶವಿರೋಧಿಗಳೇ' ಎಂದು ಪ್ರಶ್ನಿಸಿದರು.

> ಟೆಲಿಪ್ರಾಂಪ್ಟರ್ ಸಹಾಯವಿಲ್ಲದೆ ನಮ್ಮ ರಾಷ್ಟ್ರಗೀತೆಯನ್ನು - ಅದರ ಕೊನೆಯ ಎರಡು ಚರಣಗಳನ್ನೂ ಒಳಗೊಂಡಂತೆ - ಪೂರ್ತಿಯಾಗಿ ಹಾಡುವಂತೆ ನಾನು ಪ್ರಧಾನಿ ಮೋದಿ, ಅಮಿತ್ ಶಾ ಮತ್ತು ಇಡೀ ಬಿಜೆಪಿ ಸಂಪುಟಕ್ಕೆ ಸವಾಲು ಹಾಕುತ್ತೇನೆ;. ಅವರು ಹಾಗೆ ಮಾಡಲು ಸಾಧ್ಯವಾದರೆ ನಾನು ರಾಜೀನಾಮೆ ನೀಡುತ್ತೇನೆ ಎಂದು ಹೇಳಿದರು.

> ಕಾಣೆಯಾಗಿರುವ ಐಎಎಸ್ ಅಧಿಕಾರಿ ಕುರಿತಾದ ವರದಿಗಳ ಬಗ್ಗೆ ಮಾತನಾಡಿದ ಖರ್ಗೆ, ಅವರ ಕುಟುಂಬದಿಂದ ಯಾವುದೇ ದೂರು ಬಂದಿಲ್ಲ. ಅವರನ್ನು ಕೊನೆಯದಾಗಿ ವಿಮಾನ ನಿಲ್ದಾಣದಲ್ಲಿ ನೋಡಲಾಗಿತ್ತು. ಸದ್ಯ ಅವರ ಇರುವಿಕೆ ಬಗ್ಗೆ ಮಾಹಿತಿ ಇಲ್ಲ ಮತ್ತು ಶೋಧ ಕಾರ್ಯ ನಡೆಯುತ್ತಿದೆ' ಎಂದು ತಿಳಿಸಿದರು.
> -ಸಚಿವ ಪ್ರಿಯಾಂಕ್ ಖರ್ಗೆ

### ಸಂಘರ್ಷವನ್ನು ಮುಚ್ಚಿಹಾಕಲು ವಿರೋಧ

ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ನಡುವಿನ ನಾಯಕತ್ವದ ಸಂಘರ್ಷವನ್ನು ಮುಚ್ಚಿಹಾಕಲು ವಿರೋಧ ಪಕ್ಷವು ಈ ಪಾದಯಾತ್ರೆಯನ್ನು ಬಳಸಿಕೊಳ್ಳುತ್ತಿದೆ ಎಂದು ಆರೋಪಿಸಿದರು.

### ದೂರಿನ ಮೇರೆಗೆ ಕ್ರಮ

# ಅತ್ತ ED ದಾಳಿ, ಇತ್ತ IAS ಅಧಿಕಾರಿ ನಿಗೂಢ ಕಣ್ಮರೆ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ) ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಬೃಹತ್ ಅಕ್ರಮ ಹಾಗೂ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಕರ್ನಾಟಕದ 21ಕ್ಕೂ ಹೆಚ್ಚು ಸ್ಥಳಗಳಲ್ಲಿ ಏಕಕಾಲಕ್ಕೆ ಬೃಹತ್ ಶೋಧ ಕಾರ್ಯಾಚರಣೆ ನಡೆಸಿತ್ತು.

ಕೆಪಿಎಸ್ ಸಿ ಮೇಲೂ ಇಡಿ ಅಧಿಕಾರಿಗಳು ದಾಳಿ ನಡೆಸಿ ತೀವ್ರ ಶೋಧ ನಡೆಸಿದ್ದರು. ಈ ದಾಳಿ ಬೆನ್ನಲ್ಲೇ ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ಪರೀಕ್ಷೆ ನಡೆಸಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ನಿಗೂಢವಾಗಿ ನಾಪತ್ತೆಯಾಗಿದ್ದು, ಹಲವು ಅನುಮಾನಗಳಿಗೆ ಕಾರಣವಾಗಿದೆ. ಜ್ಞಾನೇಂದ್ರ ಕುಮಾರ್ ಅವರು ಪರೀಕ್ಷಾ ನಿಯಂತ್ರಕರಾಗಿ ಕೆಲಸ ಮಾಡಿದ್ದರು. ಪಶುವೈದ್ಯಾಧಿಕಾರಿ ಪರೀಕ್ಷೆ, ಪರೀಕ್ಷೆಯನ್ನು ಕೂಡ ಅವರು ನಡೆಸಿದ್ದರು. ಪರೀಕ್ಷೆ ಅಕ್ರಮ ಆರೋಪದ ಮೇಲೆ

☛ ಉದಯವಾಹಿನಿ ಚಿತ್ರ


ಶಾಂತ ಹೊಸಮನಿ ವಿರುದ್ಧ ಎಫ್‌ಐಆರ್ ಆಗಿತ್ತು. ಇಡಿ ಕೂಡ ಶಾಂತ ಹೊಸಮನಿ ಅವರ ಮನೆ ಮೇಲೆ ದಾಳಿ ನಡೆಸಿತ್ತು. ಆದರೆ, ಈಗ ಜ್ಞಾನೇಂದ್ರಕುಮಾರ್ ನಾಪತ್ತೆ ಹಿಂದೆ ಸಾಕಷ್ಟು ಅನುಮಾನ

### ತೀವ್ರ ಆತಂಕ

ಜ್ಞಾನೇಂದ್ರ ಕುಮಾರ್ ಅವರು ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಏಕಾಏಕಿ ಕಣ್ಮರೆಯಾಗಿದ್ದಾರೆ. ಜಾರಿ ನಿರ್ದೇಶನಾಲಯ (ಇಡಿ) ನಡೆಸಿದ ಇತ್ತೀಚಿನ ದಾಳಿಯ ಬೆನ್ನಲ್ಲೇ ಈ ಬೆಳವಣಿಗೆ ನಡೆದಿರುವುದು ರಾಜ್ಯದ ಆಡಳಿತ ವಲಯದಲ್ಲಿ ತೀವ್ರ ಆತಂಕ ಸೃಷ್ಟಿಸಿದೆ.

ವ್ಯಕ್ತವಾಗಿವೆ. ಆದರೆ, ಏರ್‌ಪೋರ್ಟ್ ಆವರಣಕ್ಕೆ ಬಂದ ಕೆಲವೇ ಹೊತ್ತಿನಲ್ಲಿ ಅವರ ಮೊಬೈಲ್ ಸ್ವಿಚ್ಡ್ ಆಫ್ ಆಗಿದೆ.

ಅವರು ನಿಜಕ್ಕೂ ವಿಮಾನ ಹತ್ತಿ ದೆಹಲಿಗೆ ಪ್ರಯಾಣಿಸಿದ್ದಾರೆಯೇ ಅಥವಾ ಬೇರೆಡೆ ತೆರಳಿದ್ದಾರೆಯೇ ಎಂಬುದು ನಿಗೂಢವಾಗಿಯೇ ಉಳಿದಿದೆ. ಕುಟುಂಬಸ್ಥರು ಮತ್ತು ಆಪ್ತರು ಅವರನ್ನು ಸಂಪರ್ಕಿಸಲು ನಡೆಸಿದ ಸತತ ಪ್ರಯತ್ನಗಳು ವಿಫಲವಾಗಿವೆ.

# ಇನ್ನು ಮುಂದೆ ವಿಮಾನ ಹತ್ತುವವರ ಜೊತೆಗೆ ಇಳಿಯುವವರಿಗೂ ಅನ್ವಯಿಸಲಿದೆ ಶುಲ್ಕ..!

• ಉದಯವಾಹಿನಿ, ಬೆಂಗಳೂರು

ದೇಶದ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ಒಂದಾದ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದು ಇಳಿಯುವ ಪ್ರಯಾಣಿಕರಿಗೆ ಸೆಪ್ಟೆಂಬರ್ 1 ರಿಂದ ಹೊಸ ಶುಲ್ಕದ ಬಿಸಿ ತಟ್ಟಲಿದೆ. ಇದೂವರೆಗೆ ಮುಖ್ಯವಾಗಿ ನಿರ್ಗಮಿಸುವ ಪ್ರಯಾಣಿಕರಿಂದ ಸಂಗ್ರಹಿಸಲಾಗುತ್ತಿದ್ದ ಶುಲ್ಕ ವ್ಯವಸ್ಥೆಯಲ್ಲಿ ಇದೀಗ ಬದಲಾವಣೆ ಮಾಡಲಾಗಿದೆ.

ಬೆಂಗಳೂರು ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್ ಹಂಚಿಕೊಂಡ ಮಾಹಿತಿಯ ಪ್ರಕಾರ, ಭಾರತೀಯ ವಿಮಾನ ನಿಲ್ದಾಣಗಳ ಆರ್ಥಿಕ ನಿಯಂತ್ರಣ ಪ್ರಾಧಿಕಾರ (2026-27ರಿಂದ 2030-31ರ ಹಣಕಾಸು ವರ್ಷದವರೆಗಿನ ನಾಲ್ಕನೇ ನಿಯಂತ್ರಣ ಅವಧಿಗೆ ಕೆಐಎ ಬೆಂಗಳೂರಿನ ಪರಿಷ್ಕೃತ ಶುಲ್ಕ ಆದೇಶ ಹೊರಡಿಸಿದೆ. ಹೊಸ

> ಭಾರತದ ಇತರ ಪ್ರಮುಖ ಹಾಗೂ ಇತ್ತೀಚೆಗೆ ಆರಂಭಗೊಂಡ ವಿಮಾನ ನಿಲ್ದಾಣಗಳಲ್ಲಿ ಅನುಸರಿಸುತ್ತಿರುವ ಮಾದರಿಯಂತೆ, ಈ ಶುಲ್ಕವನ್ನು ಆಗಮಿಸುವ ಮತ್ತು ನಿರ್ಗಮಿಸುವ ಪ್ರಯಾಣಿಕರ ನಡುವೆ ಹಂಚಿಕೆ ಮಾಡುವಂತೆ ಭಾರತೀಯ ವಿಮಾನ ನಿಲ್ದಾಣಗಳ ಆರ್ಥಿಕ ನಿಯಂತ್ರಣ ಪ್ರಾಧಿಕಾರ ನಿರ್ಧರಿಸಿದೆ.

ಶುಲ್ಕ ರಚನೆಯಂತೆ, ನಿರ್ಗಮಿಸುವ ದೇಶೀಯ ಪ್ರಯಾಣಿಕರಿಗೆ ರೂ.300 ಹಾಗೂ ಆಗಮಿಸುವ ದೇಶೀಯ ಪ್ರಯಾಣಿಕರಿಗೆ ರೂ.125 ವಿಧಿಸಲಾಗುತ್ತದೆ. ಅಂತಾರಾಷ್ಟ್ರೀಯ ಪ್ರಯಾಣಿಕರಿಗೆ ನಿರ್ಗಮನದ ವೇಳೆ ರೂ.997 ಹಾಗೂ ಆಗಮನದ ವೇಳೆ ರೂ.426 ಶುಲ್ಕ ಇರಲಿದೆ. ಈ ಪರಿಷ್ಕೃತ ದರಗಳು ಆಗಸ್ಟ್ 2029ರವರೆಗೆ ಜಾರಿಯಲ್ಲಿರಲಿವೆ. ಬಳಿಕ ಟರ್ಮಿನಲ್-2 ಹಂತ-2 ಸೇರಿದಂತೆ ಪ್ರಮುಖ ಮೂಲಸೌಕರ್ಯ ಯೋಜನೆಗಳು ಪೂರ್ಣಗೊಂಡ

☛ ಉದಯವಾಹಿನಿ ಚಿತ್ರ


ನಂತರ ಶುಲ್ಕದಲ್ಲಿ ಬದಲಾವಣೆ ಮಾಡುವ ಸಾಧ್ಯತೆಯಿದೆ. ಪ್ರಸ್ತುತ ನಿರ್ಗಮಿಸುವ ದೇಶೀಯ ಪ್ರಯಾಣಿಕರಿಂದ ಒಟ್ಟು ರೂ.550 ಈ ಸಂಗ್ರಹಿಸಲಾಗುತ್ತಿದ್ದು, ಹೊಸ ವ್ಯವಸ್ಥೆಯಲ್ಲಿ ದೇಶೀಯ ಪ್ರಯಾಣಿಕರಿಗೆ ಒಟ್ಟು ಈ ರೂ.425ಕ್ಕೆ ಇಳಿಕೆಯಾಗಲಿದೆ.

## ಜಯನಗರಕ್ಕೆ ಹೈಟೆಕ್ ಸ್ಪರ್ಶ: ಶೀಘ್ರದಲ್ಲೇ 'ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ' ಜಾರಿ..!

☛ ಉದಯವಾಹಿನಿ ಚಿತ್ರ



### ಶುಲ್ಕ ಪಾವತಿಸಲು ಅವಕಾಶ

ವಾಹನ ಸವಾರರು ಮೊಬೈಲ್ ಆಪ್, ವೆಬ್‌ಸೈಟ್ ಹಾಗೂ ಡಿಜಿಟಲ್ ಪ್ರದರ್ಶನ ಫಲಕಗಳ ಮೂಲಕ ಖಾಲಿ ಪಾರ್ಕಿಂಗ್ ಸ್ಥಳಗಳ ಲಭ್ಯತೆ ಪರಿಶೀಲಿಸಬಹುದು. ಅಲ್ಲದೆ, ನಗದುರಹಿತವಾಗಿ ಪಾರ್ಕಿಂಗ್ ಶುಲ್ಕ ಪಾವತಿಸಲು ಅವಕಾಶ ಕಲ್ಪಿಸಲಾಗುತ್ತದೆ.

• ಉದಯವಾಹಿನಿ, ಬೆಂಗಳೂರು

ಜಯನಗರ ವಿಧಾನಸಭಾ ಕ್ಷೇತ್ರದ ಪ್ರಮುಖ ರಸ್ತೆಗಳಲ್ಲಿ ವಾಹನ ಸವಾರರು ಎದುರಿಸುತ್ತಿರುವ ಪಾರ್ಕಿಂಗ್ ಸಮಸ್ಯೆ ಮತ್ತು ಸಂಚಾರ ದಟ್ಟಣೆಗೆ ಶೀಘ್ರದಲ್ಲೇ ಮುಕ್ತಿ ಸಿಗಲಿದೆ. ಕ್ಷೇತ್ರಕ್ಕೆ ಹೈಟೆಕ್ ಸ್ಪರ್ಶ ನೀಡಲು ಬೆಂಗಳೂರು ದಕ್ಷಿಣ ನಗರ ಪಾಲಿಕೆ ಮುಂದಾಗಿದ್ದು, ಮೆ ಪಾರ್ಕ್‌ಲೆನ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯೊಂದಿಗೆ ಐದು ವರ್ಷಗಳ ಪಿಪಿಪಿ ಒಪ್ಪಂದಕ್ಕೆ ಸಹಿ ಹಾಕಿದೆ. ಇದರ ಅಡಿಯಲ್ಲಿ ಎಐ ಆಧಾರಿತ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ.

ಈ ಸಂಬಂಧ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಪಾರ್ಕ್‌ಲೆನ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಜೊತೆ ಒಡಂಬಡಿಕೆ ಮಾಡಿಕೊಂಡಿದೆ. ಆಯುಕ್ತ ಕೆ.ಎನ್. ರಮೇಶ್ ಅವರು ಮಾತನಾಡಿ, ಜಯನಗರ ಕ್ಷೇತ್ರದಲ್ಲಿ ಒಟ್ಟು 1,215 ರಸ್ತೆಗಳ ಪೈಕಿ 281 ಕಿ.ಮೀ. ರಸ್ತೆಗಳಿವೆ. ಸಮಗ್ರ ಅಧ್ಯಯನ ನಡೆಸಿ, ಸಂಚಾರ ಪೊಲೀಸರ ಅನುಮೋದನೆ ಪಡೆದ ಬಳಿಕ ಹೊಸ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ತರಲು 42 ಪ್ರಮುಖ ವಾಣಿಜ್ಯ ರಸ್ತೆಗಳನ್ನು (31.65 ಕಿ.ಮೀ.) ಗುರುತಿಸಲಾಗಿದೆ.

ಈ 42 ರಸ್ತೆಗಳಲ್ಲಿ ಒಟ್ಟು 4,749 ಪಾರ್ಕಿಂಗ್ ವಲಯಗಳನ್ನು ನಿರ್ಮಿಸಲಾಗುತ್ತಿದೆ. ಈ ಪೈಕಿ ಸುಮಾರು 3,800 ದ್ವಿಚಕ್ರ ವಾಹನಗಳಿಗೆ ಹಾಗೂ 900ಕ್ಕೂ ಹೆಚ್ಚು ಕಾರುಗಳಿಗೆ ಮೀಸಲಾಗಿರಲಿವೆ.

ಇದರ ಜೊತೆಗೆ ಆಟೋರಿಕ್ಷಾಗಳು, ಸೈಕಲ್‌ಗಳು ಹಾಗೂ ಪ್ರಯಾಣಿಕರಿಗಾಗಿ ಪ್ರತ್ಯೇಕ ಪಾರ್ಕಿಂಗ್ ಸ್ಥಳಗಳನ್ನೂ ಕಲ್ಪಿಸಲಾಗುತ್ತದೆ ಎಂದು ಹೇಳಿದ್ದಾರೆ.

# ವಿವಾಹಿತ ಮಹಿಳೆಯ ಆತ್ಮಹತ್ಯೆ ಪ್ರಕರಣ: ಮಾಜಿ ಪ್ರಿಯಕರನ ಬಂಧನ!

• ಉದಯವಾಹಿನಿ, ಬೆಂಗಳೂರು

ಆಗಸ್ಟ್ 6 ರಂದು ಆತ್ಮಹತ್ಯೆ ಮಾಡಿಕೊಂಡ 21 ವರ್ಷದ ವಿವಾಹಿತ ಮಹಿಳೆಗೆ ಕಿರುಕುಳ ನೀಡಿದ ಆರೋಪದ ಮೇಲೆ ಇಂದಿರಾನಗರ ಪೊಲೀಸರು ವ್ಯಕ್ತಿಯೊಬ್ಬರನ್ನು ಬಂಧಿಸಿದ್ದಾರೆ.

ಮಾಜಿ ಪ್ರಿಯಕರ ಆಕೆಗೆ ತನ್ನೊಂದಿಗೆ ಸಂಪರ್ಕದಲ್ಲಿರುವಂತೆ ಒತ್ತಾಯಿಸಿ ಕಿರುಕುಳ ನೀಡುತ್ತಿದ್ದಲ್ಲದೆ, ತಾನು ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಮತ್ತು ಆಕೆಯ ಜೀವನವನ್ನು ಹಾಳುಮಾಡುವುದಾಗಿ ಬೆದರಿಕೆ ಹಾಕುತ್ತಿದ್ದ ಎಂಬುದು ಸಂತ್ರಸ್ತೆಯ ತನಿಖೆಯಿಂದ ತಿಳಿದುಬಂದಿದೆ. ಇದೇ ಕಾರಣದಿಂದಾಗಿ ಆಕೆ ಈ ಕಠಿಣ ನಿರ್ಧಾರವನ್ನು ತೆಗೆದುಕೊಂಡಿರಬಹುದು ಎಂದು ಶಂಕಿಸಲಾಗಿದೆ.

ಆರೋಪಿಯನ್ನು ಕಿರಣ್ ಎಂದು ಗುರುತಿಸಲಾಗಿದೆ. ಮೃತ ಕವಿತಾ ಗೃಹಿಣಿಯಾಗಿದ್ದು, ಲಕ್ಷ್ಮೀಪುರಂ ನಿವಾಸಿಯಾಗಿದ್ದರು. ಇವರು 2024ರಲ್ಲಿ ರಾಜು ಎಂಬುವರನ್ನು ವಿವಾಹವಾಗಿದ್ದರು ಮತ್ತು ದಂಪತಿಗೆ ಒಂದೂವರೆ ವರ್ಷದ ಮಗುವಿದೆ. ಪೊಲೀಸರ ಪ್ರಕಾರ, ಕಿರಣ್ ಮತ್ತು ಕವಿತಾ ದೂರದ ಸಂಬಂಧಿಕರಾಗಿದ್ದು, ಆಕೆಯ ಮದುವೆಗೆ ಮುನ್ನ ಮೂರು ವರ್ಷಗಳ ಕಾಲ ಪ್ರೇಮ ಸಂಬಂಧದಲ್ಲಿದ್ದರು.

ತಾನೇನಾದರೂ ಮಾತುಕತೆ ನಿಲ್ಲಿಸಿದರೆ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಕಿರಣ್ ಕವಿತಾಗೆ ಸಂದೇಶಗಳ ಮೂಲಕ ಬೆದರಿಕೆ ಹಾಕುತ್ತಿದ್ದ ಎನ್ನಲಾಗಿದೆ.ಅಲ್ಲದೆ, ಆಕೆಯ ಜೀವನವನ್ನು ಹಾಳುಮಾಡುವುದಾಗಿಯೂ ಆತ ಬೆದರಿಕೆ ಹಾಕಿದ್ದ.

ಕವಿತಾಳ ಕುಟುಂಬದವರು ಕಿರಣ್‌ನಿಗೆ ಆಕೆಯಿಂದ ದೂರವಿರುವಂತೆ ಎಚ್ಚರಿಕೆ ನೀಡಿದ್ದರು. ಆದಾಗ್ಯೂ, ಆತ ಆಕೆಯನ್ನು ಸಂಪರ್ಕಿಸುವುದನ್ನು ಮತ್ತು ಕಿರುಕುಳ ನೀಡುವುದನ್ನು ಮುಂದುವರಿಸಿದ್ದ ಎಂದು ಆರೋಪಿಸಲಾಗಿದೆ.

# ಪನೀರ್' ಹೆಸರಿನಲ್ಲಿ ನಕಲಿ ಉತ್ಪನ್ನ ಮಾರಾಟಕ್ಕೆ ನಿರ್ಬಂಧ.!

## ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ತಿಳಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

> **1** ಸಗಟು ಮತ್ತು ಚಿಲ್ಲರೆ ಮಾರಾಟ
> **2** ಸಸ್ಯಜನ್ಯ ಎಣ್ಣೆ, ಸಸ್ಯಜನ್ಯ ಕೊಬ್ಬು
> **3** ಫ್ರೋಜನ್ ಡೆಸರ್ಟ್, ಪ್ರೊಸೆಸ್ಡ್ ಚೀಸ್

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಕರ್ನಾಟಕ ಸರ್ಕಾರವು ರಾಜ್ಯಾದ್ಯಂತ 'ಪನೀರ್' ಹೆಸರಿನಲ್ಲಿ ಮಾರಾಟವಾಗುತ್ತಿರುವ ಅನಲಾಗ್ ಪನೀರ್ ಉತ್ಪನ್ನಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ ಹಾಗೂ ಮಾರಾಟಕ್ಕೆ ಒಂದು ವರ್ಷದ ಅವಧಿಗೆ ನಿಷೇಧ ಹೇರಿದೆ. ಕರ್ನಾಟಕ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ಆಗಸ್ಟ್ 17ರಂದು ಈ ಕುರಿತು ಸರ್ಕಾರಿ ಅಧಿಸೂಚನೆ ಹೊರಡಿಸಿದೆ.

ಹಾಲಿನ ಕೊಬ್ಬು ಅಥವಾ ಹಾಲಿನ ಘನವಸ್ತುಗಳ ಬದಲಿಗೆ ಸಂಪೂರ್ಣವಾಗಿ ಅಥವಾ ಭಾಗಶಃ ಸಸ್ಯಜನ್ಯ ಎಣ್ಣೆ, ಸಸ್ಯಜನ್ಯ ಕೊಬ್ಬು ಅಥವಾ ಇತರ ಹಾಲೇತರ ಪದಾರ್ಥಗಳನ್ನು ಬಳಸಿ ಪನೀರ್ ರೂಪದಲ್ಲಿ ತಯಾರಿಸುವ ಉತ್ಪನ್ನವನ್ನು ಅನಲಾಗ್ ಅಥವಾ ನಾನ್-ಡೈರಿ ಪನೀರ್ ಎಂದು ಪರಿಗಣಿಸಲಾಗುತ್ತದೆ.

ಇಂತಹ ಉತ್ಪನ್ನಗಳನ್ನು 'ಪನೀರ್' ಎಂದು ಲೇಬಲ್ ಮಾಡುವುದು, ಮಾರುಕಟ್ಟೆ ಮಾಡುವುದು, ಮಾರಾಟ ಮಾಡುವುದು ಅಥವಾ ಗ್ರಾಹಕರಿಗೆ ಪನೀರ್ ಎಂದು ಪರಿಚಯಿಸುವಂತಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ 2011ರ ನಿಯಮಗಳ ಪ್ರಕಾರ, ಪನೀರ್ ಎನ್ನುವುದು ಹಾಲಿನಿಂದ ತಯಾರಿಸಲಾದ ಪ್ರಮಾಣೀಕೃತ ಆಹಾರ


☛ ಉದಯವಾಹಿನಿ ಚಿತ್ರ

ಉತ್ಪನ್ನವಾಗಿದೆ. ಪನೀರ್‌ನಲ್ಲಿ ಹಾಲಿನ ಕೊಬ್ಬು ಪ್ರಮುಖ ಅಂಶವಾಗಿದ್ದು, ಅದರ ಬದಲಿಗೆ ಸಸ್ಯಜನ್ಯ ಎಣ್ಣೆ, ಸಸ್ಯಜನ್ಯ ಕೊಬ್ಬು ಅಥವಾ ಇತರ ಹಾಲೇತರ ಪದಾರ್ಥಗಳನ್ನು ಬಳಸಲು ಅನುಮತಿ ಇಲ್ಲ ಎಂದು ಇಲಾಖೆ ತಿಳಿಸಿದೆ. ಕರ್ನಾಟಕದಲ್ಲಿ ಈಗಾಗಲೇ ಹಲವು ಪನೀರ್ ಮಾದರಿಗಳನ್ನು ಪರೀಕ್ಷಿಸಲಾಗಿದ್ದು, ತರಕಾರಿ ಎಣ್ಣೆ, ಸಸ್ಯಜನ್ಯ ಕೊಬ್ಬು ಅಥವಾ ಇತರ ಪದಾರ್ಥಗಳಿಂದ ಪನೀರ್ ಕಲಬೆರಕೆ ಮಾಡಿರುವುದು ಕಂಡುಬಂದಿಲ್ಲ ಎಂದು ಇಲಾಖೆ ಹೇಳಿದೆ.ಆದಾಗ್ಯೂ, ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಈ ನಿಷೇಧವನ್ನು ಜಾರಿಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದೆ.ನಿರ್ದಿಷ್ಟ ಗುಣಮಟ್ಟದ ಮಾನದಂಡಗಳನ್ನು ಇನ್ನೂ ನಿಗದಿಪಡಿಸದ ಅಥವಾ ಪ್ರಮಾಣೀಕರಿಸದ ಡೈರಿ ಅನಲಾಗ್ ಉತ್ಪನ್ನಗಳಿಗೆ ಮಾತ್ರ ಈ ನಿಷೇಧ ಅನ್ವಯಿಸುತ್ತದೆ. ಈಗಾಗಲೇ ಪ್ರತ್ಯೇಕ ಗುಣಮಟ್ಟದ ಮಾನದಂಡಗಳ ಅಡಿಯಲ್ಲಿ ಬರುವ ಫ್ರೋಜನ್ ಡೆಸರ್ಟ್, ಪ್ರೊಸೆಸ್ಡ್ ಚೀಸ್ ಮತ್ತು ಮಿಶ್ರ ಕೊಬ್ಬಿನ ಸ್ಪ್ರೆಡ್‌ಗಳಂತಹ ಪ್ರಮಾಣೀಕೃತ ಆಹಾರ ಉತ್ಪನ್ನಗಳಿಗೆ ಈ ಆದೇಶ ಅನ್ವಯಿಸುವುದಿಲ್ಲ ಎಂದು ಇಲಾಖೆ ತಿಳಿಸಿದೆ. ಇದಲ್ಲದೆ, ಯಾವುದೇ ಆಹಾರ ವ್ಯಾಪಾರಸ್ಥರು ಅನಲಾಗ್/ನಾನ್-ಡೈರಿ ಪನೀರ್ ಅನ್ನು ಯಾವುದೇ ಆಹಾರ ಉತ್ಪನ್ನ ಅಥವಾ ಆಹಾರ ಪದಾರ್ಥದ ತಯಾರಿಕೆಯಲ್ಲಿ ಬಳಸುವುದು, ಸಂಗ್ರಹಿಸುವುದು, ಪೂರೈಸುವುದು ಅಥವಾ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ನಿಷೇಧದ ಆದೇಶವನ್ನು ರಾಜ್ಯಾದ್ಯಂತ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ತಿಳಿಸಿದೆ. ಆಹಾರ ವ್ಯಾಪಾರಸ್ಥರು ಆದೇಶದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಇಲಾಖೆ ಸೂಚಿಸಿದೆ.

> ಆಹಾರ ಸುರಕ್ಷತೆ ಕಾಪಾಡಲು ಪ್ರತಿಯೊಂದು ಸಂದರ್ಭದಲ್ಲೂ ಅಧಿಕಾರಿಗಳಿಂದ ದಾಳಿ ನಡೆಸುವುದು ಸಾಧ್ಯವಿಲ್ಲ. ಹೀಗಾಗಿ ತಾಲ್ಲೂಕು ಮಟ್ಟದಲ್ಲಿ ವಾಚ್‌ಟೀಮ್‌ಗಳನ್ನು ರಚಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಹೇಳಿದ್ದಾರೆ.-ಸಚಿವ ಯು.ಟಿ. ಖಾದರ್



> 'ಪನೀರ್' ಹೆಸರಿನಲ್ಲಿ ಮಾರಾಟವಾಗುವ ಅನಲಾಗ್ / ನಾನ್-ಡೈರಿ ಪನೀರ್‌ನ ತಯಾರಿಕೆ, ಸಂಸ್ಕರಣೆ, ಪ್ಯಾಕಿಂಗ್, ಸಂಗ್ರಹಣೆ, ವಿತರಣೆ, ಸಾಗಣೆ, ಸಗಟು ಮತ್ತು ಚಿಲ್ಲರೆ ಮಾರಾಟ, ಮಾರಾಟಕ್ಕಾಗಿ ಪ್ರದರ್ಶನ ಹಾಗೂ ಪೂರೈಕೆಯನ್ನು ಒಂದು ವರ್ಷದ ಅವಧಿಗೆ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.ಆಯುಕ್ತ ಕೆ. ಶ್ರೀನಿವಾಸ್

# ಸುರಪುರ-ಹುಣಸಗಿ-ಕೆಂಭಾವಿಯಲ್ಲಿ ದಲ್ಲಾಳಿಗಳ ಹಾವಳಿ!

## ದಲ್ಲಾಳಿಗಳ ಕಮಿಷನ್ ಅಡ್ಡೆಯಾದ ಸರ್ಕಾರಿ ಕಚೇರಿಗಳು: ಕಣ್ಣಿದ್ದೂ ಕುರುಡಾಯಿತೇ ಜಿಲ್ಲಾಡಳಿತ?

• ಇಲಿಯಾಸ್ ಪಟೇಲ್. ಬಳಗನೂರು ರಾಜ್ಯ ವಿಶೇಷ ವರದಿಗಾರರು

• ಉದಯವಾಹಿನಿ ಯಾದಗಿರಿ:



ಉದಯವಾಹಿನಿ ಚಿತ್ರ

ಲಂಚ ಕೊಟ್ರೆ ಗಂಟೆಯಲ್ಲಿ ಕೆಲಸ, ಇಲ್ದಿದ್ರೆ ತಿಂಗಳುಗಟ್ಟಲೆ ಅಲೆದಾಟ! ಇದು ಯಾದಗಿರಿ, ಸುರಪುರ, ಹುಣಸಗಿ ಹಾಗೂ ಕೆಂಭಾವಿ ಪ್ರಮುಖ ಸರಕಾರಿ ಕಚೇರಿಗಳು ಮತ್ತು ಬ್ಯಾಂಕ್‌ಗಳ ಮುಂದೆ ಪ್ರತಿದಿನ ನಡೆಯುತ್ತಿರುವ ಕಟು ಸತ್ಯ.

ಪ್ರಜಾಪ್ರಭುತ್ವದ ದೇಗುಲವಾಗಬೇಕಿದ್ದ ಸರಕಾರಿ ಕಚೇರಿಗಳು ಹಾಗೂ ರೈತರ ಆಶಾಕಿರಣವಾಗಬೇಕಿದ್ದ ಬ್ಯಾಂಕ್‌ಗಳು ಇವತ್ತು

**1 : ದಲ್ಲಾಳಿಗಳ ಸಾರ್ವಭೌಮತ್ವ ಎಲ್ಲೆಲ್ಲಿ**
**2 : ರಾಷ್ಟ್ರೀಕೃತ ಹಾಗೂ ಕೃಷಿ ಬ್ಯಾಂಕ್‌ಗಳು**
**3 : ದಲ್ಲಾಳಿಗಳ ನಡುವಿನ 'ಸಿಂಡಿಕೇಟ್'**

ದಲ್ಲಾಳಿಗಳ (ಮಧ್ಯವರ್ತಿಗಳ) ಕಮಿಷನ್ ಅಡ್ಡೆಗಳಾಗಿ ಬದಲಾಗಿವೆ.

ಸಾಲ ಸೌಲಭ್ಯ, ಪಹಣಿ, ರೇಷನ್ ಕಾರ್ಡ್ ಅಥವಾ ಯಾವುದೇ ಮೂಲಭೂತ ಸೇವೆಗೆ ಅರ್ಜಿ ಹಿಡಿದು ಬರುವ ಮುಗ್ಧ ಸಾರ್ವಜನಿಕರನ್ನು ಕಚೇರಿ ಬಾಗಿಲಲ್ಲೇ ದಲ್ಲಾಳಿಗಳು ಮುಗ್ದರಂತೆ ಬಂದು ಗಿಟ್ಟಿಸಿಕೊಳ್ಳುತ್ತಿದ್ದಾರೆ.

ಪೌತಿ ಖಾತೆ, ಪಹಣಿ ತಿದ್ದುಪಡಿ, ವಾರಸುದಾರರ ಹೆಸರು ಸೇರ್ಪಡೆ ಮತ್ತು ಜಾತಿ/ಆದಾಯ ಪ್ರಮಾಣಪತ್ರಗಳಿಗೆ ಫಿಕ್ಸ್ ರೇಟ್! ನೇರವಾಗಿ ಹೋದರೆ ಸರ್ವರ್ ಡೌನ್ ಅಥವಾ ಸಾಹೇಬ್ರು ಸಭೆಯಲ್ಲಿದ್ದಾರೆ ಎಂಬ ನೆಪ. ಅದೇ ದಲ್ಲಾಳಿಗಳ ಕೈಗೆ 2,000 ದಿಂದ 10,000 ಇಟ್ಟರೆ ಕಡತಗಳಿಗೆ ಕ್ಷಣಾರ್ಧದಲ್ಲಿ ರೆಕ್ಕೆ ಬರುತ್ತದೆ. ಬೆಳೆ ಸಾಲ ಮುಂಜೂರಾತಿ, ಸಾಲ ಮನ್ನಾ ಸೌಲಭ್ಯ, ಬೆಳೆ ವಿಮೆ ಮತ್ತು ಹೊಸ ಖಾತೆ ತೆರೆಯಲು ದಲ್ಲಾಳಿಗಳದ್ದೇ ಕಾರುಬಾರು.

ಬಡ ರೈತನಿಗೆ ಸಿಗಬೇಕಾದ ಸಾಲದ ಶೇಕಡಾವಾರು ಹಣ ಮಧ್ಯವರ್ತಿಗಳ ಜೇಬು ಸೇರುತ್ತಿದೆ. ದಲ್ಲಾಳಿಗಳ ಶಿಫಾರಸು ಇಲ್ಲದೆ ಹೋದರೆ ರೈತರ ಕಡತಗಳು ಮೂಲೆಯಲ್ಲಿ ಧೂಳು ತಿನ್ನುತ್ತವೆ. ಇ-ಸ್ವತ್ತು ಖಾತಾ ಬದಲಾವಣೆ, ಮನೆ ನಿರ್ಮಾಣ ಅನುಮತಿ ಹಾಗೂ ಕುಡಿಯುವ ನೀರಿನ ನಳ ಸಂಪರ್ಕಕ್ಕೂ ದಲ್ಲಾಳಿಗಳ ಹಸ್ತಕ್ಷೇಪ ಕಡ್ಡಾಯ ಎಂಬಂತಾಗಿದೆ.

ಆಧಾರ್ ತಿದ್ದುಪಡಿ, ರೇಷನ್ ಕಾರ್ಡ್‌ನಲ್ಲಿ ಹೆಸರು ಸೇರ್ಪಡೆ/ತೆಗೆದುಹಾಕುವ ಸಣ್ಣ ಕೆಲಸಕ್ಕೂ ಸರಕಾರ ನಿಗದಿಪಡಿಸಿದ ಶುಲ್ಕಕ್ಕಿಂತ 5 ರಿಂದ 10 ಪಟ್ಟು ಹೆಚ್ಚು ಹಣ ಸುಲಿಗೆ ಮಾಡಲಾಗುತ್ತಿದೆ. ಇದು ಕೇವಲ ದಲ್ಲಾಳಿಗಳ ಹಾವಳಿಯಲ್ಲ, ಕಚೇರಿಯ ಒಳಗಿರುವ ಕೆಲವು ಭ್ರಷ್ಟ ಅಧಿಕಾರಿಗಳು ಮತ್ತು ಸಿಬ್ಬಂದಿ ನಡೆಸುತ್ತಿರುವ ರಹಸ್ಯ 'ಸಿಂಡಿಕೇಟ್'. ಕಚೇರಿಯ ಒಳಗೆ ಯಾವ ಕೆಲಸಕ್ಕೆ ಎಷ್ಟು ರೇಟ್ ಎಂಬುದನ್ನು ದಲ್ಲಾಳಿಗಳೇ ನಿರ್ಧರಿಸುತ್ತಾರೆ.

ಸಾರ್ವಜನಿಕರು ನೇರವಾಗಿ ಅಧಿಕಾರಿಯನ್ನು ಭೇಟಿಯಾಗಲು ಹೋದರೆ ಸೂಕ್ತ ಸ್ಪಂದನೆ ಸಿಗುವುದಿಲ್ಲ, ಅದೇ ದಲ್ಲಾಳಿ ಜೊತೆ ಹೋದರೆ ಅಧಿಕಾರಿಗಳ ಮುಖದಲ್ಲಿ ಮಂದಹಾಸ ಮೂಡುತ್ತದೆ! ಪ್ರತಿಯೊಂದು ಸರಕಾರಿ ಕಚೇರಿ ಹಾಗೂ ಬ್ಯಾಂಕ್‌ಗಳ ಆವರಣದಲ್ಲಿ ಸಿಸಿಟಿವಿ ಅಳವಡಿಸಿ, ನಿರಂತರವಾಗಿ ಕಚೇರಿ ಸುತ್ತ ತಂಗುವ ದಲ್ಲಾಳಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕು. ಜನಸಾಮಾನ್ಯರ ರಕ್ತ ಹೀರುತ್ತಿರುವ ಈ ದಲ್ಲಾಳಿಗಳ ಜಾಲವನ್ನು ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳು ಮಟ್ಟ ಹಾಕುತ್ತಾರೋ ಅಥವಾ ಕಣ್ಣಿದ್ದು ಕುರುಡಾಗಿದ್ದಾರೋ ಕಾದು ನೋಡಬೇಕಿದೆ.

**ಸಕಾಲು ಯೋಜನೆ ಹಾಗೂ ಪ್ರತಿಯೊಂದು ಸೇವೆಗೆ ತಗಲುವ ನಿಗದಿತ ಸರಕಾರಿ ಶುಲ್ಕದ ದೊಡ್ಡ ಮಾಹಿತಿ ಫಲಕವನ್ನು ಸಾರ್ವಜನಿಕರಿಗೆ ಕಾಣುವಂತೆ ಕಡ್ಡಾಯವಾಗಿ ಹಾಕಬೇಕು.ದಲ್ಲಾಳಿಗಳ ಕಿರುಕುಳ ಅಥವಾ ಲಂಚದ ಬೇಡಿಕೆ ಬಂದಲ್ಲಿ ಸಾರ್ವಜನಿಕರು ನೇರವಾಗಿ ದೂರು ನೀಡಲು ತಾಲ್ಲೂಕುವಾರು ವಾಟ್ಸಾಪ್ /ಹೆಲ್ಪ್‌ಲೈನ್ ಸಂಖ್ಯೆ ಬಿಡುಗಡೆ ಮಾಡಬೇಕು.**



**ಕಂದಾಯ ಕಚೇರಿಯಿಂದ ಬ್ಯಾಂಕ್‌ಗಳವರೆಗೆ ಪ್ರತಿಯೊಂದು ಕೆಲಸಕ್ಕೂ ದಲ್ಲಾಳಿಗಳ ಕಮಿಷನ್ ನಿಗದಿಯಾಗಿದೆ. ಬಡ ರೈತನಿಗೆ ಸಿಗಬೇಕಾದ ಸಾಲ ಮತ್ತು ಬೆಳೆ ವಿಮೆಯಲ್ಲೂ ಮಧ್ಯವರ್ತಿಗಳು ಲೂಟಿ ಮಾಡುತ್ತಿದ್ದಾರೆ ಎಂದರೆ ಈ ಆಡಳಿತ ವ್ಯವಸ್ಥೆ ಸಂಪೂರ್ಣವಾಗಿ ಸತ್ತು ಹೋಗಿದೆಯಾ? ನಾವು ಜಿಲ್ಲಾಡಳಿತಕ್ಕೆ ನೇರ ಎಚ್ಚರಿಕೆ ನೀಡುತ್ತಿದ್ದೇವೆ ತಕ್ಷಣವೇ ಸರ್ಕಾರಿ ಕಚೇರಿಗಳಿಂದ ಈ ದಲ್ಲಾಳಿಗಳನ್ನು ಆಚೆ ಅಟ್ಟಿ, ಭ್ರಷ್ಟ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತುಕ್ರಮ ಕೈಗೊಳ್ಳಬೇಕು.**
**-ನಿಂಗಣ್ಣ ಗೋನಾಲ**

## 40 ಕೋಟಿ ವೆಚ್ಚದಲ್ಲಿ 6 ಪಥದ ಅಂಡರ್‌ಪಾಸ್ ನಿರ್ಮಾಣ:ಜಿಗಜಿಣಗಿ

• ಉದಯವಾಹಿನಿ ವಿಜಯಪುರ, :



ಉದಯವಾಹಿನಿ ಚಿತ್ರ

ಜಿಲ್ಲೆಯ ಜನರು ಕಳೆದ 45 ವರ್ಷಗಳಿಂದ ಯಾವುದೇ ಬೇಡಿಕೆ ಇಡದೆ ತಮ್ಮ ಮತ ನೀಡಿ ನನ್ನನ್ನು ಗೆಲ್ಲಿಸಿಕೊಂಡು ಇಷ್ಟು ಎತ್ತರಕ್ಕೆ ಬೆಳೆಸಿದ್ದಾರೆ. ಅವರ ಋಣವನ್ನು ಎಂದಿಗೂ ತೀರಿಸಲು ಸಾಧ್ಯವಿಲ್ಲ. ಆದರೆ ಅವರ ಹೃದಯದಲ್ಲಿ ಶಾಶ್ವತವಾಗಿ ಉಳಿಯುವಂತಹ ಅಭಿವೃದ್ಧಿ ಕಾರ್ಯಗಳನ್ನು ಮಾಡುವ ಮೂಲಕ ಜನರ ಸೇವೆ ಮುಂದುವರಿಸುತ್ತೇನೆ ಎಂದು ಸಂಸದ ರಮೇಶ ಜಿಗಜಿಣಗಿ ಭಾವುಕರಾಗಿ ಹೇಳಿದರು. ನಗರದ ಗಣೇಶನಗರದ ಹೊರವಲಯದಲ್ಲಿ ಬೆಂಗಳೂರು-ಸೊಲ್ಲಾಪುರ ರಾಷ್ಟ್ರೀಯ ಹೆದ್ದಾರಿ-50ರಲ್ಲಿ ನಿರ್ಮಾಣಗೊಳ್ಳುತ್ತಿರುವ 6 ಪಥದ ಅಂಡರ್‌ಪಾಸ್ ಕಾಮಗಾರಿಯನ್ನು ವೀಕ್ಷಿಸಿ ಅವರು ಮಾತನಾಡಿದರು.

ಈ ಭಾಗದಲ್ಲಿ ರಾಷ್ಟ್ರೀಯ ಹೆದ್ದಾರಿ ದಾಟುವ ಸಂದರ್ಭದಲ್ಲಿ ರೈತರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು. ಬೈಕ್ ಸವಾರರು ಅಪಘಾತಕ್ಕೀಡಾಗಿ ಮೃತಪಟ್ಟ ಘಟನೆಗಳೂ ನಡೆದಿವೆ. ಇಬ್ರಾಹಿಂಪುರ ಭಾಗದ ರೈತರು ತಮ್ಮ ಜಮೀನುಗಳಿಗೆ ತೆರಳಲು ಎದುರಿಸುತ್ತಿದ್ದ ಸಮಸ್ಯೆ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಗಮನ ಸೆಳೆದು ಕಾಮಗಾರಿಗೆ ಮಂಜೂರಾತಿ ಪಡೆಯಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಈ ರಸ್ತೆ ಮತ್ತಷ್ಟು ವಿಸ್ತರಣೆಯಾಗುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಸುಮಾರು 40 ಕೋಟಿ ವೆಚ್ಚದಲ್ಲಿ 6 ಪಥದ ಅಂಡರ್‌ಪಾಸ್ ಹಾಗೂ ಎರಡೂ ಬದಿಗಳಲ್ಲಿ ಸರ್ವಿಸ್ ರಸ್ತೆ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು. ರಾಜಕಾರಣದಲ್ಲಿ ಮುಂದುವರಿಯಲಿ ಅಥವಾ ಇಲ್ಲದಿರಲಿ, ಉಸಿರು ಇರುವವರೆಗೂ ಜನಸೇವೆ ಮುಂದುವರಿಸುತ್ತೇನೆ. ರಾಜಕಾರಣದಿಂದ ದೂರವಾದರೂ ಜನರ ಸೇವೆಯಿಂದ ಹಿಂದೆ ಸರಿಯುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

**ಜನಪ್ರತಿನಿಧಿಗಳು ಶೌಚಾಲಯ ನಿರ್ಮಿಸಿದರೂ ಫೋಟೋ ತೆಗೆಸಿಕೊಂಡು ಪ್ರಚಾರ ಮಾಡಿಕೊಳ್ಳುತ್ತಾರೆ. ಆದರೆ ತಾನು ಎಂದಿಗೂ ತೋರಿಕೆಯ ಕೆಲಸಗಳಿಗೆ ಆದ್ಯತೆ ನೀಡಿಲ್ಲ. ಜಿಲ್ಲೆಗೆ ಸಾಧ್ಯವಾದಷ್ಟು ಹೆಚ್ಚಿನ ಅನುದಾನ ತಂದು ಶಕ್ತಿಮೀರಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತೇನೆ ಎಂದು ಹೇಳಿದರು.-ಜಿಗಜಿಣಗಿ**

## ಬಿಜೆಪಿಯ ಅನಿರ್ದಿಷ್ಟಾವಧಿ ಧರಣಿ ಅಂತ್ಯ

• ಉದಯವಾಹಿನಿ ವಿಜಯಪುರ, :

ಸಚಿವ ಬಿ.ನಾಗೇಂದ್ರ, ಅವರ ರಾಜೀನಾಮೆ ಹಾಗೂ ವಿಜಯಪುರ ಜಿಲ್ಲೆಯನ್ನು ಬರಪೀಡಿತವೆಂದು ಘೋಷಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬಿಜೆಪಿ ಸಿಂದಗಿ ವಿಧಾನಸಭಾ ಕ್ಷೇತ್ರದ ಮಂಡಲದ ವತಿಯಿಂದ ನಗರದಲ್ಲಿ ಹಮ್ಮಿಕೊಂಡಿದ್ದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಶುಕ್ರವಾರ ನಾಲ್ಕನೇ ದಿನಕ್ಕೆ ಕಾಲಿಟ್ಟು ಅಂತ್ಯಗೊಂಡಿತು. ಧರಣಿ ನಿರತ ಬಿಜೆಪಿ ಕಾರ್ಯಕರ್ತರು ಕೆಲಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಧರಣಿ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾಕಾರರಿಂದ ಮನವಿ ಪತ್ರ ಸ್ವೀಕರಿಸಿದರು. ಧರಣಿಯ ನೇತೃತ್ವ ವಹಿಸಿದ್ದ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ''ತಾವು ಎಸ್‌ಟಿ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕೆ ಬಿಜೆಪಿಯವರು ತಮ್ಮ ವಿರುದ್ಧ ಹೋರಾಟ ಮಾಡುತ್ತಿದ್ದಾರೆ ಎಂದು ಸಚಿವ ನಾಗೇಂದ್ರ ಆರೋಪಿಸುತ್ತಾರೆ. ಆದರೆ ಅದೇ ಸಮುದಾಯದ ಅಭಿವೃದ್ಧಿಗೆ ಮೀಸಲಾದ ಅನುದಾನ ದುರ್ಬಳಕೆಯಾದಾಗ ಅವರಿಗೆ ಕಾಳಜಿ ಇರಲಿಲ್ಲವೇ?'' ಎಂದು ಪ್ರಶ್ನಿಸಿದರು. ''ಪರಿಶಿಷ್ಟರ ಅನುದಾನ ದುರ್ಬಳಕೆ ಹಾಗೂ ವಾಲ್ಮೀಕಿ ನಿಗಮದ ಬಹುಕೋಟಿ ಹಗರಣದ ಆರೋಪಗಳ ನಡುವೆಯೂ ಕಳಂಕಿತರಿಗೆ ಸಂಪುಟದಲ್ಲಿ ಅವಕಾಶ ನೀಡುವ ಮೂಲಕ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರಕ್ಕೆ ಬೆಂಬಲ ನೀಡಿದೆ. ರಾಜ್ಯದಲ್ಲಿ ಮಳೆ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದು, ಜನ-ಜಾನುವಾರುಗಳು ಕುಡಿಯುವ ನೀರಿಗಾಗಿ ಪರದಾಡುತ್ತಿವೆ. ಸರ್ಕಾರ ಕೂಡಲೇ ಬರ ಪರಿಹಾರ ಘೋಷಿಸಬೇಕು. ಪರಿಹಾರಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರತ್ತ ಕೈ ತೋರಿಸುವುದನ್ನು ರಾಜ್ಯ ಸರ್ಕಾರ ಬಿಡಬೇಕು. ಎಲ್ಲದಕ್ಕೂ ಕೇಂದ್ರ ಸರ್ಕಾರವೇ ಪರಿಹಾರ ನೀಡಬೇಕಾದರೆ ರಾಜ್ಯ ಸರ್ಕಾರಗಳು ಏಕೆ ಇರಬೇಕು?'' ಎಂದು ಪ್ರಶ್ನಿಸಿದರು.

## ಮೊಬೈಲ್ ವ್ಯಸನದ ವಿರುದ್ಧ ಜನಜಾಗೃತಿ ಮೂಡಿಸುವ 73 ವಯಸ್ಸಿನ ವೃದ್ಧ: 500 ಕಿಮೀ ಸೈಕಲ್ ಯಾತ್ರೆ

• ಉದಯವಾಹಿನಿ ಬಾಗಲಕೋಟೆ:



ಉದಯವಾಹಿನಿ ಚಿತ್ರ

ವಯಸ್ಸಾದಂತೆ ಜನರು ಸುತ್ತಾಟಕ್ಕೆ ಬ್ರೇಕ್ ಹಾಕಿ ವಿಶ್ರಾಂತಿ ತೆಗೆದುಕೊಳ್ಳುತ್ತಾರೆ. ಆದರೆ, ರಮೇಶ್ ಪೂಜಾರಿ ಎಂಬ 73 ವರ್ಷದ ವೃದ್ಧ ಸೈಕಲ್ ಏರಿ ನೂರಾರು ಕಿಲೋಮೀಟರ್‌ಗಳ ದೂರ ಕ್ರಮಿಸುತ್ತಾ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ.

'ಸೈಕಲ್ ಭೀಷ್ಮ' ಎಂದೇ ಜನಪ್ರಿಯರಾಗಿರುವ ರಮೇಶ್ ಪೂಜಾರಿ, ಸಂಕೇಶ್ವರದಿಂದ ಕೂಡಲ ಸಂಗಮದವರೆಗೆ ಸೈಕಲ್ ಜಾಥಾ ಕೈಗೊಂಡಿದ್ದು, ಸಂಗಮನಾಥನ ದರ್ಶನ ಪಡೆದು ಬಾಗಲಕೋಟೆ ಮಾರ್ಗವಾಗಿ ಮತ್ತೆ ಸಂಕೇಶ್ವರದತ್ತ ಪ್ರಯಾಣಿಸುತ್ತಿದ್ದ ಸಂದರ್ಭದಲ್ಲಿ ಮಾತಿಗೆ ಸಿಕ್ಕರು. ಅವರ ಸೈಕಲ್‌ಗೆ ಜಾಗೃತಿ ಚಿತ್ರಪಟದಲ್ಲಿ ''ಮಕ್ಕಳಿಗೆ ಮೊಬೈಲ್ ಕೊಡಬೇಡಿ, ಮೊಬೈಲ್ ಬಳಕೆಯಿಂದ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಬಹುದು'' ಎಂಬ ಸಾಮಾಜಿಕ ಸಂದೇಶ ಸಾರುತ್ತಿತ್ತು. ಇದು ಕೇವಲ ಸೈಕಲ್ ಯಾತ್ರೆಯಲ್ಲ, ಮಕ್ಕಳ ಭವಿಷ್ಯ ಮತ್ತು ಯುವಜನರ ಆರೋಗ್ಯದ ಬಗ್ಗೆ ಸಮಾಜಕ್ಕೆ ಎಚ್ಚರಿಕೆ ನೀಡುವ ಜಾಗೃತಿ ಯಾತ್ರೆ ಎಂದು ತಮಗಿದ್ದ ಸಾಮಾಜಿಕ ಕಳಕಳಿ ಕುರಿತು ವಿವರಣೆ ನೀಡಿದರು. ಮೊಬೈಲ್ ವ್ಯಸನದ ವಿರುದ್ಧ ಹೋರಾಟ: ಇಂದಿನ ದಿನಗಳಲ್ಲಿ ಪುಟ್ಟ ಪುಟ್ಟ ಮಕ್ಕಳ ಕೈಯಲ್ಲೂ ಮೊಬೈಲ್ ಸಾಮಾನ್ಯವಾಗಿಬಿಟ್ಟಿದೆ. ಮೊಬೈಲ್‌ನ ಅತಿಯಾದ ಬಳಕೆಯಿಂದ ಮಕ್ಕಳ ದೈಹಿಕ ಚಟುವಟಿಕೆ ಕಡಿಮೆಯಾಗುವುದರ ಜೊತೆಗೆ, ಅವರ ಆರೋಗ್ಯ ಮತ್ತು ಜೀವನಶೈಲಿಯ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ.

ಇದೇ ವಿಚಾರವನ್ನು ಜನರಿಗೆ ತಲುಪಿಸುವ ಉದ್ದೇಶದಿಂದಲೇ ಸೈಕಲ್ ಮೂಲಕ ಜಾಗೃತಿ ಮೂಡಿಸುತ್ತಿದ್ದೇವೆ. ಇದರ ಜೊತೆಗೆ ಯುವಜನರು ಅತಿ ವೇಗವಾಗಿ ವಾಹನ ಚಲಾಯಿಸುವುದರಿಂದ ಸಂಭವಿಸುವ ಅಪಾಯಗಳ ಬಗ್ಗೆಯೂ ಜನರಲ್ಲಿ ಅರಿವು ಮೂಡಿಸುತ್ತಿರುವುದಾಗಿ ರಮೇಶ್ ಪೂಜಾರಿ ಹೇಳಿಕೊಂಡರು.

500 ಕಿ.ಮೀ. ಸೈಕಲ್ ಯಾತ್ರೆ: ಸಂಕೇಶ್ವರದಿಂದ ಮಂಗಳೂರಿನ ಕುದ್ರೋಳಿ ಶ್ರೀ ಗೋಕರ್ಣನಾಥ ಕ್ಷೇತ್ರದವರೆಗೆ 500 ಕಿಲೋಮೀಟರ್‌ಗೂ ಅಧಿಕ ದೂರವನ್ನು ಸೈಕಲ್‌ನಲ್ಲಿ ಕ್ರಮಿಸಲಾಗಿದೆ. ಈ ಯಾತ್ರೆಯ ಉದ್ದೇಶವೂ ಮೊಬೈಲ್ ವ್ಯಸನ ಹಾಗೂ ಅತಿವೇಗದ ವಾಹನ ಚಾಲನೆಯ ವಿರುದ್ಧ ಜಾಗೃತಿ ಮೂಡಿಸುವುದಾಗಿದೆ ಎಂದು ರಮೇಶ್ ಪೂಜಾರಿ ತಮಗಿದ್ದ ಸಾಮಾಜಿಕ ಕಳಕಳಿ ಕುರಿತು ಹೇಳಿಕೊಂಡರು. ಮಂಗಳೂರಿಗೆ ತಲುಪಿದ ಸಂದರ್ಭದಲ್ಲಿ ಕುದ್ರೋಳಿ ದೇವಸ್ಥಾನ ಸಮಿತಿಯಿಂದ ಅವರನ್ನು ಗೌರವಿಸಿ ಸನ್ಮಾನ ಕೂಡ ಮಾಡಲಾಯಿತು.

## ಖರ್ಗೆ ಅವಮಾನ ಖಂಡಿಸಿ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ

• ಉದಯವಾಹಿನಿ ವಿಜಯಪುರ, :



ಉದಯವಾಹಿನಿ ಚಿತ್ರ

ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಮಾನ ಮಾಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಡಾ. ಡಿ.ಆರ್. ಸಾಗರ ಬಣ) ವಿಜಯಪುರ ಜಿಲ್ಲಾ ಸಮಿತಿ ವತಿಯಿಂದ ನಗರದಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿ ಡಾ. ಆನಂದ್ ಅವರ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸಿದ್ದು ರಾಯಣ್ಣ ಅವರು, ಅಸಮಾನತೆ ಹಾಗೂ ಅವಮಾನವನ್ನು ವಿರೋಧಿಸಿ ಜೀವನವಿಡೀ ಹೋರಾಡಿದ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯಗಳನ್ನು ಸಂವಿಧಾನದ ಮೂಲಕ ಸಾಕಾರಗೊಳಿಸಲಾಗಿದೆ. ಆದರೆ ಸಂವಿಧಾನ ಜಾರಿಯಾಗಿ 77 ವರ್ಷಗಳಾದರೂ ದೇಶದಲ್ಲಿ ಅಸ್ಪೃಶ್ಯತೆ ಇನ್ನೂ ಜೀವಂತವಾಗಿರುವುದು ವಿಷಾದನೀಯ ಎಂದರು.ಉತ್ತರಾಖಂಡದ ರಾಮಲೀಲಾ ಮೈದಾನದಲ್ಲಿ ಆ.8ರಂದು ನಡೆದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ ಸ್ಥಳವನ್ನು ನಂತರ ಕೆಲವರು ಸ್ವಚ್ಛಗೊಳಿಸಿ ಹೋಮ-ಹವನ ನಡೆಸಿರುವುದು ಅತ್ಯಂತ ಖಂಡನೀಯ. ಜಾತಿಯ ಹಿನ್ನೆಲೆಯಲ್ಲಿ ಈ ರೀತಿಯ ಕೃತ್ಯ ಎಸಗುವ ಮೂಲಕ ರಾಷ್ಟ್ರೀಯ ನಾಯಕರಿಗೆ ಅವಮಾನ ಮಾಡಲಾಗಿದೆ ಎಂದು ಅವರು ಆರೋಪಿಸಿದರು.

1927ರಲ್ಲಿ ಮಹಾಡ್ ಚೌದರ್ ಕೆರೆಯ ನೀರನ್ನು ದಲಿತರು ಕುಡಿದ ಸಂದರ್ಭದಲ್ಲಿ ಮೇಲ್ಜಾತಿಯವರು ಗೋಮೂತ್ರ ಹಾಗೂ ಸೆಗಣಿಯನ್ನು ಹಾಕಿ ನೀರನ್ನು 'ಶುದ್ಧೀಕರಿಸಿದ' ಘಟನೆ ಸೇರಿದಂತೆ ಅಸ್ಪೃಶ್ಯತೆಯ ವಿರುದ್ಧ ಡಾ. ಅಂಬೇಡ್ಕರ್ ನಡೆಸಿದ ಹೋರಾಟವನ್ನು ಸ್ಮರಿಸಿದ ಅವರು, ಇಂತಹ ಅಮಾನವೀಯ ಪದ್ಧತಿಗಳು ಮತ್ತೆ ತಲೆದೋರುವುದನ್ನು ತಡೆಯಬೇಕಾಗಿದೆ ಎಂದು ಹೇಳಿದರು.

**ಜಾತಿ ಆಧಾರಿತ ಅಸ್ಪೃಶ್ಯತೆ ಆಚರಿಸುವವರ ವಿರುದ್ಧ ದೇಶದ್ರೋಹ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆ ಸೇರಿದಂತೆ ಸೂಕ್ತ ಕಾನೂನುಗಳಡಿ ಪ್ರಕರಣ ದಾಖಲಿಸಿ, ಆರೋಪಿಗಳನ್ನು ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.**

## ಸಿ.ಎ.ವೈ.ಎಫ್ ಮತ್ತು ಸೂಪರ್ ಮೇಗಾ ವೃತ್ತಿ ಸಮಾಲೋಚನಾ ಕಾರ್ಯಕ್ರಮ

• ಉದಯವಾಹಿನಿ ಬಳ್ಳಾರಿ, :



ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳಲ್ಲಿ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ವೃತ್ತಿಯ ಕುರಿತು ಅರಿವು ಮೂಡಿಸುವುದು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಈ ಪ್ರತಿಷ್ಠಿತ ವೃತ್ತಿಪರ ಕೋರ್ಸ್ಗೆ ಸೇರ್ಪಡೆಯಾಗುವಂತೆ ಪ್ರೇರೇಪಿಸುವ ಉದ್ದೇಶದಿಂದ ಐಸಿಎಐ ವೃತ್ತಿ ಸಮಾಲೋಚನಾ ಸಮಿತಿ ವತಿಯಿಂದ ಆಯೋಜಿಸಲಾದ ಸಿ.ಎ.ವೈ.ಎಫ್ ಮತ್ತು ಸೂಪರ್ ಮೇಗಾ ವೃತ್ತಿ ಸಮಾಲೋಚನಾ ಕಾರ್ಯಕ್ರಮ ಕಾಲ 5 ಅನ್ನು ಬಳ್ಳಾರಿ ನಗರದ 40ಕ್ಕೂ ಹೆಚ್ಚು ಕಾಲೇಜುಗಳು ಸೇರಿದಂತೆ ಸಿರುಗುಪ್ಪ, ಸಿಂಧನೂರು, ಹಗರಿಬೊಮ್ಮನಹಳ್ಳಿ ಹಾಗೂ ಕೊಟ್ಟೂರುಗಳಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ಆಗಸ್ಟ್ 21ರಂದು ನಡೆದ ಈ ಅಭಿಯಾನದಲ್ಲಿ ಸುಮಾರು 60ಕ್ಕೂ ಹೆಚ್ಚು ಐಸಿಎಐ ಸದಸ್ಯರು ಭಾಗವಹಿಸಿ 6,500ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಿಎ ಕೋರ್ಸ್ನ ಅವಕಾಶಗಳು, ವಿದ್ಯಾಭ್ಯಾಸದ ವಿಧಾನ, ವೃತ್ತಿ ಅವಕಾಶಗಳು ಹಾಗೂ ಭವಿಷ್ಯದ ಸಾಧ್ಯತೆಗಳ ಕುರಿತು ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದ ಮುಂದುವರಿದ ಭಾಗವಾಗಿ ಆಗಸ್ಟ್ 24ರಂದು ಸಹ ವಿವಿಧ ಶಿಕ್ಷಣ ಸಂಸ್ಥೆಗಳಲ್ಲಿ ವೃತ್ತಿ ಮಾರ್ಗದರ್ಶನ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಐಸಿಎಐ ಬಳ್ಳಾರಿ ಶಾಖೆಯ ಅಧ್ಯಕ್ಷರಾದ ಸಿಎ ಪುರುಷೋತ್ತಮರೆಡ್ಡಿ ಅವರು, ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ಚಾರ್ಟರ್ಡ್ ಅಕೌಂಟೆನ್ಸಿ ಕೋರ್ಸ್ಗೆ ಸೇರ್ಪಡೆಯಾಗಬೇಕು ಎಂದು ಕರೆ ನೀಡಿದರು. ಅತ್ಯಂತ ಕಡಿಮೆ ವೆಚ್ಚದಲ್ಲಿ ಉನ್ನತ ಮಟ್ಟದ ವೃತ್ತಿಪರ ಶಿಕ್ಷಣ ಪಡೆಯಲು ಸಿಎ ಕೋರ್ಸ್ ಉತ್ತಮ ಅವಕಾಶವಾಗಿದ್ದು, ಕೋರ್ಸ್ ಪೂರ್ಣಗೊಳಿಸಿದ ನಂತರ ಉದ್ಯೋಗದ ಜೊತೆಗೆ ಸ್ವಂತ ಕಚೇರಿ ಆರಂಭಿಸಿ ಸ್ವತಂತ್ರವಾಗಿ ಪ್ರಾಕ್ಟೀಸ್ ಮಾಡುವ ಅವಕಾಶವೂ ಇದೆ ಎಂದು ತಿಳಿಸಿದರು.

**ಉದ್ಯಮಗಳ ಅಭಿವೃದ್ಧಿ ಹಾಗೂ ಉತ್ತಮ ಹಣಕಾಸು ನಿರ್ವಹಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ವೃತ್ತಿಪರರ ಅವಶ್ಯಕತೆ ಇದೆ. ಆದ್ದರಿಂದ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.**

# ಪಾತಾಳಕ್ಕೆ ಕುಸಿದ 'ಕೆಂಪು ಸುಂದರಿ'ಯ ದರ: ನೊಂದ ರೈತನಿಂದ ಇಡೀ ಬೆಳೆ ನಾಶ

## ಮಾರುಕಟ್ಟೆಯಲ್ಲಿ ಟೊಮೆಟೊ ಬೆಲೆ ತೀವ್ರ ಕುಸಿತ ಕಂಡಿದ್ದು, ಕಂಗಾಲಾದ ರೈತ ಬೆಳೆಯನ್ನು ನಾಶ ಪಡಿಸಿದ್ದಾನೆ.

• ಉದಯವಾಹಿನಿ ದಾವಣಗೆರೆ:





ಉದಯವಾಹಿನಿ ಚಿತ್ರ

01 ಕೆಜಿಗೆ 1 ರೂಪಾಯಿಯಂತೆ ಮಾರುಕಟ್ಟೆಯಲ್ಲಿ ಟೊಮೆಟೊ ಮಾರಾಟವಾಗುತ್ತಿದ್ದು, ದರ ಕುಸಿತದಿಂದ ಆಘಾತಕ್ಕೊಳಗಾಗಿರುವ ಬೇತೂರು ಗ್ರಾಮದ ರೈತರು ಬೆಳೆಸಿದ್ದ ಟೊಮೆಟೊ ಬೆಳೆಯನ್ನು ಕೈಯಾರೆ ನಾಶ ಮಾಡಿದ್ದು, 25 ಎಕರೆಯಲ್ಲಿನ ಬೆಳೆ ಮಣ್ಣುಪಾಲಾಗಿದೆ. ರೈತ ಮಂಜಪ್ಪ ಎನ್ನುವರು ಸಾಲ ಮಾಡಿ ಒಂದು ಎಕರೆಗೆ 80 ಸಾವಿರದಿಂದ 1ಲಕ್ಷ ತನಕ ಹಣ ವ್ಯಯ ಮಾಡಿ ಟೊಮೆಟೊ

**1 : ಗೊಬ್ಬರ, ಕೂಲಿಗಳಾ ದರ ಗಗನಕ್ಕೇ**
**2 : ಟೊಮೆಟೊ ದರ ಪಾತಾಳಕ್ಕೆ**
**3 : ಕನಿಷ್ಠ 5 ಜನ ಕೂಲಿ ಆಳುಗಳ**

ಬೆಳೆದಿದ್ದರು. ದರ ಕುಸಿತದಿಂದ ಫಸಲಿಗೆ ಬಂದ ಕೆಂಪು ಸುಂದರಿಯನ್ನು ಮಾರುಕಟ್ಟೆಗೆ ಸಾಗಿಸಲು ಮಂಜಪ್ಪ ಹಿಂದೇಟು ಹಾಕಿದ್ದಾರೆ. ಮಾರುಕಟ್ಟೆಯಲ್ಲಿ ಒಂದು ಬಾಕ್ಸ್‌ಗೆ ಮೂವತ್ತು ರೂಪಾಯಿ ಬೆಲೆ ಸಿಗುತ್ತಿರುವುದರಿಂದ ರೈತರು ಅಕ್ಷರಶಃ ರೋಸಿ ಹೋಗಿದ್ದಾರೆ.

ಅದೇ ಗ್ರಾಮದ ರೈತ ಮಹಿಳೆ ಹನುಮಕ್ಕ ಕೂಡ ಸಾಲ ಮಾಡಿ ಒಂದು ಮುಕ್ಕಾಲು ಎಕರೆಯಲ್ಲಿ ಟೊಮೆಟೊ ಬೆಳೆದಿದ್ದು, ಅವರು ಕೂಡ ಅಳಿಸಿ ಹಾಕಲು ಮುಂದಾಗಿದ್ದಾರೆ. ಮಾರುಕಟ್ಟೆಗೆ ಸಾಗಿಸುವ ಕೂಲಿ ಸಮೇತ ಸಿಗಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಗೊಬ್ಬರ, ಕೂಲಿಗಳಾ, ಹುರಿ, ದರ ಗಗನಕ್ಕೇ, ಟೊಮೆಟೊ ದರ ಪಾತಾಳಕ್ಕೆ!: ಜಮೀನಿಗೆ ದಿನಗೂಲಿ ಆಳುಗಳನ್ನು ಕರೆಸಿದರೆ ಒಬ್ಬರಿಗೆ ಐದುನೂರು ರೂಪಾಯಿ ಕೊಡಬೇಕು ಮತ್ತು ನಿತ್ಯ ಕನಿಷ್ಠ 5 ಜನ ಕೂಲಿ ಆಳುಗಳ ಖರ್ಚು ಎರಡೂವರೆ ಸಾವಿರ ರೂಪಾಯಿ ತಲುಪುತ್ತದೆ. ಜಮೀನಿನಿಂದ ಮಾರುಕಟ್ಟೆಗೆ ಟೊಮೆಟೊ ಸಾಗಿಸಲು ಆಟೋ ಬಾಡಿಗೆ ದೊಡ್ಡ ತಲೆನೋವಾಗಿದ್ದು, ಒಂದು ಬಾಕ್ಸ್‌ಗೆ ಇಪ್ಪತ್ತು ರೂಪಾಯಿಯಂತೆ, ಬರೋಬ್ಬರಿ 70 ಬಾಕ್ಸ್‌ಗಳನ್ನು ಕೊಂಡೊಯ್ಯಲು ಸಾವಿರಾರು ರೂಪಾಯಿ ಸುರಿಯಬೇಕು.

ಮಾರುಕಟ್ಟೆಗೆ ಒಯ್ದರೆ ಅಲ್ಲಿ ಕೇಳುವವರೇ ದಿಕ್ಕಿಲ್ಲ. ಸಾಗಣೆ ವೆಚ್ಚವನ್ನೂ ಭರಿಸಲಾಗದೆ ಕಾಸಿಗಾಗಿ ಕೈಯೊಡ್ಡುವ ಸ್ಥಿತಿ ತಪ್ಪಿಸಿಕೊಳ್ಳಲು ಬೇಸತ್ತ ರೈತರು, ಇಡೀ ಜಮೀನಿನಲ್ಲಿನ ಟೊಮೆಟೊ ಬೆಳೆಯನ್ನು ಸಂಪೂರ್ಣವಾಗಿ ನಾಶ ಪಡಿಸಿದ್ದಾರೆ. ನಮ್ಮದು ಒಂದು ಎಕರೆ, ನಮ್ಮ ಮಾವರದ್ದು ಒಂದೂವರೆ ಎಕರೆಯಲ್ಲಿ 80 ಸಾವಿರ ಖರ್ಚು ಮಾಡಿ ಟೊಮೆಟೊ ಹಾಕಿದ್ದೇವೆ. ಅದರೆ ದರ ಪಾತಾಳಕ್ಕೆ ಕುಸಿದಿದೆ. ಈ ವೇಳೆಯಲ್ಲಿ 500-800 ಒಂದು ಬಾಕ್ಸ್ ಟೊಮೆಟೊ ಇರುತ್ತಿತ್ತು. ಇವತ್ತು 100 ಕ್ಕೆ ಮೂರು ಬಾಕ್ಸ್ ಟೊಮೆಟೊ ಕೇಳುತ್ತಿದ್ದಾರೆ. ಕೂಲಿ, ಊಟ ಹಾಗೂ ಟೊಮೆಟೊ ಹೊತ್ತು ಹಾಕುವವರಿಗೆ ಐದು ನೂರು ಕೊಡಬೇಕು, ನಮಗೆ ಒಂದು ಕೆಜಿಗೆ ಒಂದು ರೂಪಾಯಿ ಸಿಗುತ್ತಿದೆ. ಕೆಜಿಗೆ ಒಂದು ರೂಪಾಯಿ ಕೂಡ ಸಿಗುತ್ತಿಲ್ಲ. ಹೊರಗೆ ಮಾರುವವರು ಕೆಜಿಗೆ 10-20 ರೂಪಾಯಿ ಮಾಡುತ್ತಿದ್ದಾರೆ. ಇನ್ನು ಗಳಕ್ಕೆ 40 ಸಾವಿರ ಬೇಕಾಗಿದೆ. ಹುರಿ ದರ ಗಗನಕ್ಕೇರಿಕೆಯಾಗಿದೆ. ಕೆಜಿಗೆ 100ರೂ. ಇದ್ದ ಹುರಿ 250 ರೂ. ದಾಟಿದೆ. ಒಳ್ಳೆ ದರ ಸಿಗಲಿದೆ ಎಂಬ ನಿರೀಕ್ಷೆ ಇತ್ತು. ಕೂಲಿ ತೆಗೆದು 40 ಸಾವಿರ ಉಳಿಯಬಹುದು ಎಂದುಕೊಂಡಿದ್ದೆವು. ಅದು ಕೂಡ ಉಳಿಯಲಿಲ್ಲ.

**ಈ ಭಾಗದಲ್ಲಿ ನಾಲ್ಕೈದು ಎಕರೆ ಇದೀಗ ನಾಶ ಪಡಿಸಲಾಗಿದೆ. ಉಳಿದವರು ಕೂಡ ಅಳಿಸಲು ಮುಂದಾಗಿದ್ದಾರೆ. ಒಟ್ಟು 20-25 ಎಕರೆ ಟೊಮೆಟೊ ಬೆಳೆದಿದ್ದಾರೆ. ಅ ಟೊಮೆಟೊವನ್ನು ರೈತರು ಹರಿಯದೆ ಹಾಗೇ ಹೊಲದಲ್ಲಿ ಬಿಟ್ಟಿದ್ದಾರೆ ಎಂದು ಅವರು ತಿಳಿಸಿದರು.-ರೈತ ಮಂಜಪ್ಪ**

**30 ರೂ. ಬಾಕ್ಸ್ ಎಂದರೆ ಯಾರು ಬೆಲೆ ಕೊಡುತ್ತಾರೆ. ಅದಕ್ಕೆ ಇಡೀ ಬೆಳೆ ನಾಶಮಾಡಿದ್ದೇವೆ. ಸಸಿ ಕಿತ್ತು ಹಾಕಿದ್ದೇವೆ. ಬಾಕ್ಸ್‌ಗೆ 200 ಸಿಕ್ಕರೆ ರೈತ ಬದುಕುತ್ತಾನೆ. ಇಲ್ಲವಾದಲ್ಲಿ ಬದುಕುವುದು ಕಷ್ಟ. ರಾಜಕಾರಣಿಗಳು ಬೆಲೆ ನಿಗದಿ ಮಾಡಿ ಎಂದರು.**
**-ರೈತ ಬೇತೂರು ಪರಶುರಾಮ್**

**ನಾವು ಒಂದು ಲಕ್ಷ ಖರ್ಚು ಮಾಡಿ ಬೆಳೆದಿದ್ದೇವೆ. ಗೊಬ್ಬರ ಎಲ್ಲಾ ದರ ಹೆಚ್ಚಿದೆ. ಪಟ್ಟಿ ನೋಡಿದರೆ ಕಡಿಮೆ ಬರುತ್ತಿದೆ. ನಾವು ಕೂಡ ಬೆಳೆಯನ್ನು ಅಳಿಸುತ್ತೇವೆ. ಸುತ್ತಮುತ್ತ ನಮ್ಮೊವರು ಅಳಿಸಿದ್ದಾರೆ. ನಾವು ಅಳಿಸುತ್ತೇವೆ ಎಂದು ಅವರು ತಿಳಿಸಿದರು.**
**-ರೈತ ಮಹಿಳೆ ಹನುಮಕ್ಕ**



## ಮಿನಿ ನ್ಯೂಸ್

### ಖರ್ಗೆ ಮಾಡಿದ ಭಾಷಣ ಸ್ಥಳವನ್ನು ಶುದ್ಧಿಕರಣ ಅತ್ಯಂತ ಖಂಡನೀಯ: ಮಾಳಗಿ

• ಉದಯವಾಹಿನಿ ಚಿಂಚೋಳಿ:



ಉದಯವಾಹಿನಿ ಚಿತ್ರ

ಉತ್ತರಾಖಂಡದ ಹಲದ್ವಾನಿ ರಾಮಲೀಲಾ ಮೈದಾನದಲ್ಲಿ ಎಐಸಿಸಿ ಅಧ್ಯಕ್ಷರು ಮತ್ತು ರಾಜ್ಯಸಭೆ ವಿಪಕ್ಷನಾಯಕ ಮಲ್ಲಿಕಾರ್ಜುನ ಖರ್ಗೆಯವರು ಸಾರ್ವಜನಿಕರ ಉದ್ದೇಶಿಸಿ ಮಾಡಿರುವ ಭಾಷಣ ನಂತರ ಕೆಲ ಸಂಘಟನೆಗಳು ಅದೇ ಸ್ಥಳವನ್ನು ಶುದ್ದಿಕರಣಗೋಳಿಸಿ ಹೋಮಹವಾನ ಮಾಡಿದ ಕೃತ್ಯ ಅತ್ಯಂತ ಖಂಡನೀಯವಾಗಿದೆ ಎಂದು ಸಮಾಜಿಕ ಚಿಂತಕ ಶರಣಪ್ಪ ಮಾಳಗಿ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ಗೋಮೂತ್ರ,ಸೇಗಣಿಯಿಂದ ಮೈದಾನ ಶುದ್ದಿಕರಣಗೋಳಿಸಿದ್ದು ಈಡಿ ಮಾನವ ಕೂಲಕ್ಕೆ ಅವಮಾನ ಮಾಡಿದ್ದಾರೆ,ಜಗತ್ತಿನಲ್ಲಿ ಅತಿಶ್ರೇಷ್ಟ ಸಂವಿಧಾನವಿದ್ದರು ಕೆಲವರು ಸಂವಿಧಾನ ವಿರುದ್ಧ ಬಿಜೆಪಿ,ಆರ್‌ಎಸ್‌ಎಸ್‌ನವರು ಮನುವಾದಿಗಳು ಮಾಡುವ ಕೆಲಸ ಹೆಚ್ಚಾಗಿ ಕಂಡುಬರುತ್ತಿದೆ,ಇಂಥಹ ನೀಚ ಬುದ್ದಿಗೇಡಿಗಳ ಮೆಲೆ ಶಿಸ್ತಿನ ಕ್ರಮಕ್ಕೈಗೋಳಬೇಕು,

ದಲಿತರಿಗೆ ಯಾವಗಲೂ ಮನುವಾದಿಗಳು ಒಪ್ಪುವುದಿಲ್ಲ,ಹಾಗೆನಾದರು ನಿಮ್ಮಲ್ಲಿ ತಾಕತ್ತಿದರೆ ಎದುರು ಬಂದು ಫೇಸ್ ಮಾಡಿ ಹಿಂದುಗಡೆಯಿಂದಲ್ಲ,ನಿಮ್ಮಂಥಹ ಮನುವಾದಿಗಳು ಇದ್ದಿದರಿಂದ ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರು 78 ಲೋಕಸಭಾ ಕ್ಷೇತ್ರ ಪ್ರತ್ಯೇಕವಾಗಿ ಕೇಳಿದರು,ಮನುವಾಧಿಗಳಿಗೆ ಸಮಾನತೆ ಕಣ್ಣಿಗೆ ಕಾಣಲ್ಲ ಮನಸ್ಸಿಗೆ ಒಪ್ಪಲ್ಲ ಹಾಗಾಗಿ ಮಲ್ಲಿಕಾರ್ಜುನ ಖರ್ಗೆ ಅವರು ಮಾಡಿದ ಭಾಷಣದ ಸ್ಥಳ ಶುದ್ದಿಕರಣಗೋಳಿಸಿದ ಕೀಡಿಗೇಡಿಗಳ ವಿರುದ್ಧ ಕಾನೂನು ಕ್ರಮಕ್ಕೈಗೋಳಬೇಕು ಎಂದು ನೋವಿನಿಂದ ಒತ್ತಾಯಿಸುತ್ತೇನೆ ಎಂದು ಶರಣಪ್ಪ ಮಾಳಗಿ ಹೇಳಿದರು.

### ಈದ್ ಮಿಲಾದ್ ಶಾಂತಿ ಪಾಲನಾ ಸಭೆ

• ಉದಯವಾಹಿನಿ ನವಲಗುಂದ,

ಹಬ್ಬಗಳು ಪರಸ್ಪರ ಬಾಂಧವ್ಯ ವೃದ್ಧಿಸುತ್ತವೆ. ಹೀಗಾಗಿ ಹಬ್ಬಗಳನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕು ಎಂದು ಸಿಪಿಐ ರವಿಕುಮಾರ ಕಪ್ಪತನವರ ತಿಳಿಸಿದರು.ಈದ್ ಮಿಲಾದ್ ಹಬ್ಬದ ನಿಮಿತ್ತ ಪೊಲೀಸ್ ಠಾಣೆಯಲ್ಲಿ ನಡೆದ ಶಾಂತಿ ಪಾಲನಾ ಸಭೆಯಲ್ಲಿ ಮಾತನಾಡಿದರು.

ಶಾಂತಿ ಕದಡುವ ಯಾವುದೇ ಘಟನೆಗಳು ನಡೆದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು. ಹಬ್ಬಗಳನ್ನು ಶಾಂತಿಯಿಂದ ಆಚರಿಸುವಂತೆ ಹಿರಿಯರು ಯುವಕರಿಗೆ ತಿಳಿಹೇಳಬೇಕು.

ಅಹಿತಕರ ಘಟನೆಗಳು ನಡೆದರೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು ನೀವು ಆಚರಿಸುವ ಹಬ್ಬ-ಹರಿದಿನಗಳು ಇನ್ನೊಬ್ಬರಿಗೆ ಮಾದರಿಯಾಗಬೇಕು.ಈ ಮೂಲಕ ಹಿರಿಯರು, ಹಬ್ಬದಾಚರಣೆ ಮಹತ್ವ ಸಾರಬೇಕು ಎಂದು ಸಲಹೆ ನೀಡಿದರು.

ಅಬ್ಬಾಸ ದೇವರಿಡು, ಶಿರಾಜ ಧಾರವಾಡ, ಸೈಪುದ್ದಿನ ಅವಾರದಿ, ಈರಣ್ಣ ಚವಡಿ, ಮಹಾಂತೇಶ ಕಲಾಲ, ಸಾಯಿಬಾಬಾ ಆನೆಗುಂದಿ, ಸಿಕಂದರ ಶಿರಗುಪ್ಪಿ ಮಾತನಾಡಿ ಈದ ಮಿಲಾದ್ ಹಬ್ಬದ ಮೆರವಣಿಗೆ ಹೋಗುವ ಮಾರ್ಗ ಹಾಗೂ ಸಾಂಸ್ಕೃತಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿ ಎರಡೂ ಕೋಮಿನ ಹಿರಿಯರು ಶಾಂತಿ-ಸೌಹಾರ್ದತೆಯಿಂದ ಹಬ್ಬ ಆಚರಿಸುವುದಾಗಿ ಭರವಸೆ ನೀಡಿದರು.

### ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ

• ಉದಯವಾಹಿನಿ ಧಾರವಾಡ, :

ಧಾರವಾಡ ಪೊಲೀಸ್ ಅಧೀಕ್ಷಕರಾದ ಗುಂಜನ್ ಆರ್ಯ ಅವರ ಅಧ್ಯಕ್ಷತೆಯಲ್ಲಿ ಬೆಳಿಗ್ಗೆ ಧಾರವಾಡ ಜಿಲ್ಲಾ ಪೊಲೀಸ್ ಕಾರ್ಯಾಲಯದಲ್ಲಿ ಆಗಸ್ಟ್ 26, 2026 ರಂದು ಜರುಗುವ ಈದ ಮಿಲಾದ ಹಬ್ಬದ ಪ್ರಯುಕ್ತ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆ ಜರುಗಿತ್ತು.

ಸಭೆಯಲ್ಲಿ ಹಾಜರಿದ್ದ ಅಣ್ಣಿಗೇರಿ, ನವಲಗುಂದ, ಅಳ್ನಾವರ ತಾಲ್ಲೂಕಿನ ಮುಸ್ಲಿಂ ಸಮುದಾಯದ ಮುಖಂಡರು ಮಾತನಾಡಿ, ಈದ ಮಿಲಾದ್ ಹಬ್ಬದ ಕಾಲಕ್ಕೆ ಯಾವುದೇ ರೀತಿಯ ಡಿಜೆ ಬಳಕೆ ಮಾಡುವುದಿಲ್ಲ ಅಂತಾ ಸ್ವಯಂ ಪ್ರೇರಿತವಾಗಿ ತೀರ್ಮಾನಿಸಿರುವುದಾಗಿ ತಿಳಿಸಿದರು.

ನಂತರ ಪೊಲೀಸ್ ಅಧೀಕ್ಷರು. ಧಾರವಾಡ ರವರು ಸಭೆಯನ್ನು ಉದ್ದೇಶಿಸಿ ಮಾತನಾಡಿ, ಶಾಂತಿ, ಸೌಹಾರ್ದತೆ ಹಾಗೂ ಸಾಮರಸ್ಯದಿಂದ ಈದ ಮಿಲಾದ್ ಹಬ್ಬವನ್ನು ಆಚರಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲ ಮುಸ್ಲಿಂ ಮುಖಂಡರು ಹಾಗೂ ಅಂಜುಮನ್ ಸಂಸ್ಥೆಯ ಅಧ್ಯಕ್ಷರು. ಪದಾಧಿಕಾರಿಗಳು, ಎಲ್ಲಾ ತಾಲ್ಲೂಕಿನ ಎಲ್ಲಾಧರ್ಮದ ಮುಖಂಡರುಗಳು ಸಭೆಯಲ್ಲಿ ಉಪಸ್ಥಿತರಿದ್ದರು. ಪಿಐ

### ನಾಗೇಂದ್ರಗೆ ಕಲ್ಯಾಣ ಕರ್ನಾಟಕ ಸಚಿವಾಲಯದ ಹೆಚ್ಚುವರಿ ಜವಾಬ್ದಾರಿ

• ಉದಯವಾಹಿನಿ ಬಳ್ಳಾರಿ, :

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಆರೋಪ ಎದಿರಿಸುತ್ತಿರುವ ಜಿಲ್ಲಾ ಉಸ್ತುವಾರಿ ಸಚಿವ ಹಾಗು ಯೋಜನಾ ಸಚಿವ ನಾಗೇಂದ್ರ ಅವರಿಗೆ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಿನ್ನೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಹೊಣೆ ನೀಡಿದ್ದಾರೆ. ಇದು ನಾಗೇಂದ್ರ ಅವರ ಬೆಂಬಲಿಗರು ಮತ್ತು ಜಿಲ್ಲೆಯ ಕಾಂಗ್ರೆಸ್ ಮುಖಂಡರಿಗೆ, ಕಾರ್ಯಕರ್ತರಿಗೆ ಖುಷಿ ಹೆಚರಚೊಸಿದ್ದರೆ.

ಮತ್ತೊಂದು ಕಡೆ ವಾಲ್ಮೀಕಿ ಗಮದ ಹಗರಣದ ಆರೋಪದಡಿ ನಾಗೇಂದ್ರ ಅವರ ರಾಜೀನಾಮೆಗೆ ವಿಧಾನಮಂಡಲದ ಹೊರಗೆ ಮತ್ತು ಒಳಗೆ ಪ್ರತಿಭಟನೆ ನಡೆಸುತ್ತಿರುವ ಪ್ರತಿಪಕ್ಷ ಬಿಜೆಪಿಗೆ ನುಂಗಲಾರದ ತುತ್ತಾಗಿದೆ. ಮತ್ತಷ್ಟು ಕೋಪಕ್ಕೂ ಕಾರಣವಾಗಿದೆ.

2025ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯ ರಚಿಸಲಾಗಿದ್ದು, ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರೇ ಈ ಸಚಿವಾಲಯದ ಸಚಿವರಾಗಿರುತ್ತಾರೆ ಎಂದು ತಿಳಿಸಲಾಗಿದೆ. ನಾಗೇಂದ್ರ ಅವರಿಗೆ ಸಚಿವ ನೀಡಿರುವುದನ್ನು ವಿರೋಧಿಸುತ್ತಿರುವ ಸಂದರ್ಭದಲ್ಲಿಯೂ ಸಕಾರವು ಅವರಿಗೆ ಹೆಚ್ಚುವರಿ ಹೊಣೆಗಾರಿಕೆ ನೀಡಿರುವುದು ಮತ್ತಷ್ಟು ರಾಜಕೀಯ ವಾಗ್ವಾದಕ್ಕೆ ಕಾರಣವಾಗತೊಡಗಿದೆ.

### 80 ಕ್ಕೂ ಹೆಚ್ಚು ಚಿಕ್ಕಗಿಡಗಳನ್ನು ನಾಶ ಮಾಡಿದ ಕಿಡಿಗೇಡಿಗಳು

• ಉದಯವಾಹಿನಿ ಕಮಲನಗರ,:

ತಾಲ್ಲೂಕಿನ ಹೊಳಸಮುದ್ರ ಗ್ರಾಮದಲ್ಲಿರುವ ಹಾವಗಿರಾವ ಬಸವರಾಜ ಸಿರಗೇರೆ ಎಂಬ ರೈತರ ಜಮೀನಿನಲ್ಲಿ ಕಿಡಿಗೇಡಿಗಳು ಚಿಕ್ಕ ಗಿಡಗಳನ್ನು ಕಡಿದು ಹಾಕಿದ್ದಾರೆ.ಇವರು ಹೋಳಸಮುದ್ರ ಗ್ರಾಮದ ನಿವಾಸಿಯಾಗಿರುತ್ತಾರೆ. ಅವರ ಹೆಸರಿನಲ್ಲಿರುವ ಸರ್ವೆ ನಂ.15/★/5 ರ ಜಮೀನಿನಲ್ಲಿ ಒಟ್ಟು 7 ಎಕರೆ 10 ಜಮಿನಿನಲ್ಲಿ ಒಟ್ಟು ಮಾವಿನ ಮರಗಳು 12, ಮಹಾಗನಿ 10, ಹೆಜ್ಜವೂ ಮರ 65 ಹಚ್ಚಿದ್ದ ಚಿಕ್ಕ ಮರಗಳನ್ನು ಯಾರೋ ಕಿಡಿಗಳು ನಾಶ ಮಾಡಿದ್ದಾರೆ.ಕಾಡು ಬೆಳೆಸಿ ನಾಡು ಉಳಿಸಿ ಎಂಬ ತತ್ವದಡಿಯಲ್ಲಿ ಮರವನ್ನ ಬೆಳೆಸುವಲ್ಲಿ ರೈತ ಮುಂದಾಗಿದ್ದಾಗ ಬೆಳೆದು ನಿಂತಿರುವ ಗಿಡಗಳು ರಾತ್ರೋರಾತ್ರಿಯಲ್ಲಿ ಗಿಡಗಳೆಲ್ಲ ನಾಶ ಮಾಡಿರುವುದು ದುಃಖಕರ ಸಂಗತಿ. ಆ. 18 ರಂದು ರಾತ್ರಿ ಕೆಲವರು ಕಡಿದು ಹಾಕಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ.

**ವೃಷಭ** ಸ್ವತಃ ಔಷಧಿ ತೆಗೆದುಕೊಳ್ಳುವುದು ಔಷಧ ಅವಲಂಬನೆಯನ್ನು ಉಂಟುಮಾಡಬಹುದು. ಯಾವುದೇ ಔಷಧ ತೆಗೆದುಕೊಳ್ಳುವ ಮೊದಲು ವೈದ್ಯರ ಸಲಹೆ ಪಡೆಯಿರಿ. ಇಲ್ಲದಿದ್ದಲ್ಲಿ ಔಷಧ ಅವಲಂಬನೆಯ ಸಾಧ್ಯತೆ ಅಧಿಕವಾಗಿದೆ. ಹಿಂದೆ ತಮ್ಮ ಹಣವನ್ನು ಹೂಡಿಕೆ ಮಾಡಿದ ಜನರು ಆ ಹಣದಿಂದ ಲಾಭ ಪಡೆಯುವ ಸಾಧ್ಯತೆಯಿದೆ.

**ಮಿಥುನ** ನಿಮ್ಮ ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು ಏಕೆ ಏನನ್ನಾದರೂ ಮಾಡಬಾರದು.

**ಕರ್ಕಾಟಕ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

**ಸಿಂಹ** ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ. ಇಂದು ವಿಷಯಗಳು ನೀವು ಬಯಸುವ ರೀತಿಯಲ್ಲಿ ನಡೆಯದ ದಿನಗಳಲ್ಲಿ ಒಂದು.

**ಕನ್ಯಾ** ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ

**ತುಲಾ** ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ. ಕಬ್ಬಿಣ ಬಿಸಿಯಿದ್ದಾಗಲೇ ನಾವು ಬಡಿಯಬೇಕೆಂದು ನೆನಪಿಡಿ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.

**ವೃಶ್ಚಿಕ** ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ.

**ಧನಸ್ಸು** ಆರೋಗ್ಯ ವಿಷಯಗಳಲ್ಲಿ ನಿಮ್ಮ ಬಗ್ಗೆ ನೀವೇ ನಿರ್ಲಕ್ಷ್ಯ ಮಾಡದಂತೆ ಎಚ್ಚರಿಕೆ ವಹಿಸಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು. ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

**ಮಕರ** ಹತಾಶೆಯ ಭಾವನೆ ನಿಮ್ಮನ್ನುಅವರಿಸಲು ಬಿಡಬೇಡಿ. ಹಣದ ಪರಿಸ್ಥಿತಿ ದಿನದಲ್ಲಿ ನಂತರ ಸುಧಾರಿಸುತ್ತದೆ. ಮಗುವಿನ ಅಧ್ಯಯನದ ಬಗ್ಗೆ ಚಿಂತಿಸುವ ಅಗತ್ಯವಿಲ್ಲ. ಈ ಕ್ಷಣದಲ್ಲಿ ನೀವು ಕೆಲವು ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ಇವುಗಳು ಕ್ಷಣಿಕವಾಗಿದ್ದು ಸಮಯ ಸರಿದಂತೆ ದೂರ ಸರಿಯುತ್ತವೆ.

**ಕುಂಭ** ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು.

**ಮೀನ** ಒಂದು ಒಳ್ಳೆಯ ಸುದ್ದಿ ಪಡೆಯುವ ಸಾಧ್ಯತೆಯಿದ್ದು ಇದು ನಿಮ್ಮನ್ನಷ್ಟೇ ಅಲ್ಲದೇ ನಿಮ್ಮ ಕುಟುಂಬವನ್ನೂ ಉತ್ಸಾಹಿಗಳನ್ನಾಗಿಸುತ್ತದೆ. ನೀವೂ ಕೂಡ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಬೇಕು. ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ.

## ‘ಇಂಡಿಯನ್ ದಿವ್ಯಾಂಗ್ ಎಂಪವರ್ಮೆಂಟ್ ಅಸೋಸಿಯೇಷನ್’ ಸರ್ವ ಸದಸ್ಯರ ಸಭೆ

• ಉದಯವಾಹಿನಿ ಶಿವಮೊಗ್ಗ :



ಉದಯವಾಹಿನಿ ಚಿತ್ರ

ಹಲವಾರು ವರ್ಷಗಳಿಂದ ವಿಕಲಚೇತನರ ಏಳಿಗೆಗಾಗಿ ಶ್ರಮಿಸುತ್ತಿರುವ 22 ಸಾವಿರ ಮೀರಿದ ಸದಸ್ಯತ್ವವನ್ನು ಹೊಂದಿ ಕೇಂದ್ರ ಮತ್ತು ರಾಜ್ಯ ಸರ್ಕಾರದೊಡನೆ ಸಮಸ್ಯೆಗಳ ಪರಿಹಾರಕ್ಕಾಗಿ ಸಮನ್ವಯ ಸಾಧಿಸುವಲ್ಲಿ ಯಶಸ್ವಿಯಾಗುತ್ತಿರುವ ಇಂಡಿಯನ್ ದಿವ್ಯಾಂಗ್ ಎಂಪವರ್ಮೆಂಟ್ ಅಸೋಸಿಯೇಷನ್ ಇದರ ಸರ್ವ ಸಭೆಯು ಸಂಸ್ಥಾಪಕ ಅಧ್ಯಕ್ಷ ಶ್ರೀ ಕೊಡಕ್ಕಲ್ ಶಿವಪ್ರಸಾದ್ ಅವರ ನೇತೃತ್ವದಲ್ಲಿ ಗೂಗಲ್ ಮೀಟ್ ಮೂಲಕ ಇತ್ತೀಚೆಗೆ ಯಶಸ್ವಿಯಾಗಿ ಜರುಗಿತು.

ಅಸೋಸಿಯೇಷನ್ ನಿರ್ದೇಶಕಿ ಮತ್ತು ಗೂಗಲ್ ಮೀಟ್ ಸಂಚಾಲಕಿ ಶ್ರೀಮತಿ ಲಕ್ಷ್ಮಿ ಮನೋಜ ಸ್ವಾಗತಿಸಿದರೆ, ಮಹಿಳಾ ವಿಭಾಗದ ಕಾರ್ಯದರ್ಶಿ ಡಾ. ಸುಮನಾ ಟಿ.ಎಂ. ಅವರು ರಾಷ್ಟ್ರಗೀತೆ ಮತ್ತು ವಂದೇ ಮಾತರಂ ಹಾಡಿ ಕಾರ್ಯಕ್ರಮವನ್ನು ಆರಂಭಿಸಿದರು. ಅನಂತರ ಆಡಿಟ್ ರಿಪೋರ್ಟ್ ಮತ್ತು ಲೆಕ್ಕಪತ್ರಗಳನ್ನು ಮಂಡಿಸಲಾಯಿತು. ಅಸೋಸಿಯೇಷನ್ ಕಾನೂನು ಸಲಹೆಗಾರರಾದ ವಕೀಲ ಪನ್ನಗ ಸುಬ್ಬಾ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು ವಿಕಲಚೇತನರ ವಿವಿಧ ಸಮಸ್ಯೆಗಳ ಬಗ್ಗೆ ಕಾನೂನು ಸಲಹೆಯನ್ನು ನೀಡಿದರು.

## ಪತ್ರಕರ್ತನ ಮೇಲೆ ಹಲ್ಲೆ ಆರೋಪ; ಸರ್ಕಾರಿ ವೈದ್ಯ ಸೇವೆಯಿಂದ ಅಮಾನತು

• ಉದಯವಾಹಿನಿ ಉಡುಪಿ:

ದಿನಪತ್ರಿಕೆಯೊಂದರ ಕುಂದಾಪುರ ವರದಿಗಾರರ ಮೇಲೆ ಹಲ್ಲೆ ನಡೆಸಿ, ಜೀವ ಬೆದರಿಕೆ ಹಾಕಿರುವ ಆರೋಪ ಸಂಬಂಧ ಸರ್ಕಾರಿ ವೈದ್ಯರನ್ನು ಅಮಾನತುಗೊಳಿಸಿ ಆರೋಗ್ಯ ಇಲಾಖೆ ಆದೇಶಿಸಿದೆ. ಅಲ್ಲದೆ, ಹಲ್ಲೆಗೊಳಗಾದ ಪತ್ರಕರ್ತ ನೀಡಿದ ದೂರಿನ ಮೇರೆಗೆ ವೈದ್ಯನ ವಿರುದ್ಧ ಕುಂದಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕುಂದಾಪುರ ಸಾರ್ವಜನಿಕ ಆಸ್ಪತ್ರೆಯ ಶಸ್ತ್ರಚಿಕಿತ್ಸಕ ಡಾ. ಮಹೇಂದ್ರ ಶೆಟ್ಟಿ ಹಲ್ಲೆ ನಡೆಸಿದ ಆರೋಪದ ಮೇಲೆ ಅಮಾನತುಗೊಂಡವರು. ಹಲ್ಲೆಗೊಳಗಾದ ಪತ್ರಕರ್ತ ಶ್ರೀಕಾಂತ್ ಹೆಮ್ಮಾಡಿ ಅವರನ್ನು ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ವರದಿಗಾರ ಶ್ರೀಕಾಂತ್ ಹೆಮ್ಮಾಡಿ ತಮ್ಮ ಪತ್ನಿಯೊಂದಿಗೆ ಕುಂದಾಪುರದ ಹೋಟೆಲ್ ವೊಂದರಲ್ಲಿ ಚಹಾ ಕುಡಿಯುತ್ತಿದ್ದ ಸಂದರ್ಭದಲ್ಲಿ ಸ್ಥಳಕ್ಕೆ ಬಂದ ಡಾ. ಮಹೇಂದ್ರ ಶೆಟ್ಟಿ, ಏಕಾಏಕಿ ಆಕ್ರೋಶ ವ್ಯಕ್ತಪಡಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. 'ನನ್ನ ವಿರುದ್ಧವೇ ವರದಿ ಪ್ರಕಟಿಸುತ್ತೀಯಾ?' ಎಂದು ಬೆದರಿಕೆ ಹಾಕಿ, ಪತ್ನಿಯ ಎದುರಲ್ಲೇ ಶ್ರೀಕಾಂತ್ ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಘಟನೆಯ ದೃಶ್ಯವು ಕೂಡ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಹೋಟೆಲ್ ಸಿಬ್ಬಂದಿ ಮಧ್ಯಪ್ರವೇಶಿಸಿರುವುದು ಕಂಡುಬಂದಿದೆ.

ಕುಂದಾಪುರದಲ್ಲಿ ಆ.21ರಂದು ಪತ್ರಿಕೆಯ ವರದಿಗಾರ ಶ್ರೀಕಾಂತ್ ಮೇಲೆ ಆರೋಪಿ ಡಾ.ಮಹೇಂದ್ರ ಕುಮಾರ್ ಶೆಟ್ಟಿ ಎಂಬುವರು ಹಲ್ಲೆ ನಡೆಸಿ, ಅವಾಚ್ಯ ಶಬ್ದಗಳಿಂದ ಬೈದು, ಕೊಲೆ ಬೆದರಿಕೆ ಹಾಕಿರುವ ಬಗ್ಗೆ ಪ್ರಕರಣ ದಾಖಲಾಗಿದೆ. ಈ ಹಿಂದೆ ಕುಂದಾಪುರ ಸರ್ಕಾರಿ ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವೈದ್ಯರು ಒಬ್ಬರೋಗಿಯಿಂದ ಹಣ ಪಡೆಯುತ್ತಿರುವ ಬಗ್ಗೆ ದೂರುದಾರರು ಪತ್ರಿಕೆಯಲ್ಲಿ ವರದಿ ಪ್ರಕಟಿಸಿರುವ ವಿಚಾರದಲ್ಲಿ ದ್ವೇಷದಿಂದ ಹಲ್ಲೆ ನಡೆಸಿರುವ ಬಗ್ಗೆ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

# ಚರ್ಚೆ ಬಿಟ್ಟು ಗದ್ದಲ ಮಾಡಿದ್ದೇ ಬಿಜೆಪಿ ಹಿಡನ್ ಅಜೆಂಡಾ; ಯು.ಟಿ. ಖಾದರ್

### ವಿಪಕ್ಷಗಳಿಗೆ ನಿಜವಾದ ಕಾಳಜಿ ಇದ್ದಿದ್ದರೆ ನಿಯಮಾವಳಿ ಪ್ರಕಾರ ನೋಟಿಸ್ ಕೊಟ್ಟು ಸದನದಲ್ಲಿ ಚರ್ಚೆ ನಡೆಸಬಹುದಿತ್ತು

• ಉದಯವಾಹಿನಿ ಮಂಗಳೂರು:

ಬರಗಾಲ, ಅತಿವೃಷ್ಟಿ, ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ನಾಡಿನ ಜ್ವಲಂತ ಜನಪರ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕಿದ್ದ ವಿಧಾನಮಂಡಲ ಅಧಿವೇಶನವನ್ನು ಗದ್ದಲದ ಮೂಲಕ ಉದ್ದೇಶಪೂರ್ವಕವಾಗಿ ಹಾಳುಗೆಡವಿ, ಸಾರ್ವಜನಿಕರ

1 : ರಾಜಕೀಯ ಲಾಭಕ್ಕಾಗಿ ವಿಪಕ್ಷಗಳು ಬಲಿಪಶು
2 : ಅಧಿವೇಶನ ಜನಪರ ಯೋಜನೆಗಳ ಚರ್ಚೆ
3 : ಸರ್ಕಾರಕ್ಕೂ ಉತ್ತರ ನೀಡಲು ಅವಕಾಶ

ತೆರಿಗೆ ಹಣ ಹಾಗೂ ಕಲಾಪದ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಿದ ವಿಪಕ್ಷ ಬಿಜೆಪಿಯ ನಡವಳಿಕೆಯನ್ನು ಕರ್ನಾಟಕದ ಜನತೆ ಎಂದಿಗೂ ಕ್ಷಮಿಸುವುದಿಲ್ಲ ಎಂದು ಆರೋಗ್ಯ ಸಚಿವ ಯು. ಟಿ. ಖಾದರ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಂಗಳೂರಿನಲ್ಲಿ ಶನಿವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸದೀಯ ವ್ಯವಸ್ಥೆಯಲ್ಲಿ ಜನರ ಸಮಸ್ಯೆಗಳಿಗೆ ಧ್ವನಿಯಾಗಬೇಕಿದ್ದ ಸದನವನ್ನು ರಾಜಕೀಯ ಲಾಭಕ್ಕಾಗಿ ವಿಪಕ್ಷಗಳು ಬಲಿಪಶು ಮಾಡಿರುವುದರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಅಧಿವೇಶನ ಹಾಳು ಮಾಡುವುದೇ ಬಿಜೆಪಿಯ ‘ಹಿಡನ್ ಅಜೆಂಡಾ’: ಒಂದು ಕಡೆ ಬರ, ಮತ್ತೊಂದು ಕಡೆ ಪ್ರವಾಹದಿಂದ ರಾಜ್ಯದ ಜನತೆ ಸಂಕಷ್ಟದಲ್ಲಿದ್ದಾರೆ. ಇಂತಹ ಗಂಭೀರ ಸಂದರ್ಭದಲ್ಲಿ ಕರೆಯಲಾಗಿದ್ದ ಅಧಿವೇಶನದಲ್ಲಿ ಜನಪರ ಯೋಜನೆಗಳ ಬಗ್ಗೆ ಚರ್ಚೆ ನಡೆಯಬೇಕಿತ್ತು. ಆದರೆ, ಯಾವುದೇ ಸ್ಪಷ್ಟ ಕಾರಣ ಅಥವಾ ನೋಟಿಸ್ ನೀಡದೆ, ಕೇವಲ ಗದ್ದಲ ಸೃಷ್ಟಿಸಿ ಕಲಾಪ ನಡೆಯದಂತೆ ಮಾಡುವುದೇ ಬಿಜೆಪಿಯ ಏಕೈಕ 'ಹಿಡನ್ ಅಜೆಂಡಾ' ಆಗಿತ್ತು ಎಂದು ಖಾದರ್ ಆರೋಪಿಸಿದರು.


ಉದಯವಾಹಿನಿ ಚಿತ್ರ

ವಿಪಕ್ಷಗಳಿಗೆ ನಿಜವಾದ ಕಾಳಜಿ ಇದ್ದಿದ್ದರೆ ನಿಯಮಾವಳಿ ಪ್ರಕಾರ ನೋಟಿಸ್ ಕೊಟ್ಟು ಸದನದಲ್ಲಿ ಚರ್ಚೆ ನಡೆಸಬಹುದಿತ್ತು. ಸರ್ಕಾರಕ್ಕೂ ಉತ್ತರ ನೀಡಲು ಅವಕಾಶ ಸಿಗುತ್ತಿತ್ತು. ಆದರೆ, ಚರ್ಚೆಗೂ ಬಾರದೆ ಕಲಾಪವನ್ನು 10 ದಿನಗಳ ಕಾಲ ಹಾಳುಗೆಡವಿರುವುದು ರಾಜ್ಯದ ಜನತೆಗೆ ಮಾಡಿದ ಸಾಮಾಜಿಕ ವಂಚನೆ ಎಂದು ಕಿಡಿಕಾರಿದರು.

> ದೇಶದ ಇತಿಹಾಸದಲ್ಲೇ ಇಂತಹ ವಂಚನೆ ಪ್ರಕರಣಗಳಲ್ಲಿ ಶೇ. 99.5 ರಷ್ಟು ಹಣ ರಿಕವರಿ ಆದ ನಿದರ್ಶನವೇ ಇಲ್ಲ. ಸರ್ಕಾರವು ತಕ್ಷಣ ಕ್ರಮ ಕೈಗೊಂಡು ಖಾಸಗಿ ಖಾತೆಗಳಿಗೆ ವರ್ಗಾವಣೆಯಾಗಿದ್ದ ಬಹುತೇಕ ಎಲ್ಲಾ ಹಣವನ್ನು ಇಲಾಖೆಯ ಖಾತೆಗೆ ಮರುಪಾವತಿಸಿದೆ. ಪ್ರಕರಣದಲ್ಲಿ ಶಾಮೀಲಾಗಿದ್ದ ಅಧಿಕಾರಿಗಳನ್ನು ಅಮಾನತುಗೊಳಿಸಿ, ಕಾನೂನು ಕ್ರಮ ಜರುಗಿಸಲಾಗಿದೆ ಎಂದರು.
> -ಯು.ಟಿ. ಖಾದರ್

**ವಾಲ್ಮೀಕಿ ನಿಗಮ ಹಗರಣ:** ಶೇ. 99.5 ಹಣ ವಾಪಸ್ ತಂದ ಮೊದಲ ಸರ್ಕಾರ!: ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ವರ್ಗಾವಣೆ ಪ್ರಕರಣದ ಕುರಿತು ವಿವರವಾಗಿ ಮಾತನಾಡಿದ ಸಚಿವರು, ಪ್ರಕರಣದಲ್ಲಿ ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದ ತಕ್ಷಣವೇ ಸಚಿವ ಬಿ. ನಾಗೇಂದ್ರ ಅವರು ಯಾವುದೇ ವಿಳಂಬವಿಲ್ಲದೆ ನೈತಿಕ ಹೊಣೆ ಹೊತ್ತು ಸ್ವಯಂಪ್ರೇರಿತರಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ತನಿಖೆಯಿಂದ ದೂರ ಉಳಿದು ತನಿಖಾ ಸಂಸ್ಥೆಗಳಿಗೆ ಸಂಪೂರ್ಣ ಸಹಕಾರ ನೀಡಿದರು. ರಾಜ್ಯದ ತನಿಖಾ ಸಂಸ್ಥೆ ನಡೆಸಿದ ಸಮಗ್ರ ತನಿಖೆಯಲ್ಲಿ ಅವರಿಗೆ ಕ್ಲೀನ್ ಚಿಟ್ ಸಿಕ್ಕಿದೆ ಎಂದು ಸಮರ್ಥಿಸಿಕೊಂಡರು.

> ರಾಜಕೀಯ ಮಾಡುವುದಿದ್ದರೆ ಸದನದ ಹೊರಗೆ, ಬೀದಿಯಲ್ಲಿ ಅಥವಾ ಜನರ ಮಧ್ಯೆ ಪಾದಯಾತ್ರೆ ಮಾಡಿ ಎಷ್ಟು ಬೇಕಾದರೂ ರಾಜಕೀಯ ಮಾಡಲಿ. ಆದರೆ ಜನರ ತೆರಿಗೆ ಹಣದಲ್ಲಿ ನಡೆಯುವ ವಿಧಾನಮಂಡಲದ ಒಳಗಡೆ ಜನಸಾಮಾನ್ಯರ ಕಷ್ಟ-ಸುಖಗಳ ಚರ್ಚೆಯಾಗಬೇಕು. ಸದನವನ್ನು ರಾಜಕೀಯ ಜಿದ್ದಾಜಿದ್ದಿಯ ಅಖಾಡವನ್ನಾಗಿ ಮಾಡಿಕೊಳ್ಳುವುದು ಪ್ರಜಾಪ್ರಭುತ್ವ ವಿರೋಧಿ ಧೋರಣೆ ಎಂದು ಎಚ್ಚರಿಸಿದರು.

ಇಂದು ದೇಶಾದ್ಯಂತ ಬಿಜೆಪಿಯಲ್ಲೇ ಸಿಬಿಐ, ಇಡಿ ಕೇಸ್‌ಗಳನ್ನು ಎದುರಿಸುತ್ತಿರುವ ನೂರಾರು ನಾಯಕರು ಸಚಿವರಾಗಿ, ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳಾಗಿ ಅಧಿಕಾರ ಅನುಭವಿಸುತ್ತಿದ್ದಾರೆ.

ಅಸ್ಸೋಂ, ಪಶ್ಚಿಮ ಬಂಗಾಳದಿಂದ ಬಂದ ನಾಯಕರ ಮೇಲೆ ಪ್ರಕರಣಗಳಿದ್ದರೂ ಅವರನ್ನು ಬಿಜೆಪಿ ಒಪ್ಪಿಕೊಂಡಿದೆ. ಆದರೆ ಕರ್ನಾಟಕದಲ್ಲಿ ನಾಗೇಂದ್ರ ಅವರ ವಿರುದ್ಧ ಎಸ್‌ಐಟಿ ಕ್ಲೀನ್ ಚಿಟ್ ನೀಡಿದರೂ, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೊದಲೇ ರಾಜೀನಾಮೆ ಕೇಳುವುದು ಬಿಜೆಪಿಯ ರಾಜಕೀಯ ಪ್ರೇರಿತ ತಂತ್ರ ಎಂದು ತಿರುಗೇಟು ನೀಡಿದರು.

## ದೇವಸ್ಥಾನದ ಪುಷ್ಕರಣಿ ಮೇಲೆ ರಸ್ತೆ ನಿರ್ಮಾಣ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ ಹುಬ್ಬಳ್ಳಿ:

ನಗರದ ಹಳೇ ಹುಬ್ಬಳ್ಳಿಯ ಆಸಾರ ಓಣಿಯಲ್ಲಿನ ಶ್ರೀಭವಾನಿ ಶಂಕರ ನಾರಾಯಣ ದೇವಸ್ಥಾನಕ್ಕೆ ಸೇರಿದ ಪುಷ್ಕರಣಿ ಮೇಲೆ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ರಸ್ತೆ ನಿರ್ಮಾಣ ಮಾಡಿದೆ ಎಂದು ಆರೋಪಿಸಿ ನಗರದ ಚೆನ್ನಪೇಟ ಮುಖ್ಯ ರಸ್ತೆಯಿಂದ ಪುಷ್ಕರಣಿ ಚಲೋ ಹಮ್ಮಿಕೊಂಡಿದ್ದ ಹಿಂದೂಪರ ಸಂಘಟನೆಗಳು ಪ್ರತಿಭಟನೆ ನಡೆಸಿದವು. ಶ್ರೀಭವಾನಿ ಶಂಕರ ನಾರಾಯಣ ದೇವಸ್ಥಾನಕ್ಕೆ ಸೇರಿದ ಪುಷ್ಕರಣಿ ಮೇಲೆ ನಿರ್ಮಾಣ ಮಾಡಿರುವ ರಸ್ತೆಯನ್ನು ತೆರವುಗೊಳಿಸಬೇಕು ಎಂದು ಹಿಂದೂಪರ ಸಂಘಟನೆಗಳು ಆಗ್ರಹಿಸಿದವು. ಪುಷ್ಕರಣಿ ಉಳಿಸಿ, ದೇವಸ್ಥಾನ ಬೆಳೆಸಿ ಎಂಬ ಘೋಷಣೆ ಕೂಗಲಾಯಿತು. ಈ ವೇಳೆ, ಪ್ರತಿಭಟನಾನಿರತರನ್ನು ಪೊಲೀಸರು ವಶಕ್ಕೆ ಪಡೆದುಕೊಂಡರು.

ನಮ್ಮ ಹೋರಾಟಕ್ಕೆ ಜಯ ಸಿಗುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಹೋರಾಟಗಾರರು ಎಚ್ಚರಿಕೆ ನೀಡಿದರು. ಈ ವೇಳೆ, ಶಾಸಕ ಅರವಿಂದ ಬೆಲ್ಲದ್, ಮಹೇಶ್ ಟೆಂಗಿನಕಾಯಿ, ವಿ.ಪ. ಸದಸ್ಯ ಪ್ರದೀಪ್ ಶೆಟ್ಟರ್, ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್, ಮುಖಂಡರಾದ ಜಯತೀರ್ಥ ಕಟ್ಟಿ, ಮಂಜುನಾಥ ಕಾಟಕಾರ, ಅನೂಪ ಬಿಜವಾಡ, ವೆಂಕಟೇಶ ಕಾಟವೆ ಸೇರಿದಂತೆ ಇತರರು ಇದ್ದರು.


ಉದಯವಾಹಿನಿ ಚಿತ್ರ

**ನಿಷೇಧಾಜ್ಞೆ ಜಾರಿ:** ಪ್ರತಿಭಟನೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಹುಬ್ಬಳ್ಳಿ - ಧಾರವಾಡ ಪೊಲೀಸ್ ಕಮಿಷನರೇಟ್ ನಿಷೇಧಾಜ್ಞೆ ಜಾರಿ ಮಾಡಿದೆ. ಆಸಾರ ಓಣಿಯಿಂದ (ಹೊಂಡ) ಸುತ್ತಮುತ್ತಲಿನ 500 ಮೀಟರ್ ವ್ಯಾಪ್ತಿ ಪ್ರದೇಶದಲ್ಲಿ ಶನಿವಾರ ಬೆಳಗ್ಗೆ 6 ರಿಂದ ರಾತ್ರಿ 10 ಗಂಟೆಯವರೆಗೆ ನಿಷೇಧಾಜ್ಞೆ ಜಾರಿಯಲ್ಲಿ ಇರಲಿದೆ. ಈ ಅವಧಿಯಲ್ಲಿ ನಿಷೇಧಿತ ಪ್ರದೇಶದಲ್ಲಿ ಸಾರ್ವಜನಿಕರು ಗುಂಪು ಸೇರುವುದು, ಗುಂಪಾಗಿ ತಿರುಗಾಡುವುದು, ನಿಷೇಧಿತ ವಸ್ತುಗಳನ್ನು ತೆಗೆದುಕೊಂಡು ಓಡಾಡುವುದು, ಘೋಷಣೆಗಳನ್ನು ಕೂಗುವುದನ್ನು ನಿರ್ಬಂಧಿಸಲಾಗಿದೆ. ನಿಯಮಗಳನ್ನು ಉಲ್ಲಂಘನೆ ಮಾಡಿದಲ್ಲಿ ಸೂಕ್ತ ಕಾನೂನು ಕ್ರಮ ಕೈಕೊಳ್ಳಲಾಗುವುದು ಕಮಿಷನರೇಟ್ ಎಚ್ಚರಿಕೆ ನೀಡಿದೆ. ಪೊಲೀಸ್ ಆದೇಶ ಧಿಕ್ಕರಿಸಿ ಪ್ರತಿಭಟನೆ ನಡೆಸಿದ ಹಿಂದೂ ಕಾರ್ಯಕರ್ಯರು ಜನಪ್ರತಿನಿಧಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದು ಪರಿಸ್ಥಿತಿ ಶಾಂತವಾಗಿದೆ.

## ಬಿಸಿಯೂಟದಲ್ಲಿ ಹಲ್ಲಿ ಪತ್ತೆ, ನೂರಕ್ಕೂ ಹೆಚ್ಚು ಮಕ್ಕಳು ಆಸ್ಪತ್ರೆಗೆ ದಾಖಲು

• ಉದಯವಾಹಿನಿ ಗದಗ:

ಶಾಲೆಯಲ್ಲಿ ಬೆಳಗಿನ ಉಪಾಹಾರವಾಗಿ ನೀಡಿದ್ದ ಉಪ್ಪಿಟ್ಟಿನಲ್ಲಿ ಹಲ್ಲಿ ಪತ್ತೆಯಾದ ಹಿನ್ನೆಲೆಯಲ್ಲಿ ನೂರಕ್ಕೂ ಹೆಚ್ಚು ಸರ್ಕಾರಿ ಶಾಲಾ ಮಕ್ಕಳು ಆಸ್ಪತ್ರೆಗೆ ದಾಖಲಾದ ಘಟನೆ ಮುಂಡರಗಿ ತಾಲ್ಲೂಕಿನ ಬೀಡನಾಳ ಗ್ರಾಮದಲ್ಲಿ ನಡೆದಿದೆ.

ಬೀಡನಾಳ ಗ್ರಾಮದ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಬೆಳಗ್ಗೆ ಮಕ್ಕಳಿಗೆ ಉಪ್ಪಿಟ್ಟು ನೀಡಲಾಗಿತ್ತು. ಶಾಲೆಯಲ್ಲಿದ್ದ ಬಹುತೇಕ ಮಕ್ಕಳು ಉಪ್ಪಿಟ್ಟು ಸೇವಿಸಿದ ಬಳಿಕ, ಆಹಾರದಲ್ಲಿ ಹಲ್ಲಿ ಬಿದ್ದಿರುವುದು ಗಮನಕ್ಕೆ ಬಂದಿದೆ ಎನ್ನಲಾಗಿದೆ. ವಿಷಯ ತಿಳಿಯುತ್ತಿದ್ದಂತೆ ಮಕ್ಕಳು ಹಾಗೂ ಶಿಕ್ಷಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

**ಮಕ್ಕಳನ್ನು ತಕ್ಷಣವೇ ಆಸ್ಪತ್ರೆಗೆ ಸೇರಿಸಿದ ಎಸ್‌ಡಿಎಂಸಿ:** ಘಟನೆ ತಿಳಿಯುತ್ತಿದ್ದಂತೆ ಗ್ರಾಮಸ್ಥರು ಹಾಗೂ ಶಾಲಾ ಆಡಳಿತ ಮಂಡಳಿ ಸದಸ್ಯರು ಮಕ್ಕಳನ್ನು ತಕ್ಷಣವೇ ಮುಂಡರಗಿ ತಾಲೂಕು ಆಸ್ಪತ್ರೆಗೆ ಕರೆತಂದರು. ನೂರಕ್ಕೂ ಹೆಚ್ಚು ಮಕ್ಕಳನ್ನು ಆಸ್ಪತ್ರೆಗೆ ಕರೆತಂದು ವೈದ್ಯರಿಂದ ತಪಾಸಣೆ ಹಾಗೂ ಪ್ರಾಥಮಿಕ ಚಿಕಿತ್ಸೆ ಕೊಡಿಸಲಾಯಿತು. ಉಪ್ಪಿಟ್ಟು ಸೇವಿಸಿದ ಬಳಿಕ ನಾಲ್ಕೈದು ಮಕ್ಕಳಿಗೆ ವಾಂತಿ ಕಾಣಿಸಿಕೊಂಡಿದೆ ಎನ್ನಲಾಗಿದ್ದು, ಉಳಿದ ಮಕ್ಕಳ ಆರೋಗ್ಯದ ಸ್ಥಿತಿಯನ್ನೂ ಸಹ ಪರಿಶೀಲಿಸಲಾಯಿತು. ಸದ್ಯ ಯಾವುದೇ ಮಗುವಿಗೆ ಗಂಭೀರ ಸಮಸ್ಯೆ ಕಂಡುಬಂದಿಲ್ಲ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ.

**ಸುದ್ದಿ ತಿಳಿದು ಆಸ್ಪತ್ರೆಗೆ ಆಗಮಿಸಿದ ಪೋಷಕರು:** ಘಟನೆ ಸುದ್ದಿ ಹರಡುತ್ತಿದ್ದಂತೆ ಪೋಷಕರು ಹಾಗೂ ಗ್ರಾಮಸ್ಥರು ಆತಂಕದಿಂದ ಆಸ್ಪತ್ರೆಗೆ ಆಗಮಿಸಿ ಮಕ್ಕಳ ಆರೋಗ್ಯದ ಕುರಿತು ಮಾಹಿತಿ ಪಡೆದುಕೊಂಡರು. ಆಸ್ಪತ್ರೆ ಆವರಣದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು.

**ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಶಿಕ್ಷಣಾಧಿಕಾರಿಗಳು:** ವಿಷಯ ತಿಳಿದು ತಾಲ್ಲೂಕು ಶಿಕ್ಷಣಾಧಿಕಾರಿ, ಸಿಪಿಐ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಶಾಲೆ ಹಾಗೂ ಆಸ್ಪತ್ರೆಗೆ ತೆರಳಿ ಪರಿಶೀಲನೆ ನಡೆಸಿದರು. ಮಕ್ಕಳ ಆರೋಗ್ಯದ ಕುರಿತು ವೈದ್ಯರಿಂದ ಮಾಹಿತಿ ಪಡೆದುಕೊಂಡ ಅಧಿಕಾರಿಗಳು, ಬಿಸಿಯೂಟದ ಆಹಾರ ಹಾಗೂ ಘಟನೆಯ ಹಿನ್ನೆಲೆಯ ಬಗ್ಗೆಯೂ ಮಾಹಿತಿ ಕಲೆಹಾಕಿದರು. ಆಹಾರದಲ್ಲಿ ಹಲ್ಲಿ ಬಿದ್ದಿರುವುದು ಹೇಗೆ ಸಂಭವಿಸಿತು, ಆಹಾರ ತಯಾರಿಕೆ ಹಾಗೂ ವಿತರಣೆಯ ವೇಳೆ ಮೇಲ್ವಿಚಾರಣೆ ಹೇಗಿತ್ತು ಎಂಬುದರ ಕುರಿತು ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲನೆ ನಡೆಸುತ್ತಿದ್ದಾರೆ.

## ನಗನೂರ ಸರ್ಕಾರಿ ಆಸ್ಪತ್ರೆ ಜಮೀನು ಅಕ್ರಮ ಒತ್ತುವರಿ ಯತ್ನ ತಂತಿಬೇಲಿ ತೆರವುಗೊಳಿಸಲು ಗ್ರಾಮಸ್ಥರ ಉಗ್ರ ಆಗ್ರಹ

• ಉದಯವಾಹಿನಿ ಕೆಂಭಾವಿ:

ಸಮೀಪದ ನಗನೂರ ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಜಮೀನನ್ನು ಖಾಸಗಿ ವ್ಯಕ್ತಿಗಳು ಅಕ್ರಮವಾಗಿ ಒತ್ತುವರಿ ಮಾಡಲು ಯತ್ನಿಸಿರುವ ಘಟನೆ ಬೆಳಕಿಗೆ ಬಂದಿದೆ. ಆಸ್ಪತ್ರೆಯ ಆವರಣದಲ್ಲಿ ಅನಧಿಕೃತವಾಗಿ ತಂತಿಬೇಲಿ ಅಳವಡಿಸಲಾಗಿದ್ದು, ತಕ್ಷಣವೇ ಅದನ್ನು ತೆರವುಗೊಳಿಸಿ ಸರ್ಕಾರಿ ಆಸ್ತಿಯನ್ನು ರಕ್ಷಿಸುವಂತೆ ಗ್ರಾಮಸ್ಥರು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಮನವಿ ಸಲ್ಲಿಸಿ ಕಟ್ಟುನಿಟ್ಟಿನ ಒತ್ತಾಯ ಮಾಡಿದ್ದಾರೆ.

**50 ವರ್ಷಗಳ ಇತಿಹಾಸವಿರುವ ದಾನದ ಜಮೀನಿಗೆ ಕನ್ನ!**

ಸುಮಾರು 50 ವರ್ಷಗಳ ಹಿಂದೆ ನಗನೂರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕಾಗಿ 4 ಎಕರೆ 07 ಗುಂಟೆ ಜಮೀನನ್ನು ದಾನವಾಗಿ ನೀಡಲಾಗಿತ್ತು. ಪ್ರಸ್ತುತ ಈ ಸಂಪೂರ್ಣ ಜಮೀನು ಆರೋಗ್ಯ ಇಲಾಖೆಯ ಪಹಣಿಯಲ್ಲೇ (ಆರ್‌ಟಿಸಿ) ನೋಂದಾಯಿತವಾಗಿದೆ. ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಸರ್ಕಾರವು ಇಲ್ಲಿ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆಸ್ಪತ್ರೆ, ಸಿಬ್ಬಂದಿಗಳ ವಸತಿ ನಿಲಯ ಹಾಗೂ ಸಿಸಿ ರಸ್ತೆ ಸೇರಿದಂತೆ ಸುಮಾರು 5 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಪ್ರಗತಿಯಲ್ಲಿಟ್ಟಿದೆ.


ಉದಯವಾಹಿನಿ ಚಿತ್ರ

**ಆಂಬುಲೆನ್ಸ್ ಸಂಚಾರಕ್ಕೂ ತಡೆ: ಹೆದರದ ಪ್ರಭಾವಿಗಳು**

ಇಷ್ಟೊಂದು ಬೃಹತ್ ಮಟ್ಟದ ಸರ್ಕಾರಿ ಆರೋಗ್ಯ ಸಂಕೀರ್ಣದ ಆವರಣದಲ್ಲಿ ಯಾವುದೇ ಅಧಿಕೃತ ಆದೇಶ ಅಥವಾ ಅನುಮತಿಯಿಲ್ಲದೆ, ಪ್ರಭಾವಿಗಳು ತಮ್ಮ ಬಾಹ್ಯಬಲ ಬಳಸಿ ಅಕ್ರಮವಾಗಿ ತಂತಿಬೇಲಿ ನಿರ್ಮಿಸಿದ್ದಾರೆ.

ಆಸ್ಪತ್ರೆಯ ಆವರಣ ತೀವ್ರವಾಗಿ ಕಿರಿದಾಗಿದೆ. ತುರ್ತು ಸಂದರ್ಭಗಳಲ್ಲಿ ಆಂಬುಲೆನ್ಸ್ ವಾಹನಗಳ ಓಡಾಟಕ್ಕೆ ತೀವ್ರ ಅಡಚಣೆ ಉಂಟಾಗುತ್ತಿದೆ. ಜಿಲ್ಲಾಡಳಿತ ತಕ್ಷಣವೇ ಜಾಗೃತನಾಗದಿದ್ದರೆ, ಮುಂದಿನ ದಿನಗಳಲ್ಲಿ ಈ ಆಸ್ಪತ್ರೆಗೆ ಸ್ವಂತ ಆವರಣವೇ ಇಲ್ಲದಂತಾಗುವ ಭೀತಿ ಎದುರಾಗಿದೆ.

**ಆರೋಗ್ಯ ಸಚಿವರಿಗೆ ಇಮೇಲ್, ಅಂಚೆ ಮೂಲಕ ಮನವಿ**

> ಈ ಗಂಭೀರ ಸಮಸ್ಯೆಯ ಕುರಿತು ತಕ್ಷಣವೇ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಗ್ರಾಮಸ್ಥರು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸಚಿವರಾದ ಯು. ಟಿ. ಖಾದರ್ ಅವರಿಗೆ ಇಮೇಲ್ ಹಾಗೂ ಪೋಸ್ಟ್ (ಅಂಚೆ) ಮೂಲಕ ಅಧಿಕೃತವಾಗಿ ಮನವಿ ಪತ್ರ ರವಾನಿಸಿದ್ದಾರೆ.

**ತಕ್ಷಣದ ಕ್ರಮಕ್ಕೆ ಗ್ರಾಮಸ್ಥರ ಆಗ್ರಹ**

ಕೂಡಲೇ ಜಿಲ್ಲಾಡಳಿತ ಹಾಗೂ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ನಗನೂರ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಹಾಕಲಾಗಿರುವ ಅನಧಿಕೃತ ತಂತಿಬೇಲಿಯನ್ನು ತಕ್ಷಣವೇ ತೆರವುಗೊಳಿಸಿ, ಈ ಕೃತ್ಯದಲ್ಲಿ ನೇರವಾಗಿ ಭಾಗಿಯಾಗಿರುವ ಪ್ರಭಾವಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಗ್ರಾಮದ ಪ್ರಮುಖರಾದ ಶರಣಪ್ಪ ದೇಸಾಯಿ, ಶಂಕ್ರಗೌಡ ಪಾಟೀಲ್, ಕಾಂತರಡ್ಡಿ ಕುದರಿ ಅವರು ಗ್ರಾಮಸ್ಥರ ಪರವಾಗಿ ಜಿಲ್ಲಾಧಿಕಾರಿಗಳು, ಡಿ ಎಚ್ ಒ ಮತ್ತು ಸಚಿವರಿಗೆ ತೀವ್ರವಾಗಿ ಒತ್ತಾಯಿಸಿದ್ದಾರೆ.

## ಬರದಲ್ಲೂ ಅರಳಿದ ಚೆಂಡು ಹೂ! 2 ಎಕರೆಯಲ್ಲಿ ಬೆಳೆ – ಉತ್ತಮ ಬೆಲೆ, ಲಾಭ

• ಉದಯವಾಹಿನಿ ಮುಧೋಳ:

ಈ ಬಾರಿ ಮುಂಗಾರು ಕೈಕೊಟ್ಟಿದ್ದರಿಂದ ಬರದ ಛಾಯೆ ಆವರಿಸಿದ ಹೊಲದಲ್ಲಿ ಬೆಳೆದ ಬೆಳೆಗಳೆಲ್ಲ ಬಾಡಿ ಹೋಗಿ ರೈತರು ಕೈಚೆಲ್ಲಿ ಕುಳಿತಿದ್ದಾರೆ. ಆದರೆ, ಈ ಅನ್ನದಾತ ಮಾತ್ರ ಬೋರ್‌ವೆಲ್‌ನಲ್ಲಿ ಲಭ್ಯ ಇರುವ ಕಡಿಮೆ ನೀರಿನಲ್ಲೇ ಹನಿ ನೀರಾವರಿ ಪದ್ಧತಿ ಅಳವಡಿಸಿಕೊಂಡು ಇಡೀ ಹೊಲದಲ್ಲಿ ಚೆಂಡು ಹೂ ಬೆಳೆಯುವಂತೆ ಮಾಡಿದ್ದಾರೆ.

ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಕಿಸೋರಿ ಗ್ರಾಮದ ರೈತ ಗೋವಿಂದಪ್ಪ ವಳಸಾನೂರ 2.5 ಎಕರೆಯಲ್ಲಿ ಹಳದಿ ಬಣ್ಣದ ಚೆಂಡು ಹೂ ಬೆಳೆದು ಗಮನಸೆಳೆಯುವುದರ ಜೊತೆಗೆ ರಾಜ್ಯ ಹಾಗೂ ಅಂತಾರಾಜ್ಯದಲ್ಲೂ ತನ್ನ ಹೆಸರಿಗೆ ಡಿಮಾಂಡ್ ಸೃಷ್ಟಿಸಿಕೊಂಡಿದ್ದಾರೆ.

ಪ್ರಗತಿಪರ ರೈತ ಎನಿಸಿದ ಗೋವಿಂದಪ್ಪ ವಳಸಾನೂರ ಒಟ್ಟು 10 ಎಕರೆ ಜಮೀನು ಹೊಂದಿದ್ದು, ಅದರಲ್ಲಿ 2.5 ಎಕರೆಯಲ್ಲಿ ಹಳದಿ ಚೆಂಡು ಹೂವು ಬೆಳೆದಿದ್ದಾರೆ. ಈ ಬಾರಿ ಮುಂಗಾರು ಸಂಪೂರ್ಣ ಕೈಕೊಟ್ಟಿದ್ದರಿಂದ ಹೂವು ಎಲ್ಲಿ ಬಾಡಿ ಹೋಗುತ್ತದೆ ಎಂಬ ಆತಂಕದ ಅವರಿಗೆ ಆರಂಭದಲ್ಲಿ ಕಾಡಿತ್ತು. ಆದರೆ, ಉತ್ತಮ ಬೆಳೆ ಬಂದು ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆತಿದೆ.


ಉದಯವಾಹಿನಿ ಚಿತ್ರ

**ಶ್ರಮಕ್ಕೆ ಉತ್ತಮ ಪ್ರತಿಫಲ**

ರಾಜ್ಯ ಹಾಗೂ ಅಂತಾರಾಜ್ಯ ಮಾರುಕಟ್ಟೆಯಲ್ಲಿ ಇವರು ಚೆಂಡು ಹೂ ಮಾರಾಟ ಮಾಡುತ್ತಾರೆ. ಮಹಾರಾಷ್ಟ್ರದಲ್ಲಿ ಕೆಜಿಗೆ 50 ರಿಂದ 90 ರೂ. ವರೆಗೆ ಇವರ ಹೂಗೆ ಬೆಲೆ ದೊರೆಯುತ್ತಿದೆ.

**ಹನಿ ನೀರಾವರಿ ಪದ್ಧತಿ**

> 18 ಬಾರಿ ಕಟಾವು ಅವಕಾಶವಿದೆ
> 1.20 ಲಕ್ಷ ರೂ.ಖರ್ಚು ಮಾಡುವುದರ ಜೊತೆಗೆ ಬೆವರು ಸುರಿಸಿ ಬೆಳೆದ ಚೆಂಡು ಹೂಳಿಗೆ ಉತ್ತಮ ಇಳುವರಿಯ ಜೊತೆಗೆ ಲಾಭವೂ ಬರುತ್ತದೆ. ಈ ವರೆಗೆ ಎರಡು ಬಾರಿ ಕಟಾವು ಮಾಡಲಾಗಿದೆ. ಇನ್ನು 18 ಬಾರಿ ಕಟಾವು ಮಾಡಲು ಅವಕಾಶ ಇದೆ, ಎನ್ನುತ್ತಾರೆ. -ರೈತ

ಈ ಬಾರಿ ಮುಂಗಾರು ಕೈಕೊಟ್ಟಿದ್ದರಿಂದ ಎಲ್ಲೆಡೆ ವರಳು ಕವಿದು ಆತಂಕದ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆಯಾಶ್ರಿತ ಹಲವು ರೈತರು ಬೆಳೆ ಇಲ್ಲದೆ ಕಂಗಾಲಾಗಿದ್ದಾರೆ. ನಮಗೂ ದಿಗಿಲು ಆತಂಕ ಇತ್ತು. ಬೋರ್‌ವೆಲ್‌ಗಳಲ್ಲಿರುವ ಲಭ್ಯ ಇರುವ ನೀರನ್ನು ಹನಿ ನೀರಾವರಿ ಪದ್ಧತಿ ಮೂಲಕ ಚೆಂಡು ಹೂವನ್ನು ಉತ್ತಮವಾಗಿ ಬೆಳೆದಿದ್ದೇನೆ. ಕಟಾವು ಮಾಡಿ ಮಾರುಕಟ್ಟೆಗೆ ತೆಗೆದುಕೊಂಡು ಹೋಗುತ್ತಿದ್ದು, ಉತ್ತಮ ಬೆಲೆ ಬರುತ್ತಿದೆ ಎಂದು ಗೋವಿಂದಪ್ಪ ತಿಳಿಸಿದ್ದಾರೆ.

## ತಪ್ಪಿತಸ್ಥರ ವಿರುದ್ಧ ಮೊದಲೇ ಎಫ್‌ಐಆರ್ ದಾಖಲಿಸಬೇಕಿತ್ತು

• ಉದಯವಾಹಿನಿ ಕಲಬುರಗಿ,


ಉದಯವಾಹಿನಿ ಚಿತ್ರ

ದಿಲ್ಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಅವರು ಪೆಲೆಟ್ ಗನ್ ದಾಳಿಯಿಂದ ಗಾಯಗೊಂಡ ವಿದ್ಯಾರ್ಥಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ಧರಣಿ ನಡೆನಡೆಸುತ್ತಿರುವುದನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಮರ್ಥಿಸಿಕೊಂಡಿದ್ದಾರೆ. ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆಲೆಟ್ ಗನ್ ದಾಳಿಯಿಂದ ವಿದ್ಯಾರ್ಥಿಯೊಬ್ಬ ಗಂಭೀರವಾಗಿ ಗಾಯಗೊಂಡಿದ್ದಾನೆ. ಘಟನೆಗೆ ಸಂಬಂಧಿಸಿದಂತೆ ಪೆಲೆಟ್ ಗನ್ ಬಳಸಿದವರ ವಿರುದ್ಧ ಮೊದಲೇ ಎಫ್‌ಐಆರ್ ದಾಖಲಿಸಬೇಕಿತ್ತು. ಆದರೆ, ಇದೀಗ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದೆ. ಯಾವುದೇ ಘಟನೆ ಆದಾಗ, ದೂರು ಬಂದಾಗ ಸರ್ಕಾರ ಪ್ರಕರಣ ದಾಖಲಿಸಿಕೊಳ್ಳಬೇಕು. ತಡವಾಗಿ ಪ್ರಕರಣ ದಾಖಲಿಸಿಕೊಂಡಿರುವುದು ಸರಿಯಲ್ಲ ಎಂದರು.

ವಂದೇ ಮಾತರಂ'ನ ಎರಡು ಚರಣಗಳನ್ನು ಹಾಡುವ ವಿಚಾರವಾಗಿ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಖರ್ಗೆ, ಈ ಕುರಿತು ತಾನು ಈಗಾಗಲೇ ಸ್ಪಷ್ಟವಾಗಿ ಹೇಳಿದ್ದೇನೆ. ನೀವು ಹಿಂದಿನ ಇತಿಹಾಸ ಒಮ್ಮೆ ತಗೆದು ನೋಡಿ ಇಷ್ಟು ವರ್ಷದ ಬಳಿಕ ಈಗೆ ಯಾಕೆ ಅದರ ಬಗ್ಗೆ ಮಾತಾಡುತ್ತಿದ್ದೀರಿ. ಮೊದಿಯವರು ಪ್ರಧಾನಿಯಾಗಿ 12 ವರ್ಷ ಆಗಿದೆ. ಅಮಿತ್ ಷಾ ಅವರಿಗೆ ಈಗ ದೇಶ ಭಕ್ತಿ ಶುರುವಾಗಿದೆ. ದೇಶಕ್ಕಾಗಿ ಸ್ವಾತಂತ್ರ್ಯ ತಂದವರ ಬಗ್ಗೆ ಅಪಮಾನ ಮಾಡ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ನೈಋತ್ಯ ವಲಯಕ್ಕೆ ಮಂಗಳೂರು ರೈಲ್ವೆ ಸೇರ್ಪಡೆ: ಕೇರಳದ ಹಿಡಿತದಿಂದ ಮುಕ್ತಿ!

### ಮಂಗಳೂರು ರೈಲ್ವೆ ಜಾಲ ನೈಋತ್ಯ ವಲಯ ಮೈಸೂರು ವಿಭಾಗಕ್ಕೆ ಸೇರ್ಪಡೆ ಮಾಡುವ ಮೂಲಕ ಬಹುದಿನಗಳ ಬೇಡಿಕೆ ಈಡೇರಿಸಿದೆ.

• ಉದಯವಾಹಿನಿ ಮಂಗಳೂರು:

ಕರಾವಳಿ ಕರ್ನಾಟಕದ ರೈಲ್ವೆ ಇತಿಹಾಸದಲ್ಲೇ ಮಹತ್ವದ ಬದಲಾವಣೆಗೆ ರೈಲ್ವೆ ಸಚಿವಾಲಯ ಮುನ್ನುಡಿ ಬರೆದಿದೆ. ಎರಡು ದಶಕಗಳಿಗೂ ಹೆಚ್ಚು ಕಾಲದಿಂದ ಕನ್ನಡಿಗರು ನಡೆಸಿಕೊಂಡು ಬಂದ ನಿರಂತರ ಹೋರಾಟಕ್ಕೆ ಕೊನೆಗೂ ಜಯ ಸಿಕ್ಕಿದೆ. ದಕ್ಷಿಣ ರೈಲ್ವೆ ವಲಯದ ಕೇರಳ ಮೂಲದ ಪಾಲಕ್ಕಾಡ್ ವಿಭಾಗದ ವ್ಯಾಪ್ತಿಯಲ್ಲಿದ್ದ ಮಂಗಳೂರು ರೈಲ್ವೆ ಜಾಲವನ್ನು ರಾಜ್ಯದ ನೈಋತ್ಯ ರೈಲ್ವೆ ವಲಯದ ಮೈಸೂರು ವಿಭಾಗಕ್ಕೆ ಸೇರ್ಪಡೆಗೊಳಿಸಿ ರೈಲ್ವೆ ಮಂಡಳಿ ಅಧಿಕೃತ ಆದೇಶ ಪ್ರಕಟಿಸಿದೆ.

1 : ಸಿಗಲಿರುವ ಪ್ರಮುಖ ಪ್ರಯೋಜನಗಳು
2 : ಮಂಡಳಿಯ ಅಧಿಕೃತ ಆದೇಶದಲ್ಲೇನಿದೆ
3 : ಮೂಲಸೌಕರ್ಯ ಯೋಜನೆಗಳಿಗೆ ವೇಗ

ಕೇಂದ್ರ ರೈಲ್ವೆ ಮಂಡಳಿಯ ಈ ತೀರ್ಮಾನವು 2026 ರ ಅಕ್ಟೋಬರ್ 1 ರಿಂದ ಅಧಿಕೃತವಾಗಿ ಜಾರಿಗೆ ಬರಲಿದೆ.

ಇದರಿಂದ ಕರಾವಳಿ ಭಾಗಕ್ಕೆ, ಪ್ರಯಾಣಿಕರಿಗೆ ಹಾಗೂ ರಾಜ್ಯದ ಒಟ್ಟಾರೆ ಆರ್ಥಿಕ ಪ್ರಗತಿಗೆ ಸಮಗ್ರ ಲಾಭಗಳು ಸಿಗಲಿದೆ. ಕೇಂದ್ರ ರೈಲ್ವೆ ಮಂಡಳಿಯ ಕಾರ್ಯನಿರ್ವಾಹಕ ನಿರ್ದೇಶಕ ದಿನೇಶ್ ಕುಮಾರ್ ವಶಿಷ್ಠ ಅವರು ಹೊರಡಿಸಿರುವ ಆದೇಶದ ಮುಖ್ಯಾಂಶಗಳು ಹೀಗಿವೆ.

**ಉಳ್ಳಾಲದವರೆಗೆ ಮೈಸೂರು ವಿಭಾಗಕ್ಕೆ ಹಸ್ತಾಂತರ:** ಮಂಗಳೂರು ರೈಲ್ವೆ ಪ್ರದೇಶದಿಂದ ಹಿಡಿದು ಉಳ್ಳಾಲ ರೈಲ್ವೆ ನಿಲ್ದಾಣದವರೆಗಿನ (ಉಳ್ಳಾಲ ನಿಲ್ದಾಣವೂ ಸೇರಿದಂತೆ) ಸಂಪೂರ್ಣ ಜಾಲವನ್ನು ಪಾಲಕ್ಕಾಡ್ ವಿಭಾಗದಿಂದ ನೈಋತ್ಯ ರೈಲ್ವೆಯ ಮೈಸೂರು ವಿಭಾಗಕ್ಕೆ ಅಧಿಕೃತವಾಗಿ ಹಸ್ತಾಂತರಿಸಲಾಗಿದೆ. ಈ ಹಿಂದೆ ಪಡೀಲ್‌ನಲ್ಲಿದ್ದ ನೈಋತ್ಯ ರೈಲ್ವೆ ಮತ್ತು ದಕ್ಷಿಣ ರೈಲ್ವೆ ನಡುವಿನ ಇಂಟರ್‌ಚೇಂಜ್ ಪಾಯಿಂಟ್ ಇನ್ನು ಮುಂದೆ ಉಳ್ಳಾಲಕ್ಕೆ ಸ್ಥಳಾಂತರಗೊಳ್ಳಲಿದೆ.



ಉದಯವಾಹಿನಿ ಚಿತ್ರ

> ಮಂಗಳೂರು ಸೆಂಟ್ರಲ್‌ನಲ್ಲಿ ಪ್ಲಾಟ್‌ಫಾರ್ಮ್ ಖಾಲಿ ಇಲ್ಲ ಎಂಬ ನೆಪವೊಡ್ಡಿ ನಮ್ಮ ರೈಲುಗಳನ್ನು ಮಂಗಳೂರು ಜಂಕ್ಷನ್‌ಗೆ ಸೀಮಿತಗೊಳಿಸಿ, ಕೇರಳಕ್ಕೆ ತೆರಳುವ ರೈಲುಗಳಿಗೆ ಮಾತ್ರ ಸೆಂಟ್ರಲ್‌ನಲ್ಲಿ ಆದ್ಯತೆ ನೀಡಲಾಗುತ್ತಿತ್ತು. ಈಗ ನೇರವಾಗಿ ಮೈಸೂರು ವಿಭಾಗದ ಸುಪರ್ದಿಗೆ ಬಂದಿರುವುದರಿಂದ ಈ ತಾರತಮ್ಯಕ್ಕೆ ಸಂಪೂರ್ಣ ತೆರೆ ಬೀಳಲಿದೆ ಎಂದು ಹೇಳುತ್ತಾರೆ.
> -ಹನುಮಂತ ಕಾಮತ್

**ತೋಕೂರು ನಿಲ್ದಾಣ ಕೊಂಕಣ ರೈಲ್ವೆಯಲ್ಲೇ ಮುಂದುವರಿಕೆ:** ತೋಕೂರು ರೈಲ್ವೆ ನಿಲ್ದಾಣವು ಮೊದಲಿನಂತೆಯೇ ಕೊಂಕಣ ರೈಲ್ವೆ ನಿಗಮದ ವ್ಯಾಪ್ತಿಯಲ್ಲೇ ಉಳಿಯಲಿದ್ದು, ಕೊಂಕಣ ರೈಲ್ವೆ ಮತ್ತು ನೈಋತ್ಯ ರೈಲ್ವೆ ನಡುವಿನ ಇಂಟರ್‌ಚೇಂಜ್ ಪಾಯಿಂಟ್ ಆಗಿ ಕಾರ್ಯನಿರ್ವಹಿಸಲಿದೆ. ಗೆಜೆಟೆಡ್ ಅಧಿಕಾರಿಗಳ ವರ್ಗಾವಣೆ ನಿಯಮಾನುಸಾರ ನಡೆಯಲಿದ್ದು, ನಾನ್ - ಗೆಜೆಟೆಡ್ ಸಿಬ್ಬಂದಿಗೆ ದಕ್ಷಿಣ ರೈಲ್ವೆಯಲ್ಲೇ ಉಳಿಯಲು ಅಥವಾ ನೈಋತ್ಯ ರೈಲ್ವೆಗೆ ಬದಲಾಗಲು ಮುಕ್ತ ಆಯ್ಕೆ ನೀಡಲಾಗುತ್ತದೆ.

ಮಂಗಳೂರು ಸೆಂಟ್ರಲ್ ಮತ್ತು ಮಂಗಳೂರು ಜಂಕ್ಷನ್ ನಿಲ್ದಾಣಗಳು ಕೇರಳದ ಪಾಲಕ್ಕಾಡ್ ವಿಭಾಗದ ಆಡಳಿತದಲ್ಲಿದ್ದ ಕಾರಣ, ಕರ್ನಾಟಕದ ಕರಾವಳಿಗೆ ಹೊಸ ರೈಲುಗಳನ್ನು ಮಂಜೂರು ಮಾಡಲು ಹಿಂದೇಟು ಹಾಕಲಾಗುತ್ತಿತ್ತು.

> ಮಂಗಳೂರು, ಉಳ್ಳಾಲ, ತೊಕ್ಕೊಟ್ಟು ಮತ್ತು ಫರಂಗಿಪೇಟೆ ವ್ಯಾಪ್ತಿಯಲ್ಲಿ ಮಂಜೂರಾಗಿದ್ದರೂ ನೆನೆಗುದಿಗೆ ಬಿದ್ದಿದ್ದ ರೈಲ್ವೆ ಅಂಡರ್‌ಪಾಸ್‌ಗಳು, ಮೇಲ್ಸೇತುವೆಗಳು, ಪ್ಲಾಟ್‌ಫಾರ್ಮ್ ವಿಸ್ತರಣೆ ಹಾಗೂ ಪಿಟ್‌ಲೈನ್‌ಗಳ ನಿರ್ಮಾಣ ಕಾಮಗಾರಿಗಳು ಇನ್ನು ಮುಂದೆ ತ್ವರಿತವಾಗಿ ಅನುಮೋದನೆ ಪಡೆದು ಕಾರ್ಯರೂಪಕ್ಕೆ ಬರಲಿವೆ.

ಸ್ಥಳೀಯ ಮಟ್ಟದಲ್ಲಿ ಗ್ರಾಮ ಪಂಚಾಯತ್ ಸದಸ್ಯರಿಂದ ಹಿಡಿದು ಶಾಸಕರು, ಸಂಸದರು ರೈಲ್ವೆ ಸಮಸ್ಯೆಗಳ ಬಗ್ಗೆ ಚರ್ಚಿಸಲು ಕೇರಳದ ಪಾಲಕ್ಕಾಡ್‌ಗೆ ತೆರಳುವ ಅನಿವಾರ್ಯತೆ ಇತ್ತು. ಜೊತೆಗೆ ಟಿಕೆಟ್ ಕೌಂಟರ್, ಕ್ಯಾಂಟೀನ್‌ಗಳಿಂದ ಹಿಡಿದು ಕಚೇರಿಗಳಲ್ಲಿ ಮಲಯಾಳಂ ಪ್ರಾಬಲ್ಯವಿದ್ದು, ಭಾಷಾ ಸಂವಹನ ದೊಡ್ಡ ತೊಡಕಾಗಿತ್ತು. ಇನ್ನು ಮುಂದೆ ಮೈಸೂರು ವಿಭಾಗದೊಂದಿಗೆ ಕನ್ನಡದಲ್ಲೇ ವ್ಯವಹರಿಸಿ, ಸ್ಥಳೀಯರ ಕುಂದುಕೊರತೆಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಲು ಸಾಧ್ಯವಾಗಲಿದೆ.

ನವ ಮಂಗಳೂರು ಬಂದರು, ಬೃಹತ್ ಕೈಗಾರಿಕೆಗಳು ಹಾಗೂ ಗಣಿಗಾರಿಕೆ ಸರಕು ಸಾಗಣೆಯಿಂದ ಉತ್ಪತ್ತಿಯಾಗುವ ಕೋಟ್ಯಂತರ ರೂಪಾಯಿ ಸರಕು ಸಾಗಣೆ ಆದಾಯವು ಕರ್ನಾಟಕದ ನೈಋತ್ಯ ವಲಯದ ಪಾಲಾಗಲಿದೆ. ಇದು ರಾಜ್ಯದ ಬೊಕ್ಕಸಕ್ಕೆ ಆದಾಯ ಹೆಚ್ಚಿಸುವುದರ ಜೊತೆಗೆ ಸ್ಥಳೀಯವಾಗಿ ವ್ಯಾಪಾರ ಮತ್ತು ಉದ್ಯೋಗಾವಕಾಶಗಳಿಗೆ ಬಲ ತುಂಬಲಿದೆ.